ಸಂಪುಟ: 14 Volume ಸಂಚಿಕೆ: 95 Issue ಪುಟಗಳು 08 Pages ಶನಿವಾರ 18 ಜುಲೈ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಅದೃಷ್ಟ ವೆನ್ನುವುದು ಪ್ರಯತ್ನವೆಂಬ ತಾಯಿಗೆ, ಅವಕಾಶವೆಂಬ ತಂದೆಗೆ ಜನಿಸುವ ಮಗು.

–ಗುರುನಾನಕ್

## ಮೊಸಳೆ ಕಣ್ಣೀರು ಸುರಿಸಿ ರೈತರ ಹೆಸರಲ್ಲಿ ಬಿಜೆಪಿ ರಾಜಕೀಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಧಿಕಾರದಲ್ಲಿದ್ದಾಗ ಭೂಸ್ವಾಧೀನ, ವಿರೋಧ ಪಕ್ಷದಲ್ಲಿದ್ದಾಗ ಮೊಸಳೆ ಕಣ್ಣೀರು ಸುರಿಸಿ ರೈತರ ಹೆಸರಲ್ಲಿ ರಾಜಕೀಯ ಮಾಡುವ ಬಿಜೆಪಿ ನಾಯಕರು 'ಡ್ರಾಮಾ ಮಾಸ್ಟರ್ಸ್'. 2006ರಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಸರ್ಕಾರವಿದ್ದಾಗ, ಅಂದಿನ ಮುಖ್ಯಮಂತ್ರಿ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಉಪಮುಖ್ಯಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲೇ ಬಿಡದಿ ಸೇರಿದಂತೆ 5 ಸಮಗ್ರ ಟೌನ್‌ಶಿಪ್‌ಗಳ ಅಭಿವೃದ್ಧಿಗೆ ಅಧಿಕೃತವಾಗಿ ತೀರ್ಮಾನ ಕೈಗೊಳ್ಳಲಾಗಿತ್ತು ಎಂದು ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.

ಅಷ್ಟೇ ಅಲ್ಲ, ಅಂದು ಶ್ರೀ ಆರ್. ಅಶೋಕ್ ಅವರು ಆರೋಗ್ಯ ಸಚಿವರಾಗಿದ್ದ ಕಾಲದಲ್ಲೇ (18.10.2006) ಇದಕ್ಕೆ ಅಧಿಕೃತ ಅಧಿಸೂಚನೆ ಹೊರಡಿಸಿ, ನಂತರ ವ್ಯಾಪ್ತಿಯನ್ನೂ ವಿಸ್ತರಿಸಲಾಯಿತು. 4 2010ರಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲೇ ಈ ಯೋಜನೆಗಾಗಿ ಮರು ಟೆಂಡರ್ ಕರೆಯಲಾಯಿತು. 2012ರಲ್ಲಿ ಶ್ರೀ ಜಗದೀಶ್ ಶೆಟ್ಟರ್ ನೇತೃತ್ವದ ಬಿಜೆಪಿ ಸರ್ಕಾರವೇ ಈ ಟೌನ್‌ಶಿಪ್ ಅನುಷ್ಠಾನಕ್ಕಾಗಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಿತ್ತು. 2020ರಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸುಮಾರು 9,000 ಎಕರೆ ಪ್ರದೇಶದಲ್ಲಿ ಸಮಗ್ರ ಟೌನ್‌ಶಿಪ್ ಅಭಿವೃದ್ಧಿಪಡಿಸುವ ಬಗ್ಗೆ ಸಭೆ ನಡೆಸಿ ನಿರ್ಧಾರ ಕೈಗೊಳ್ಳಲಾಯಿತು. ಆಗಲೂ ಆರ್. ಅಶೋಕ್ ಅವರೇ ಸಚಿವರಾಗಿದ್ದರು! ತದನಂತರ ಶ್ರೀ ಬಸವರಾಜ ಬೊಮ್ಮಾಯಿ ಅವರ 2022ರ ಬಜೆಟ್‌ನಲ್ಲಿ ಇಂಟಿಗ್ರೇ–ಟೆಡ್ ಟೌನ್‌ಶಿಪ್ ಘೋಷಿಸಿ, ಅನುಷ್ಠಾನಕ್ಕೆ ಮತ್ತೊಂದು ಉನ್ನತ ಮಟ್ಟದ ಸಮಿತಿ ರಚಿಸಲಾಯಿತು ಎಂದು ಅವರು ತಿಳಿಸಿದರು.



**ಅವರೇ ಸಚಿವರಾಗಿದ್ದರು!**

ತದನಂತರ ಶ್ರೀ ಬಸವರಾಜ ಬೊಮ್ಮಾಯಿ ಅವರ 2022ರ ಬಜೆಟ್‌ನಲ್ಲಿ ಇಂಟಿಗ್ರೇ–ಟೆಡ್ ಟೌನ್‌ಶಿಪ್ ಘೋಷಿಸಿ, ಅನುಷ್ಠಾನಕ್ಕೆ ಮತ್ತೊಂದು ಉನ್ನತ ಮಟ್ಟದ ಸಮಿತಿ ರಚಿಸಲಾಯಿತು.

2006ರ ಮೈತ್ರಿ ಕೂಟ, 2008–13ರ ಬಿಜೆಪಿ ಆಡಳಿತ, ಹಾಗೂ 2019–23ರ ಬಿಜೆಪಿ ಆಡಳಿತ ಸೇರಿದಂತೆ ಒಟ್ಟು 3 ಅವಧಿಗಳಲ್ಲಿ ಸುಮಾರು 11 ವರ್ಷ ನೀವೇ ಅಧಿಕಾರದಲ್ಲಿದ್ದವರಲ್ಲವೇ? ಎಂದು ಪ್ರಶ್ನಿಸಿದ್ದಾರೆ. ರೈತರ ಮೇಲೆ ಅಷ್ಟೊಂದು ಕಾಳಜಿ ಇದ್ದಿದ್ದರೆ ಅಂದೇ ನೋಟಿಫಿಕೇಶನ್ ರದ್ದು ಮಾಡಬೇಕಿತ್ತಲ್ಲ? ಅಂದು ಮಾಡದವರು ಇಂದು ಮೊಸಳೆ ಕಣ್ಣೀರು ಸುರಿಸಿದರೆ ಜನ ನಂಬುತ್ತಾರಾ?

ಅಂದು ಏನು ಆಗಲೇ ಇಲ್ಲ ಎಂಬಂತೆ ಇದ್ದ ಚಲವಾದಿ ನಾರಾಯಣಸ್ವಾಮಿ ಅವರ ಮೌನಕ್ಕೆ ಈಗೇಕೆ ವಾಚಾಳಿತನ? ಶ್ರೀ ಬಸವರಾಜ ಬೊಮ್ಮಾಯಿ ಅವರೇ, ಸರ್ಕಾರಿ ಜಮೀನಿನಲ್ಲಿ ಯೋಜನೆ ಮಾಡಿ ಎಂದು ಈಗ ಬಿಟ್ಟಿ ಭಾಷಣ ಬಿಗಿಯುತ್ತಿದ್ದೀರಲ್ಲಾ, ನೀವು ಮುಖ್ಯಮಂತ್ರಿಯಾಗಿದ್ದ 2 ವರ್ಷಗಳ ಅವಧಿಯಲ್ಲಿ ಏನು ಮಾಡದೆ, ಪ್ರತಿಪಕ್ಷದಲ್ಲಿದ್ದಾಗ ಮಾತ್ರ ನಿಮ್ಮ 'ರೈತ ಪ್ರೇಮ' ಜಾಗೃತವಾಗುವುದೇಕೆ? ಅಂದು ನಿಮ್ಮದೇ ಸರ್ಕಾರ ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ ಹೆಜ್ಜೆ ಇಟ್ಟಾಗ ಅದು 'ಅಭಿವೃದ್ಧಿ'ಯ ಮುಖಪುಟ, ಇಂದು ಅದೇ ಯೋಜನೆಯ ಕಾನೂನಾತ್ಮಕ ಪ್ರಕ್ರಿಯೆಗಳು ಮುಂದುವರಿದರೆ ಅದು 'ರೈತ ವಿರೋಧಿ' ಎನ್ನುವ ನಿಮ್ಮ ಈ ಇಬ್ಬಂದಿ ನೀತಿಗೆ ಏನನ್ನಬೇಕು? ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಸ್ಥಳೀಯ ಸಂಸ್ಥೆಗಳ ಮೂಲಕ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ ಚಿಕ್ಕಮಗಳೂರಿನ ಗಾಯತ್ರಿ ಶಾಂತೇಗೌಡ ಅವರು ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾದರು. ಸುಪ್ರೀಂಕೋರ್ಟ್ ನಲ್ಲಿ ನಡೆದ ಕಾನೂನು ಹೋರಾಟದಲ್ಲಿ ಗೆಲುವು ಸಾಧಿಸಿ ವಿಧಾನ ಪರಿಷತ್ತಿಗೆ ಪ್ರವೇಶ ಪಡೆದಿರುವ ಗಾಯತ್ರಿ ಶಾಂತೇಗೌಡ ಅವರನ್ನು ಸಿದ್ದರಾಮಯ್ಯ ಅವರು ಈ ಸಂದರ್ಭದಲ್ಲಿ ಅಭಿನಂದಿಸಿ ಶುಭ ಹಾರೈಸಿದರು.

## ವಿದ್ಯುತ್ ತಗುಲಿ ಯುವಕ ಸಾವು

**ಭಾಲ್ಕಿ:** ತಾಲ್ಲೂಕಿನ ಮದಕಟ್ಟಿ ಗ್ರಾಮದಲ್ಲಿ ವಿದ್ಯುತ್ ತಗುಲಿ ಯುವಕನೋರ್ವ ಮೃತಪಟ್ಟಿರುವ ಘಟನೆ ಗುರುವಾರ ನಡೆದಿದೆ. ಮಹಾದೇವ ಗುರುನಾಥ ವಡಗಾವೆ (23) ಮೃತ ಯುವಕ. ಹೊಲದಲ್ಲಿನ ಮೋಟಾರು ಸ್ಟಾರ್ಟ್ ಮಾಡುವ ಸಂದರ್ಭದಲ್ಲಿ ವಿದ್ಯುತ್ ತಗಲಿದ ಪರಿಣಾಮ ಯುವಕ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಈ ಸಂಬಂಧ ಖಟಕ್ ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಪರೀಕ್ಷಾ ಅಕ್ರಮಗಳ ವಿರುದ್ಧ ಜಂತರ್ ಮಂತರ್‌ನಲ್ಲಿ ಕಾಕ್ರೋಚ್ ಜನತಾ ಪಕ್ಷದ(ಸಿಜೆಪಿ) ನಡೆಸುತ್ತಿರುವ ಪ್ರತಿಭಟನೆ 28ನೇ ದಿನಕ್ಕೆ ಕಾಲಿಟ್ಟಿದ್ದು, ಕಾಂಗ್ರೆಸ್ ನಾಯಕ ಪವನ್ ಖೇರಾ ಅವರು ವಾಂಗ್‌ಚುಕ್ ಮತ್ತು ಇತರ ಪ್ರತಿಭಟನಾಕಾರರನ್ನು ಭೇಟಿ ಮಾಡಿ ತಮ್ಮ ಬೆಂಬಲ ಸೂಚಿಸಿದ್ದಾರೆ.



ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿ ಸಮೀಪ ಪ್ರಸ್ತಾವಿತ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆಗಾಗಿ ರೈತರ ಭೂಸ್ವಾಧೀನಕ್ಕೆ ರಾಜ್ಯ ಸರ್ಕಾರ ಮುಂದಾಗಿರುವುದನ್ನು ಖಂಡಿಸಿ ಬಿಜೆಪಿ ಶುಕ್ರವಾರ ನಗರದ ಫ್ರೀಡಂ ಪಾರ್ಕ್ ನಲ್ಲಿ ಬೃಹತ್ ಪ್ರತಿಭಟನೆ ನಡೆಸಿತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹಾಗೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪ್ರತಿಭಟನೆಗೆ ನೇತೃತ್ವ ವಹಿಸಿದ್ದರು.

# ರಾಹುಲ್ ಗ್ರೀನ್ ಸಿಗ್ನಲ್?

## ಸಂಪುಟ ವಿಸ್ತರಣೆಗೆ ಅಂತಿಮ ಕಸರತ್ತು | ರಾಜ್ಯ ರಾಜಕೀಯ ಚಟುವಟಿಕೆ ಚುರುಕು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯಕಾಂಗ್ರೆಸ್‌ನಲ್ಲಿ ರಾಜಕೀಯ ಚಟುವಟಿಕೆ ಚುರುಕುಗೊಂಡಿದೆ. ವಿಶೇಷವಾಗಿ ಬಹು ದಿನಗಳಿಂದ ನನೆಗುದಿಗೆ ಬಿದ್ದಿದ್ದ ಸಚಿವ ಸಂಪುಟ ವಿಸ್ತರಣೆಗೆ ವರಿಷ್ಠ ರಾಹುಲ್ ಗಾಂಧಿ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎಂದು ಮೂಲ ತಿಳಿಸಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಪುತ್ರನ ಅನಾರೋಗ್ಯದ ಹಿನ್ನೆಲೆಯಲ್ಲಿ ಅವರು ದಿಢೀರ್ ಆಗಿ ಬೆಂಗಳೂರಿಗೆ ವಾಪಸ್ ಆಗಬೇಕಾಗಿತ್ತು. ಈ ಹಿನ್ನೆಲೆಯಲ್ಲಿ ಸಂಪುಟ ವಿಸ್ತರಣೆಗೆ ತಾತ್ಕಾಲಿಕ ಬ್ರೇಕ್ ಅಷ್ಟೇ ಬಿದ್ದಿತ್ತು. ಸಂಪುಟ ವಿಸ್ತರಣೆ ತಡವಾಗಲು ಇದೂ ಒಂದು ಕಾರಣ.

**ರಾಜ್ಯ ನಾಯಕರು ದೆಹಲಿಗೆ:** ಸೋಮವಾರ ಮತ್ತೆ ದೆಹಲಿಗೆ ರಾಜ್ಯ ನಾಯಕರು ತೆರಳಲಿದ್ದಾರೆ. ಹೈಕಮಾಂಡ್ ಬುಲಾವ್ ಹಿನ್ನೆಲೆಯಲ್ಲಿ ಸಿಎಂ ಡಿಕೆಶಿ, ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್, ಮಾಜಿ ಸಿಎಂ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಿದ್ದರು. ರಾಹುಲ್ ಜೊತೆ ಮೂವರು ನಾಯಕರು ಪ್ರತ್ಯೇಕ ಮಾತುಕತೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಅನೌಪಚಾರಿಕ ಚರ್ಚೆ ನಡೆದಿದೆ.

**ಹೊಸಬರಿಗೆ ಪದವಿ ಸ್ಥಾನ:** ಸಚಿವ ಸಂಪುಟದಲ್ಲಿ 20 ಸ್ಥಾನ ಖಾಲಿ ಇದೆ. ಡಿಕೆಶಿ ಜೊತೆಗೆ 13 ಮಂದಿ ಸಚಿವರು ಅಧಿಕಾರ ಸ್ವೀಕರಿಸಿದ್ದರು. ಈ ಪೈಕಿ ಹಿಂದಿನ ಸಂಪುಟದಲ್ಲಿ ಇಲ್ಲದ ಯತೀಂದ್ರ ಸಿದ್ದರಾಮಯ್ಯ ಹಾಗೂ ಯುಟಿ ಖಾದರ್ ಅವರಿಗೆ ಅವಕಾಶ ನೀಡಲಾಗಿದೆ. ಆದರೆ ಇದೀಗ ಬಹುತೇಕ ಹೊಸಬರಿಗೆ ಅವಕಾಶ ಸಿಗುವುದು ಬಹುತೇಕ ಖಚಿತವಾಗಿದೆ.



### ರಾಹುಲ್ ಗಾಂಧಿ ಕೊಟ್ಟ ಸಂದೇಶ..?

ಸಚಿವ ಸಂಪುಟ ವಿಸ್ತರಣೆ ಹಿನ್ನೆಲೆಯಲ್ಲಿ ಸಿಎಂ ಡಿಕೆ ಶಿವಕುಮಾರ್ ಅವರು ತಮ್ಮ ಪಟ್ಟಿಯೊಂದಿಗೆ ಸಿದ್ಧವಾಗಿ ದಿಲ್ಲಿಗೆ ತೆರಳಿದ್ದರು. ಪಟ್ಟಿಯ ಪೂರ್ಣ ವಿವರಗಳ ಜೊತೆಗೆ ಚರ್ಚೆ ನಡೆದಿಲ್ಲ. ಅನೌಪಚಾರಿಕ ಚರ್ಚೆಯ ಸಂದರ್ಭದಲ್ಲಿ ಯುವ ಮುಖಗಳಿಗೆ ಹಾಗೂ ಮಹಿಳೆಯರಿಗೆ ಆದ್ಯತೆ ನೀಡಬೇಕು ಎಂಬ ಸೂಚನೆಯನ್ನು ರಾಹುಲ್ ಗಾಂಧಿ ನೀಡಿದ್ದಾರೆ ಎಂದು ಮೂಲ ಖಚಿತಪಡಿಸಿದೆ.

### ಪ್ರಾದೇಶಿಕವಾರು, ಜಾತಿವಾರು ಲೆಕ್ಕಾಚಾರ

ಈಗಾಗಲೇ ಪ್ರಾದೇಶಿಕವಾರು, ಜಾತಿವಾರು, ಸಮುದಾಯವಾರು ಅವಕಾಶಗಳನ್ನು ಸಂಪುಟದಲ್ಲಿ ನೀಡಬೇಕಾಗಿದೆ. ಸಾಮಾಜಿಕ ನ್ಯಾಯ ಪಾಲನೆ ಮಾಡಬೇಕಾಗಿದೆ. ಯಾವುದೇ ಸಮುದಾಯವನ್ನು ಕಡೆಗಣಿಸುವ ಹಾಗಿಲ್ಲ. ಅಳೆದು ತೂಗಿ ಪಟ್ಟಿ ಅಂತಿಮಗೊಳಿಸಬೇಕಾಗಿದೆ. ಹೀಗಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಗೆ ತೆರಳಿದ ಬೆನ್ನಲ್ಲೇ ಸಭೆ ನಡೆಯಲಿದೆ.

### ಯಾರಿಗೆ ಸ್ಪೀಕರ್ ಹುದ್ದೆ..?

ಆಗಸ್ಟ್ 6ರಿಂದ ವಿಧಾನಮಂಡಲ ಅಧಿವೇಶನ ನಡೆಯಲಿದೆ. ಇದರಿಂದ ಸ್ಪೀಕರ್ ಹುದ್ದೆಯ ಬಗ್ಗೆಯೂ ಅಂತಿಮ ತೀರ್ಮಾನ ಕೈಗೊಳ್ಳಬೇಕಿದೆ. ಯಾರಿಗೆ ಅವಕಾಶ ನೀಡಲಾಗುವುದು ಎಂಬುವುದು ಇನ್ನೂ ಅಂತಿಮಗೊಂಡಿಲ್ಲ. ದಿನೇಶ್ ಗುಂಡೂರಾವ್, ದೇಶಪಾಂಡೆ ಹೆಸರು ಕೇಳಿಬರುತ್ತಿದೆ. ಅಂತಿಮವಾಗಿ ಹೈಕಮಾಂಡ್ ಈ ಬಗ್ಗೆ ನಿರ್ಧಾರ ಕೈಗೊಳ್ಳುವ ಸಾಧ್ಯತೆ ತಳ್ಳಿಹಾಕುವಂತಿಲ್ಲ.

### ಮಹಿಳೆಯಲ್ಲಿ ಯಾರಿಗೆ ಅವಕಾಶ?

ಸಚಿವ ಸಂಪುಟದಲ್ಲಿ ಮಹಿಳೆಯರ ಪೈಕಿ ಯಾರಿಗೆ ಅವಕಾಶ ದೊರೆಯಲಿದೆ? ಎನ್ನುವ ಪ್ರಶ್ನೆಗೆ ಉತ್ತರ ಅಸ್ಪಷ್ಟವಾಗಿದೆ. ಈ ಹಿಂದೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸಚಿವರಾಗಿದ್ದರು. ಮತ್ತೊಮ್ಮೆ ಅವರಿಗೆ ಅವಕಾಶ..? ಇದು ಕುತೂಹಲ ಕೆರಳಿಸಿದೆ. ಇವರ ಜೊತೆಗೆ ಉಮಾಶ್ರೀ, ನಯನಾ ಮೋಟಮ್ಮ ಮುಂತಾದ ಸಕ್ರಿಯ ಮಹಿಳಾ ರಾಜಕಾರಣಿಗಳ ಹೆಸರು ಚಾಲ್ತಿಯಲ್ಲಿದೆ.

## ಜಾಗಿಂಗ್ ಮಾಡುವವರಿಗೆ ಅಪಾಯ: ಸುರಕ್ಷತಾ ಕ್ರಮಕ್ಕೆ ಸಾರ್ವಜನಿಕರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಸರ್ಕಾರಿ ಪದವಿ ಪೂರ್ವ (ಜೂನಿಯರ್) ಕಾಲೇಜು ಮೈದಾನದಲ್ಲಿ ಪ್ರತಿದಿನ ಬೆಳಿಗ್ಗೆ ಹಾಗೂ ಸಂಜೆ ನೂರಾರು ಸಾರ್ವಜನಿಕರು ಜಾಗಿಂಗ್ ಮತ್ತು ವಾಯುವಿಹಾರ ನಡೆಸುತ್ತಾರೆ. ಇದೇ ಸಮಯದಲ್ಲಿ ಕೆಲವರು ಕ್ರಿಕೆಟ್ ಆಡುತ್ತಿರುವುದರಿಂದ ಜಾಗಿಂಗ್ ಮಾಡುವವರಿಗೆ ಚೆಂಡು ತಗುಲಿ ಅಪಾಯ ಸಂಭವಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ.



ಕ್ರಿಕೆಟ್ ಆಟದ ವೇಳೆ ಬಲವಾಗಿ ಹೊಡೆಯುವ ಚೆಂಡು ಜಾಗಿಂಗ್ ಮಾಡುವವರಿಗೆ ತಗುಲಿ ಗಾಯಗಳಾಗುತ್ತಿರುವ ಘಟನೆಗಳು ಈಗಾಗಲೇ ನಡೆದಿವೆ. ಇತ್ತೀಚೆಗೆ ಬಸವರಾಜ್ ಮ್ಯಾಗಳಮನಿ ಅವರ ಮುಖಕ್ಕೆ ಕ್ರಿಕೆಟ್ ಚೆಂಡು ಬಡಿದು ಗಾಯಗೊಂಡಿದ್ದು, ತಕ್ಷಣವೇ ಪೊಲೀಸ್ ಕಾನ್ಸ್ಟೆಬಲ್ ರಮೇಶ್ ಅವರು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ಈ ಸಂದರ್ಭದಲ್ಲಿ ಬಸವರಾಜ್ ಮ್ಯಾಗಳಮನಿ ಅವರ ಕುಟುಂಬಸ್ಥರು ಪೊಲೀಸ್ ಕಾನ್ಸ್ಟೆಬಲ್ ರಮೇಶ್ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಬೆಳಿಗ್ಗೆ 5.00ರಿಂದ 7.00 ಗಂಟೆಯವರೆಗೆ ಹಾಗೂ ಸಂಜೆ ಜಾಗಿಂಗ್ ಸಮಯದಲ್ಲಿ ಮೈದಾನದ ಒಳಭಾಗದಲ್ಲಿ ಕ್ರಿಕೆಟ್ ಆಡಲು ಅವಕಾಶ ನೀಡಬಾರದು ಎಂದು ಸಾರ್ವಜನಿಕರು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.



ಜೊತೆಗೆ, ಮೈದಾನದಲ್ಲಿ ಜಾಗಿಂಗ್ ಹಾಗೂ ಕ್ರಿಕೆಟ್ ಆಟಕ್ಕೆ ಪ್ರತ್ಯೇಕ ಸಮಯ ನಿಗದಿಪಡಿಸಿ, ಸುರಕ್ಷತಾ ಸೂಚನಾ ಫಲಕಗಳನ್ನು ಅಳವಡಿಸುವ ಮೂಲಕ ಅಪಘಾತಗಳನ್ನು ತಡೆಗಟ್ಟುವ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಅಧಿಕಾರಿಗಳ ಅವಕೃಪೆಗೆ ಎನ್‌ಸಿಸಿ ಕ್ರೀಡಾಂಗಣ

• ಎಂ.ಜಂಬುನಾಥ, ಜಿಲ್ಲಾ ವರದಿಗಾರ, ಬಳ್ಳಾರಿ

ನಗರದ ಪ್ರಮುಖ ಸಾರ್ವಜನಿಕ ಆಸ್ತಿಗಳಲ್ಲಿ ಒಂದಾಗಿರುವ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರದ ಎನ್‌ಸಿಸಿ ಕ್ರೀಡಾಂಗಣ ಇಂದು ಸಾವಿರಾರು ಜನರ ಆರೋಗ್ಯ ಕಾಪಾಡುವ ಕೇಂದ್ರವಾಗಿ ರೂಪುಗೊಂಡಿದೆ. ಆದರೂ ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಸಾರ್ವಜನಿಕರು ತೀವ್ರ ಅಸಮಾಧಾನ ವ್ಯಕ್ತಪಡಿಸುವಂತಾಗಿದೆ.

**ಮೂಲಭೂತ ಸೌಲಭ್ಯ ಕಲ್ಪಿಸಲು ಜನರ ಒತ್ತಾಯ**

**ಸಾರ್ವಜನಿಕರ ಆಕ್ರೋಶ:** ಪ್ರತಿದಿನ ಬೆಳಗ್ಗೆ ಹಾಗೂ ಸಂಜೆ ವೇಳೆ ಹಿರಿಯ ನಾಗರಿಕರು, ಮಹಿಳೆಯರು, ಯುವಕರು, ವಿದ್ಯಾರ್ಥಿಗಳು ಹಾಗೂ ಮಕ್ಕಳು ವಾಕಿಂಗ್, ಜಾಗಿಂಗ್, ಯೋಗ, ವ್ಯಾಯಾಮ ಮತ್ತು ವಿವಿಧ ಕ್ರೀಡಾ ಚಟುವಟಿಕೆಗಳಿಗಾಗಿ ಈ ಮೈದಾನವನ್ನು ಬಳಸುತ್ತಿದ್ದಾರೆ. ಆದರೆ, ಜನಸಂದಣಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದರೂ, ಅದರ ಅನುಗುಣವಾಗಿ ಮೂಲಸೌಕರ್ಯ ಕಲ್ಪಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.



**ವಾಟರ್ ಕೂಲರ್ ಅಳವಡಿಸಿ:** ಸಾರ್ವಜನಿಕರ ಹೇಳಿಕೆಯ ಪ್ರಕಾರ, ಮೈದಾನದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯೇ ಇಲ್ಲದಿರುವುದು ಅತ್ಯಂತ ಗಂಭೀರ ಸಮಸ್ಯೆಯಾಗಿದೆ. ವಾಕಿಂಗ್ ಹಾಗೂ ವ್ಯಾಯಾಮಕ್ಕೆ ಬರುವವರು ನೀರಿನ ಕೊರತೆಯಿಂದ ತೊಂದರೆ ಅನುಭವಿಸುತ್ತಿದ್ದು, ಬೇಸಿಗೆ ದಿನಗಳಲ್ಲಿ ಈ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತಿದೆ. ಮೈದಾನದಲ್ಲಿ ನೀರಿನ ಘಟಕ ಅಥವಾ ವಾಟರ್ ಕೂಲರ್ ಅಳವಡಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

**ಬೇಕು ಬೆಳಕಿನ ವ್ಯವಸ್ಥೆ:** ಬೆಳಕಿನ ವ್ಯವಸ್ಥೆಯ ಕೊರತೆ ಸುರಕ್ಷತೆಗೆ ಸವಾಲಾಗಿದೆ. ಮುಂಜಾನೆ ಹಾಗೂ ರಾತ್ರಿ ವೇಳೆಯಲ್ಲಿ ಮೈದಾನದ ಹಲವು ಭಾಗಗಳಲ್ಲಿ ಸಮರ್ಪಕ ಬೆಳಕು ಇಲ್ಲದ ಕಾರಣ ವಾಕಿಂಗ್ ಮಾಡುವವರು ಆತಂಕದ ವಾತಾವರಣದಲ್ಲಿ ಸಂಚರಿಸುವಂತಾಗಿದೆ. ಹಾವು–ಹುಳುಗಳ ಭೀತಿ, ಕಳ್ಳತನ ಅಥವಾ ಇತರೆ ಅಹಿತಕರ ಘಟನೆಗಳ ಸಾಧ್ಯತೆಯೂ ಇರುವುದರಿಂದ, ಸಂಪೂರ್ಣ ಮೈದಾನದಲ್ಲಿ ಉತ್ತಮ ಗುಣಮಟ್ಟದ ಎಲ್‌ಇಡಿ ದೀಪಗಳನ್ನು ಅಳವಡಿಸಿ ಬೆಳಕಿನ ವ್ಯವಸ್ಥೆಯನ್ನು ಬಲಪಡಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಅಧಿಕಾರಿಗಳ ಅದೇ ನಿರ್ಲಕ್ಷ್ಯ

ಸಾರ್ವಜನಿಕ ಶೌಚಾಲಯಗಳ ಕೊರತೆ ಮಹಿಳೆಯರು, ಹಿರಿಯ ನಾಗರಿಕರು ಹಾಗೂ ಮಕ್ಕಳಿಗೆ ಹೆಚ್ಚಿನ ಸಂಕಷ್ಟವನ್ನುಂಟು ಮಾಡುತ್ತಿದೆ. ನಗರದಲ್ಲಿ ಪ್ರಮುಖ ಸಾರ್ವಜನಿಕ ಸ್ಥಳವಾಗಿದ್ದರೂ, ಮೂಲಭೂತ ಅಗತ್ಯವಾದ ಶೌಚಾಲಯ ವ್ಯವಸ್ಥೆಯಿಲ್ಲದಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.


### ಕುಳಿತುಕೊಳ್ಳಲು ಇಲ್ಲ ವ್ಯವಸ್ಥೆ

ಮೈದಾನಕ್ಕೆ ಬರುವವರಿಗೆ ವಿಶ್ರಾಂತಿ ಪಡೆಯಲು ನೆರಳಿನೊಂದಿಗೆ ಆಸನಗಳು ಹಾಗೂ ಬೆಂಚ್‌ಗಳ ಕೊರತೆ ಮತ್ತೊಂದು ಪ್ರಮುಖ ಸಮಸ್ಯೆಯಾಗಿದೆ. ವಿಶೇಷವಾಗಿ ವಯೋವೃದ್ಧರು ಮತ್ತು ಮಹಿಳೆಯರು ವ್ಯಾಯಾಮದ ನಂತರ ಸ್ವಲ್ಪ ಹೊತ್ತು ಕುಳಿತುಕೊಳ್ಳಲು ಸೂಕ್ತ ವ್ಯವಸ್ಥೆ ಇಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

### ಸಿಸಿಟಿವಿ ಕ್ಯಾಮೆರಾ ಅಳವಡಿಕೆ?

ಸುರಕ್ಷತಾ ವ್ಯವಸ್ಥೆಯನ್ನೂ ಬಲಪಡಿಸುವ ಅಗತ್ಯವಿದೆ. ಮೈದಾನದ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ಬೆಳಿಗ್ಗೆ ಹಾಗೂ ಸಂಜೆ ವೇಳೆಯಲ್ಲಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬೇಕು. ಇದರಿಂದ ಮಹಿಳೆಯರು, ಮಕ್ಕಳು ಹಾಗೂ ಹಿರಿಯ ನಾಗರಿಕರು ಇನ್ನಷ್ಟು ಸುರಕ್ಷಿತ ವಾತಾವರಣದಲ್ಲಿ ವಾಕಿಂಗ್ ಹಾಗೂ ವ್ಯಾಯಾಮ ನಡೆಸಲು ಸಾಧ್ಯವಾಗಲಿದೆ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.



### ಜಿಲ್ಲಾ ಆಡಳಿತಕ್ಕೆ ಸಾರ್ವಜನಿಕರ ಮನವಿ

ಪ್ರತಿದಿನ ನೂರಾರು ಜನರು ಆರೋಗ್ಯಕ್ಕಾಗಿ ಬಳಸುವ ಹಾಗೂ ವರ್ಷಪೂರ್ತಿ ಸರ್ಕಾರಿ, ಶೈಕ್ಷಣಿಕ ಮತ್ತು ಸಾರ್ವಜನಿಕ ಕಾರ್ಯಕ್ರಮಗಳಿಗೆ ವೇದಿಕೆಯಾಗಿರುವ ಈ ಎನ್‌ಸಿಸಿ ಕ್ರೀಡಾಂಗಣದ ಅಭಿವೃದ್ಧಿಗೆ ಜಿಲ್ಲಾ ಆಡಳಿತ, ಮಹಾನಗರ ಪಾಲಿಕೆ, ಕ್ರೀಡಾ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

**ಸಿದ್ದರಾಮಯ್ಯ ಜೊತೆ ಯಾವುದೇ ಭಿನ್ನಾಭಿಪ್ರಾಯವಿಲ್ಲ: ರಾಜಕೀಯ ಲಾಭಕ್ಕೆ ಗಾಳಿ ಸುದ್ದಿ ಹಬ್ಬಿಸುತ್ತಿದ್ದಾರೆ; ಸಚಿವ ಸತೀಶ್ ಜಾರಕಿಹೊಳಿ**

# ಬೀದರ್, ಕಲಬುರಗಿ ಸೇರಿದಂತೆ ಇತರೆ ಜಿಲ್ಲೆಗಳನ್ನು ಬರಗಾಲ ಪೀಡಿತ ಜಿಲ್ಲೆಗಳೆಂದು ಘೋಷಿಸಲಿ

ರಾಜ್ಯದ ಹಲವು ಭಾಗಗಳಲ್ಲಿ ಈ ವರ್ಷ ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ತೀವ್ರ ಸಂಕಷ್ಟಕ್ಕೆ ಸಿಲುಕಿವೆ. ವಿಶೇಷವಾಗಿ ಬೀದರ್, ಕಲಬುರಗಿ ಸೇರಿದಂತೆ ಕಲ್ಯಾಣ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಬಿತ್ತನೆ ಮಾಡಿದ ಬೆಳೆಗಳು ಒಣಗುತ್ತಿದ್ದು, ರೈತರು ಆತಂಕದಲ್ಲಿ ದಿನ ಕಳೆಯುವಂತಾಗಿದೆ. ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಕೊರತೆಯೂ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಇಂತಹ ಪರಿಸ್ಥಿತಿಯಲ್ಲಿ ರಾಜ್ಯ ಸರ್ಕಾರವು ತಕ್ಷಣವೇ ಬೀದರ್, ಕಲಬುರಗಿ ಸೇರಿದಂತೆ ಮಳೆಯ ಕೊರತೆಯಿಂದ ತೀವ್ರವಾಗಿ ಬಾಧಿತವಾಗಿರುವ ಜಿಲ್ಲೆಗಳನ್ನು ಬರಗಾಲ ಪೀಡಿತ ಜಿಲ್ಲೆಗಳೆಂದು ಘೋಷಿಸಬೇಕು. ರೈತರಿಗೆ ಬೆಳೆ ನಷ್ಟ ಪರಿಹಾರ, ಸಾಲ ಮರುಪಾವತಿಗೆ ವಿನಾಯಿತಿ, ಕುಡಿಯುವ ನೀರು ಹಾಗೂ ಮೇವು ಪೂರೈಕೆ ಸೇರಿದಂತೆ ಅಗತ್ಯ ಪರಿಹಾರ ಕ್ರಮಗಳನ್ನು ತುರ್ತಾಗಿ ಕೈಗೊಳ್ಳಬೇಕು.

ರೈತರು ದೇಶದ ಬೆನ್ನೆಲುಬು. ಅವರ ಸಂಕಷ್ಟವನ್ನು ನಿರ್ಲಕ್ಷಿಸದೆ ಸರ್ಕಾರವು ತಕ್ಷಣ ಸ್ಪಂದಿಸಿ, ಅಗತ್ಯ ನೆರವು ಒದಗಿಸುವ ಮೂಲಕ ರೈತರ ಬದುಕಿಗೆ ಆಸರೆಯಾಗಬೇಕು. ಸಮಯೋಚಿತ ಕ್ರಮ ಕೈಗೊಂಡರೆ ಮಾತ್ರ ರೈತರ ಸಂಕಷ್ಟವನ್ನು ತಗ್ಗಿಸಲು ಸಾಧ್ಯವಾಗುತ್ತದೆ.

# ಬಾವಗಿ ಗ್ರಾಮಸ್ಥರಿಂದ ಮಳೆಗಾಗಿ ವಿಶೇಷ ಪೂಜೆ



**ಬೀದರ್:** ಶ್ರೀ ಗುರು ಭದ್ರೇಶ್ವರ ಸಂಸ್ಥಾನದ ವೇದ ಮೂರ್ತಿ ಶ್ರೀ ಭದ್ರಯ್ಯ ಸ್ವಾಮಿಯವರು ಮಾತನಾಡಿ ತಮಗೆಲ್ಲರಿಗೂ ಗೊತ್ತಿದ್ದಂತೆ ಗುರು ಭದ್ರೇಶ್ವರರು ಪವಾಡಗಳನ್ನು ಮಾಡಿ ಅನೇಕ ಶಿಷ್ಯರಿಗೆ, ಭಕ್ತರಿಗೆ, ನಂಬಿಬಂದವರಿಗೆ ತನ್ನ ದಿವ್ಯ ಶಕ್ತಿಯಿಂದ ಬೇಡಿದ ವರವ ಕೊಟ್ಟು ಮನೆ – ಬಾಳನ್ನು ಉಧರಿಸಿದ್ದಾರೆ, ಅದೇರಿತಿ ನಾಡಿನಲ್ಲಿ ಇಂದಿನ ರೈತರು ಮಳೆಬಾರದೆ ಕಂಗಾಲಾಗಿದ್ದಾರೆ ಏನನ್ನು ತೋಚದೆ,ಮುಂದಿನ ದಾರಿ ತಿಳಿಯದಂತಾಗಿದ್ದಾರೆ. ಹಸುಗಳಿಗೆ, ಪ್ರಾಣಿ ಪಕ್ಷಿಗಳಿಗೆ ಕುಡಿಯುವ ನೀರಿಗೂ ಬರ ಬಂದಿದೆ ಸದ್ಗುರು ಭದ್ರೇಶ್ವರರ ಸನ್ನಿಧಿಗೆ ಬಂದು ಇಳೆಗೆ ವರುಣದೇವನನ್ನು ಕರೆತರುವಂತೆ ಗುರುವಿನ ಅಡಿದಾವರೆಗೆ ಸೆರಗೊಡ್ಡಿ ನಾಡಿನ ಜನರ ಒಳಿತಿಗಾಗಿ ಪ್ರಾರ್ಥನೆ ಸಲ್ಲಿಸಿದ್ದೀರಿ ಸದ್ಗುರು ಭದ್ರೇಶ್ವರರು ಖಂಡಿತ ತಮ್ಮ ಮೊರೆ ಕೇಳಿಸಿಕೊಂಡಿದ್ದಾರೆ, ತಮ್ಮ ವರವನ್ನು ಸಿದ್ಧಿಸುತ್ತಾರೆ. ತಾವುಗಳು ಗುರು ಭದ್ರೇಶ್ವರ ಮೇಲೆ ಭಾರವನ್ನು ಹೇರಿಸಿ ತಮ್ಮ ಕಾಯಕವನ್ನು ಮುಂದುವರೆಸಿ ಭದ್ರೇಶ್ವರರು ತಮ್ಮ ಹೆಗಲಿಗೆ ಹೆಗಲುನೀಡಿ ತಮಗೆ ಸಹಕರಿಸುವರು. ನಾಡಿನ ಸರ್ವೇ ಜನ ಸುಖಿನೋಭವಂತು ಎನ್ನುವಂತೆ ಸರ್ವರು ನೆಮ್ಮದಿಯಿಂದ ಜೀವನ ನಡೆಸುವಂತೆ ಭದ್ರೇಶ್ವರರು ಆಶೀರ್ವದಿಸಲಿ ಎಂದು ಭದ್ರೇಶ್ವರರ ಮೊರೆಹೋದ ಭಕ್ತರಿಗೆ ಎದೆಗುಂದದೆ ತಮ್ಮ ಮುಂದಿನ ಕಾಯಕ ಮಾಡುವಂತೆ ಹುರಿದುಂಬಿಸಿದರು.

ಈ ಸಂದರ್ಭದಲ್ಲಿ ಚನಮಲಪ್ಪ ಹಜರಗಿ ಶಾಂತಕುಮಾರ್ ಸ್ವಾಮಿ ರೇವಣಪ್ಪ ಭದ್ರಣ ನಾಗಶೆಟ್ಟಿ ಅಳಿ ಸಂಗಮೇಷ ಹಜರಗಿ ಜಗನ್ನಾಥ ಚದ್ರಿ ಸತಿಷ್ ಹಜಾರಿ ಶಿವುಕುಮಾರ ರೆಷಟ್ಟಿ ಶಂಕರ್ ಬಾಪುರ ರೇವಣಪ್ಪ ಮೆತ್ರಿ ಸಕಲ ಬಾವಗಿ ಗ್ರಾಮಸ್ಥರು ಇದ್ದರು.

# ಹಳಗನ್ನಡ ಸಾಹಿತ್ಯ ಮುಂದಿನ ಪೀಳಿಗೆಗೆ ತಲುಪಿಸುವುದು ಅತ್ಯವಶ್ಯಕ: ಪ್ರೊ. ಬಿ. ಎಸ್. ಬಿರಾದಾರ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಹಳಗನ್ನಡ ಸಾಹಿತ್ಯವು ಪಂಪ, ರನ್ನ, ಜನ್ನ ಸೇರಿದಂತೆ ಮಹಾನ್ ಕವಿಗಳ ಕಾಲದಿಂದ ಕನ್ನಡ ಸಾಹಿತ್ಯದ ಭದ್ರ ಬುನಾದಿಯಾಗಿ ಬೆಳೆದು ಬಂದಿದೆ. ಇಂದಿನ ಓದು–ಬರಹದ ಕನ್ನಡ ಸಾಹಿತ್ಯಕ್ಕೆ ಹಳೆಗನ್ನಡವೇ ಮೂಲಾಧಾರವಾಗಿದ್ದು, ಅದರ ಪರಂಪರೆ ಮತ್ತು ಮಹತ್ವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಅತ್ಯವಶ್ಯಕವಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ಎಸ್. ಬಿರಾದಾರ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಹಾಗೂ ಬೀದರ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಳಗನ್ನಡ ಸಾಹಿತ್ಯ ಕುರಿತ ಒಂದು ದಿನದ ವಿಶೇಷ ವಿಚಾರಗೋಷ್ಠಿಯನ್ನು ದಿನಾಂಕ 17 ಜುಲೈ ಶುಕ್ರವಾರ ಮುಂಜಾನೆ ಬೀದರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಡಾ. ಬಿ.ಎಸ್.ಮಂಜುನಾಥ ಸ್ವಾಮಿ ಅವರ ಪರಿಕಲ್ಪನೆಯಂತೆ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ "ಹಳಗನ್ನಡ ಓದು–ಬೋಧನಾ ವಿಧಾನ" ಕುರಿತ ಒಂದು ದಿನದ ವಿಶೇಷ ಕಾರ್ಯಾಗಾರವನ್ನು ಆರಂಭಿಸಲಾಗಿದ್ದು, ಅದರ ಚಾಲನೆಯನ್ನು ಗಡಿ ಜಿಲ್ಲೆಯಾದ ಬೀದರದಿಂದ ನೀಡಿರುವುದು ಶ್ಲಾಘನೀಯವಾಗಿದೆ ಎಂದರು.

ಬೀದರವು ವಚನ ಚಳುವಳಿ, ಭಾಷಾ ಚಳುವಳಿ ಹಾಗೂ ಶರಣ ಸಂಸ್ಕೃತಿಯ ಮೂಲಕ ಸಮಾಜಕ್ಕೆ ತನ್ನದೇ ಆದ ಮೌಲ್ಯಗಳು ಮತ್ತು ಸಿದ್ಧಾಂತಗಳನ್ನು ನೀಡಿರುವ ಪವಿತ್ರ ಭೂಮಿಯಾಗಿದ್ದು, ಕನ್ನಡ ನಾಡಿನ ಸಾಂಸ್ಕೃತಿಕ ಶ್ರೀಮಂತಿಕೆಗೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಹಳಗನ್ನಡ ಓದು–ಬೋಧನಾ ವಿಧಾನದ ಕುರಿತು ಆಯೋಜಿಸಿರುವ ಈ ಒಂದು ದಿನದ ಕಾರ್ಯಾಗಾರದಲ್ಲಿ ನುರಿತ ಕನ್ನಡ ಉಪನ್ಯಾಸಕರಿಂದ ನಾಲ್ಕು ಗೋಷ್ಠಿಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಾಗಾರವು ಕನ್ನಡ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳಿಗೆ ಹಳಗನ್ನಡ ಸಾಹಿತ್ಯದ ಅಧ್ಯಯನ ಮತ್ತು ಬೋಧನಾ ವಿಧಾನಗಳನ್ನು ಸಮಗ್ರವಾಗಿ ಅರ್ಥಮಾಡಿಕೊಳ್ಳಲು ಸಹಕಾರಿಯಾಗಲಿದೆ. ಹಳಗನ್ನಡ ಸಾಹಿತ್ಯದ ಮಹತ್ವವನ್ನು ಮುಂದಿನ ಪೀಳಿಗೆಗೆ ತಲುಪಿಸಿ, ಅದರ ಪರಂಪರೆಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಇಂತಹ ಶೈಕ್ಷಣಿಕ ಹಾಗೂ ಸಾಹಿತ್ಯಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಪರಮೇಶ್ವರ ನಾಯ್ಕ್, ವಿಶೇಷಾಧಿಕಾರಿಗಳಾದ ಡಾ. ರವೀಂದ್ರನಾಥ ಗಬಾಡಿ ಸೇರಿದಂತೆ ಇತರ ಗಣ್ಯರು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಡಾ.ಸುನೀತಾ ಮಹೇಶ್ವರಿ ಸ್ವಾಗತಿಸಿದರು. ಡಾ. ಸುರೇಖಾ ಬಿರಾದಾರ್ ಕಾರ್ಯಕ್ರಮ ನಿರೂಪಿಸಿದರು.

ಬಳಿಕ ನಡೆದ ವಿಚಾರಗೋಷ್ಠಿಯಲ್ಲಿ ವಿವಿಧ ವಿಷಯಗಳ ಕುರಿತು ತಜ್ಞರು ಉಪನ್ಯಾಸ ನೀಡಿದರು. ಮುಂಜಾನೆ ನಡೆದ ಮೊದಲ ಗೋಷ್ಠಿಯಲ್ಲಿ ಡಾ. ರಾಮಚಂದ್ರ ಗಣಾಪೂರ ಅವರು "ಹಳಗನ್ನಡ ಕಾವ್ಯ ಪರಂಪರೆ ಅಸ್ಮಿತೆ" ವಿಷಯದ ಕುರಿತು ಉಪನ್ಯಾಸ ನೀಡಿ, ಹಳಗನ್ನಡ ಕಾವ್ಯ ಪರಂಪರೆಯು ಕನ್ನಡ ಸಾಹಿತ್ಯದ ವೈಭವವನ್ನು ಜಗತ್ತಿಗೆ ಪರಿಚಯಿಸಿದ ಅಮೂಲ್ಯ ಪರಂಪರೆಯಾಗಿದ್ದು, ಅದರ ಸಂರಕ್ಷಣೆ ಹಾಗೂ ಅಧ್ಯಯನ ಅತ್ಯಗತ್ಯವಾಗಿದೆ ಎಂದು ತಿಳಿಸಿದರು. ಮುಂದಿನ ಗೋಷ್ಠಿಯಲ್ಲಿ ಡಾ. ಶ್ರೀಕಾಂತ ಪಾಟೀಲ್ ಅವರು "ಹಳಗನ್ನಡ ಕಲಿಕಾ ವಿಧಾನ" ಕುರಿತು ಉಪನ್ಯಾಸ ನೀಡಿ, ವಿದ್ಯಾರ್ಥಿಗಳಿಗೆ ಹಳಗನ್ನಡವನ್ನು ಸುಲಭ ಹಾಗೂ ಪರಿಣಾಮಕಾರಿಯಾಗಿ ಬೋಧಿಸಲು ಅನುಸರಿಸಬೇಕಾದ ವಿಧಾನಗಳ ಕುರಿತು ಮಾಹಿತಿ ನೀಡಿದರು. ಮಧ್ಯಾಹ್ನ ನಡೆದ ಗೋಷ್ಠಿಯಲ್ಲಿ ಡಾ. ರಾಜಕುಮಾರ ಅಲ್ಲೂರೆ ಅವರು "ಹಳಗನ್ನಡ ಸಾಹಿತ್ಯದ ನೆಲೆಗಳು" ಕುರಿತು ಮಾತನಾಡಿ, ಹಳಗನ್ನಡ ಸಾಹಿತ್ಯದ ಬೆಳವಣಿಗೆಗೆ ಕಾರಣವಾದ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಐತಿಹಾಸಿಕ ಅಂಶಗಳನ್ನು ವಿವರಿಸಿದರು.

ಅಂತಿಮ ಗೋಷ್ಠಿಯಲ್ಲಿ ಡಾ.ಲಕ್ಷ್ಮಿಕಾಂತ್ ಪಂಚಾಳ ಅವರು "ಹಳಗನ್ನಡ ಮತ್ತು ಸಮಕಾಲೀನ ಪಠ್ಯಗಳು" ವಿಷಯದ ಕುರಿತು ಉಪನ್ಯಾಸ ನೀಡಿ, ಆಧುನಿಕ ಶಿಕ್ಷಣ ವ್ಯವಸ್ಥೆಯಲ್ಲಿ ಹಳಗನ್ನಡ ಸಾಹಿತ್ಯವನ್ನು ಅಳವಡಿಸಿಕೊಳ್ಳುವ ಅಗತ್ಯವನ್ನು ಪ್ರತಿಪಾದಿಸಿದರು.

# ಶೇ.63ರಷ್ಟು ಮಳೆ ಕೊರತೆ, ನೀರಿಗೆ ಅಭಾವ ಉಂಟಾಗದಿರಲಿ: ಜಿ.ಪಂ ಸಿಇಒ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ



ಜಿಲ್ಲೆಯ ಗ್ರಾಮೀಣ ಭಾಗಗಳ ಪ್ರತಿಯೊಂದು ಮನೆಗೂ ಕಡ್ಡಾಯವಾಗಿ ಶುದ್ಧ ಕುಡಿಯುವ ನೀರು ಹಾಗೂ ಸಮರ್ಪಕ ನೈರ್ಮಲ್ಯ ವ್ಯವಸ್ಥೆಯನ್ನು ತಲುಪಿಸಲು ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ನೋಂಗ್ಜಾಯ ಮಹಮದ್ ಅಲಿ ಅಕ್ರಂ ಷಾ ನಿರ್ದೇಶಿಸಿದರು.

ಇಲ್ಲಿನ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಮಾಸಿಕ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಹಮ್ಮಿಕೊಳ್ಳಲಾಗಿರುವ ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಕಾಮಗಾರಿ ಇನ್ನೂ ಕೆಲವೆಡೆ ವಿವಿಧ ತಾಂತ್ರಿಕ ಕಾರಣಗಳಿಂದ ಪೂರ್ಣಗೊಂಡಿಲ್ಲ. ಕಾಮಗಾರಿ ವಿಳಂಬಕ್ಕೆ ಕಾರಣ ಸಮಸ್ಯೆಗಳ ಸೂಕ್ತ ಪರಿಹಾರ ಕಂಡು–ಕೊಂಡು ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ, ಶುದ್ಧ ಮತ್ತು ಶಾಶ್ವತ ಕುಡಿಯುವ ನೀರು ಪೂರೈಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗಬಾರದು. ಅಂತರ್ಜಲ ವೃದ್ಧಿ, ಜಲಮೂಲಗಳ ಸಂರಕ್ಷಣೆ ಹಾಗೂ ನೈರ್ಮಲ್ಯ ನಿರ್ವಹಣೆಗೆ ಮೊದಲ ಆದ್ಯತೆ ನೀಡಬೇಕು. ನಿಗದಿಪಡಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಜಿಲ್ಲೆಯಲ್ಲಿ ಈ ಬಾರಿ ತೀವ್ರ ಮಳೆ ಅಭಾವದಿಂದ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಈಗಾಗಲೇ ಜಿಲ್ಲೆಯಲ್ಲಿ 36 ಗ್ರಾಮಗಳನ್ನು ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳೆಂದು ಗುರಿತಿಸಲಾಗಿದ್ದು, ಇದಕ್ಕಾಗಿ 46 ಕಾಸಗಿ ಕಲೋಳವೆ ಬಾವಿಗಳಿಂದ ನೀರು ಪೈರೈಕೆ ಮಾಡಲಾಗುತ್ತಿದೆ. ಇದೇ ರೀತಿ ಮುಂದುವರೆದಲ್ಲಿ ಜಿಲ್ಲಾದ್ಯಂತೆ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆ ಹೆಚ್ಚಿದೆ. ಆದ್ದರಿಂದ ನೀರು ಸರಬರಾಜು ಮಾಡಲಾಗುವ ನೀರಿನ ಟ್ಯಾಂಕ್, ತೊಟ್ಟಿ ಸ್ವಚ್ಚತೆಗೆ ಆದ್ಯತೆ ನೀಡಬೇಕು. ಜನ ಜಾನುವಾರುಗಳಿಗೆ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಸಮನ್ವಯತೆ ಸಾಧಿಸಿ ಅಗತ್ಯ ಸಿದ್ದತೆ ಕೈಗೊಳ್ಳಬೇಕು.

ಮಳೆಕೊರತೆಯಿಂದ ಜಲಮೂಲ ಕುಸಿದಿದ್ದು, ಕ್ಲೋರೈಡ್ ಮತ್ತು ಫ್ಲೋರೈಡ್ ಅಂಶ ಹೆಚ್ಚಾಗಿ ಕಂಡು ಬರುತ್ತದೆ. ಇಂತಹ ನೀರನ್ನು ಸೇವನೆ ಮಾಡುವುದರಿಂದ ವಾಂತಿ, ಬೇದಿ ಕಾಲರಾದಂತಹ ಖಾಯಿಲೆಗಳಿಗೆ ತುತ್ತಾಗುವರು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕಾಲಕಾಲಕ್ಕೆ ಎಫ್‌ಟಿಕೆ ಕಿಟ್ ಬಳಸಿ ನೀರನ್ನು ಪರೀಕ್ಷಿಸಿ ಕುಡಿಯಲು ಯೋಗ್ಯವೇ ಇಲ್ಲವೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಗ್ರಾಮೀಣ ಭಾಗದಲ್ಲಿ ಜಾಗೃತಿ ಮೂಡಿಸಲು ನೀರು ಮತ್ತು ನೈರ್ಮಲ್ಯ ಯೋಜನೆಗಳ ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ಮಾಹಿತಿ ಮತ್ತು ಪ್ರಚಾರ ಇಲಾಖೆಗೆ ಜವಾಬ್ದಾರಿ ವಹಿಸಲಾಯಿತು.

# ಸಮುದಾಯ ಭವನ ಅಭಿವೃದ್ಧಿಗೆ ₹25 ಲಕ್ಷ ಅನುದಾನ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ



ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವತಿಯಿಂದ 2025–26ನೇ ಸಾಲಿನ ಮಾನ್ಯ ಮುಖ್ಯಮಂತ್ರಿಯವರ ಮೂಲಸೌಕರ್ಯ ಅಭಿವೃದ್ಧಿ ಯೋಜನೆ (ಸಿ.ಎಂ.ಐ.ಡಿ.ಪಿ.) ಅಡಿಯಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಗಳಿಗೆ ಹಗರಿಬೊಮ್ಮನಹಳ್ಳಿ ಪಟ್ಟಣದಲ್ಲಿ ಶುಕ್ರವಾರ ಭೂಮಿ ಪೂಜೆ ಕಾರ್ಯಕ್ರಮವನ್ನು ಅದ್ದೂರಿಯಾಗಿ ನೆರವೇರಿಸಲಾಯಿತು.

ಈ ಯೋಜನೆಯಡಿ ಹಗರಿಬೊಮ್ಮನಹಳ್ಳಿ ಪಟ್ಟಣದ ಹಾಲಸ್ವಾಮಿ ಸಮುದಾಯ ಭವನದ ಅಭಿವೃದ್ಧಿ ಹಾಗೂ ಇತರೆ ಮೂಲಭೂತ ಸೌಕರ್ಯಗಳ ಒದಗಿಸುವ ಕಾಮಗಾರಿಗೆ ₹25 ಲಕ್ಷಗಳ ಅಂ–ದಾಜು ವೆಚ್ಚದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಇದರ ಭೂಮಿ ಪೂಜೆಯನ್ನು ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ನೇಮಿರಾಜ್ ನಾಯ್ಕ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಕೆ. ನೇಮಿರಾಜ್ ನಾಯ್ಕ ಅವರು, ಸಮಾಜದ ಅಭಿವೃದ್ಧಿಗೆ ಅಗತ್ಯವಿರುವ ಸಮುದಾಯ ಭವನಗಳು ಮತ್ತು ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕೆ ಸರ್ಕಾರ ವಿಶೇಷ ಆದ್ಯತೆ ನೀಡುತ್ತಿದೆ. ಹಾಲಸ್ವಾಮಿ ಸಮುದಾಯದ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅನುದಾನವನ್ನು ಮಂಜೂರು ಮಾಡಿ ಸಮುದಾಯ ಭವನವನ್ನು ಇನ್ನಷ್ಟು ಸುಸಜ್ಜಿತಗೊಳಿಸಲಾಗುವುದು ಎಂದು ಭರವಸೆ ನೀಡಿದರು. ಕಾರ್ಯಕ್ರಮಕ್ಕೆ ಶ್ರೀ ಪರಮಪೂಜ್ಯ ಮಲ್ಲಿಕಾರ್ಜುನ ಸ್ವಾಮಿಗಳು (ಸೋಗಿ), ಶ್ರೀ ಪರಮಪೂಜ್ಯ ಡಾ. ಮಹೇಂದ್ರ ಸ್ವಾಮಿಗಳು (ಪುಣ್ಯಕ್ಷೇತ್ರ, ನಂದಿಪುರ) ಹಾಗೂ ಶ್ರೀ ಪರಮಪೂಜ್ಯ ಹಾಲಸಿದ್ದೇಶ್ವರ ಸ್ವಾಮಿಗಳು (ಹಾಲಸಿದ್ಧಿ ಮಠ, ಹಗರಿಬೊಮ್ಮನಹಳ್ಳಿ) ಅವರು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿ, ಸಮಾಜದಲ್ಲಿ ಐಕ್ಯತೆ, ಶಿಕ್ಷಣ ಮತ್ತು ಅಭಿವೃದ್ಧಿಗೆ ಇಂತಹ ಯೋಜನೆಗಳು ಸಹಕಾರಿಯಾಗಲಿ ಎಂದು ಹಾರೈಸಿದರು. ಕಾರ್ಯಕ್ರಮದಲ್ಲಿ ಪುರಸಭೆ ಸದಸ್ಯ ದೀಪಕ್ ಕಠರೆ, ಕೃಷ್ಣಮೂರ್ತಿ ಬಿ. ಬಡಿಗೇರ್, ತೆಲಗಿ ನೆಲ್ ಇಸ್ಮಾಯಿಲ್, ಕನ್ನಳ್ಳಿ ಚಂದ್ರಶೇಖರ್ ಸೇರಿದಂತೆ ಅನೇಕ ಗಣ್ಯರು, ಮುಖಂಡರು, ಸಮುದಾಯದ ಹಿರಿಯರು, ಯುವಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು, ಕಾಮಗಾರಿಯನ್ನು ಶೀಘ್ರ ಹಾಗೂ ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಮನವಿ ಮಾಡಿದರು.

ಭೂಮಿ ಪೂಜೆ ಕಾರ್ಯಕ್ರಮವು ಧಾರ್ಮಿಕ ವಿಧಿವಿಧಾನಗಳೊಂದಿಗೆ ನಡೆಯಿತು. ಭಕ್ತರು, ಸಾರ್ವಜನಿಕರು ಹಾಗೂ ಸಮುದಾಯದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು. ಈ ಕಾಮಗಾರಿ ಪೂರ್ಣಗೊಂಡ ಬಳಿಕ ಸಮುದಾಯದ ವಿವಿಧ ಧಾರ್ಮಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅನುಕೂಲವಾಗಲಿದ್ದು, ಸ್ಥಳೀಯರ ಬಹುಕಾಲದ ಬೇಡಿಕೆ ಈಡೇರುವಂತಾಗಿದೆ.

# ಬರ ಪರಿಸ್ಥಿತಿ ಸಮರ್ಥವಾಗಿ ಎದರಿಸಲು ಸಜ್ಜಾಗಿ: ಸುಬೋಧ ಯಾದವ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಪ್ರಸಕ್ತ ವರ್ಷದಲ್ಲಿ ಇದೂವರೆಗೆ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ಮುಂದಿನ ದಿನದಲ್ಲಿ ಬರದ ಛಾಯೆ ಆವರಿಸುವ ಸಾಧ್ಯತೆ ಇದ್ದು, ಅದನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸಜ್ಜಾಗಬೇಕೆಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಇಂತಹ ಬರ ಪರಿಸ್ಥಿತಿಯಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಪೂರೈಕೆ ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು. ಜಾನುವಾರುಗಳಿಗೆ ಅಗತ್ಯ ಪ್ರಮಾಣದಲ್ಲಿ ಮೇವು ದಾಸ್ತಾನು ಮಾಡಿಟ್ಟುಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬಿದ್ದ ಮಳೆ ಪ್ರಮಾಣವನ್ನು ಮಾಪನ ಮಾಡಬೇಕಾದ ರೇನ್ ಗೇಜ್ ಸ್ಟೇಷನ್ ಕೆಲವೆಡೆ ಕಾರ್ಯನಿರ್ವಹಿಸುತ್ತಿಲ್ಲ ಎಂಬುದನ್ನು ಅರಿತ ಅವರು, ಸಮರ್ಪಕ ಕಾರ್ಯನಿರ್ವಹಣೆ ಇಲ್ಲದೆ ಹೋದಲ್ಲಿ ನಿಖರ ಮಳೆ ಪ್ರಮಾಣ ಸಂಗ್ರಹಣೆ ಕಷ್ಟಸಾಧ್ಯ. ಕೂಡಲೆ ಅವೆಲ್ಲ ಸ್ಟೇಷನ್‌ಗಳನ್ನು ದುರಸ್ತಿಪಡಿಸಬೇಕೆಂದರು. ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಈಗಾಗಲೆ ಕೆ.ಎಸ್.ಎನ್.ಡಿ.ಎಂ.ಸಿ. ಸಂಸ್ಥೆಯಿಂದ ಟೆ–ಂಡರ್ ಕರೆದಿದ್ದು, ದುರಸ್ತಿ ಕಾರ್ಯ ನಡೆದಿದೆ ಎಂದು ಉತ್ತರಿಸಿದರು.

ಜಿಲ್ಲೆಯ ವಿವಿಧ ಜಲಾಶಯಗಳ ಸ್ಥಿತಿಗತಿ ಅವಲೋಕಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಮುಂದಿನ ದಿನದಲ್ಲಿ ಮಳೆ ಬಾರದೆ ಹೋದಲ್ಲಿ ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಸಹ ಮಾಡಿಟ್ಟುಕೊಳ್ಳಬೇಕು. ಬಾವಿ, ಕೊಳವೆ ಬಾವಿ ಜಲಮೂಲಗಳ ನೆರವಿನಿಂದ ನೀರು ಪೂರೈಕೆ ಮಾಡಬೇಕು. ಕಲಬುರಗಿ ನಗರದಲ್ಲಿ ನಡೆಯುತ್ತಿರುವ 24 ಗಂಟೆ ನಿರಂತರ ಕುಡಯುವ ನೀರು ಯೋಜನೆ ಕಾಮಗಾರಿಗೆ ವೇಗ ಹೆಚ್ಚಿಸಬೇಕು ಮತ್ತು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದ ಕಡೆ ಟ್ಯಾಂಕರ್ ಮೂಲಕ ಪೂರೈಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚನೆ ಕೊಟ್ಟರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಮಾತನಾಡಿ ನಗರದ ಜನತೆಗೆ ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕೆ ನಾರಾಯಣಪುರ ಜಲಾಶಯದಿಂದ ನೀರು ತರುವ ಪೈಪ್ ಲೈನ್ ಕಾಮಗಾರಿಯ 1,850 ಕೋಟಿ ರೂ. ಮೊತ್ತದ ಯೋಜನೆ ಡಿ.ಪಿ.ಆರ್ ಸಿದ್ಧವಾಗಿದೆ. ಪ್ರಸಕ್ತ ನಗರದಲ್ಲಿ ನೀರಿನ ಸಮಸ್ಯೆ ಇದ್ದ ವಾರ್ಡ್‌ನಲ್ಲಿ ಪ್ರತಿ ದಿನ 200 ಟ್ಯಾಂಕರ್ ನೀರು ಪೂರೈಕೆ ಮಾಡಲಾಗುತ್ತಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಕಳೆದ ಜೂನ್ 1 ರಿಂದ ಇಲ್ಲಿಯವೆಗೆ ವಾಡಿಕೆಯಂತೆ 168.1 ಮಿಲಿ ಮಿಟರ್ ಮಳೆಯಾಗಬೇಕಿತ್ತು. ಆಗಿದ್ದು ಕೇವಲ 80.8 ಮಿಲಿ ಮೀಟರ್ ಮಾತ್ರ. ಹೀಗಾಗಿ ಮಳೆ ಕೊರತೆಯಿಂದ ಮುಂಗಾರು ಋತುವಿನಲ್ಲಿ ನಿಗದಿತ ಗುರಿ 8,90,633.8 ಹೆಕ್ಟೇರ್ ಪೈಕಿ ಇದೂವರೆಗೆ 2,72,199 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಜಿಲ್ಲೆಯ ಹಲವು ತಾಲೂಕಿನಲ್ಲಿ ಬಿತ್ತನೆಗೆ ಬೇಕಾದ ಮಳೆ ಇನ್ನು ಬಂದಿಲ್ಲ. ಭತ್ತ, ಉದ್ದು, ತೊಗರಿ, ಹೆಸರು, ಸೋಯಾ ಅವರೆ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ ಬೆಳೆಗಳ ಬಿತ್ತನೆಗೆ ಈಗಾಗಲೆ 22,192 ಕ್ವಿಂಟಾಲ್ ವಿತರಿಸಿದೆ. ಅದೇ ರೀತಿ 51,045 ಮೆಟ್ರಿಕ್ ಟನ್ ರಸಗೊಬ್ಬರ ವಿತರಿಸಿದ್ದು, 32,894 ಮೆ.ಟನ್ ಇನ್ನು ಸ್ಟಾಕ್ ಇದೆ ಎಂದರು. ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸಂಜಯ್ ರೆಡ್ಡಿ ಮಾತನಾಡಿ ಮುಂದಿನ 34 ವಾರಕ್ಕೆ ಬೇಕಾಗುವ ಮೇವು ಜಿಲ್ಲೆಯಲ್ಲಿ ದಾಸ್ತಾನಿದೆ ಎಂದು ಸಭೆಗೆ ಮಾಹಿತಿ ನೀಡಿದರು.

**ಬೆಳೆ ವಿಮೆ ನೋಂದಣಿ ಹೆಚ್ಚಿಸಿ:** ಬೆಳೆ ವಿಮೆ ಕುರಿತು ಚರ್ಚೆಯಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ, ಕಳೆದ ವರ್ಷ ಜಿಲ್ಲೆಗೆ 650 ಕೋಟಿ ರೂ. ಬೆಳೆ ವಿಮೆ ಮಂಜೂರಾಗಿದ್ದು, ರೈತರಿಗೆ ತುಂಬಾ ಅನುಕೂಲವಾಗಿದೆ. ಈ ವರ್ಷ ಸಹ ಬರದ ಛಾಯೆ ಆವರಿಸಿರುವುದರಿಂದ ರೈತಾಪಿ ಜನರು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ನೋಂದಣಿ ಮಾಡಿಕೊಂಡಲ್ಲಿ ಪ್ರಕೃತಿ ವಿಕೋಪ ಸೇರಿದಂತೆ ಇನ್ನಿತರ ಕಷ್ಟ ಕಾಲದಲ್ಲಿ ಅವರ ನೆರವಿಗೆ ಬರಲಿದೆ. ಹೀಗಾಗಿ ರೈತರಲ್ಲಿ ಬೆಳೆ ವಿಮೆಗೆ ಜಾಗೃತಿ ಮೂಡಿಸಿ ನೋಂದಣಿ ಹೆಚ್ಚಿಸಬೇಕೆಂದು ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

**ಸಮಸ್ಯಾತ್ಮಕ ಹಳ್ಳಿಗಳಿಗೆ ಶಾಶ್ವತ ಯೋಜನೆ ರೂಪಿಸಿ:** ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಸಮಸ್ಯೆ ಕುರಿತು ಚರ್ಚೆಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿ 5 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಮತ್ತು 35 ಗ್ರಾಮಗಳಿಗೆ ಖಾಸಗಿ ಬೋರವೆಲ್ ಬಾಡಿಗೆ ಪಡೆದು ನೀರು ಪೂರೈಸಲಾಗುತ್ತಿದೆ. ಪ್ರತಿ ವರ್ಷ 168 ಗ್ರಾಮಗಳು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿವೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಇ.ಇ. ಜಗದೇವಪ್ಪ ಜೀವಣಗಿ ಅವರು ಸಭೆಗೆ ತಿಳಿಸಿದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ ಮಾತನಾಡಿ, ಪ್ರತಿ ವರ್ಷ ಈ ಗ್ರಾಮಗಳಿಗೆ ಬಾಡಿಗೆ ಕೊಳವೆ ಬಾವಿ, ಟ್ಯಾಂಕರ್ ಮೂಲಕ ನೀರು ಪೂರೈಸುವುದು ತಾತ್ಕಲಿಕ ವ್ಯವಸ್ಥೆ. ಆದರೆ ಈ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆ ಸೇರಿದಂತೆ ಇನ್ನಿತರ ಯೋಜನೆಗಳ ಮೂಲಕ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಆ ನಿಟ್ಟಿನಲ್ಲಿ ಯೋಜನೆ ರೂಪಿಸಬೇಕೆಂದು ಸಲಹೆ ನೀಡಿದರು.

ಇ.ಇ. ಜಗದೇವಪ್ಪ ಜೀವಣಗಿ ಮಾತು ಮುಂದುವರೆಸಿ, ಪ್ರಸಕ್ತ ಸಾಲಿಗೆ ಜಿಲ್ಲೆಯಲ್ಲಿ ಹಳ್ಳಿಯಲ್ಲಿನ ಕುಡಿಯುವ ನೀರು ಸರಬರಾಜಿಗೆಂದೆ ಗ್ರಾಮೀಣಾಭಿವೃದ್ಧಿ ಇಲಾಖೆಯು 5 ಕೋಟಿ ರೂ. ಹಣ ಬಿಡುಗಡೆ ಮಾಡಿದ್ದು, ಬೋರವೆಲ್ ಕೊರೆಸಲು 33 ಲಕ್ಷ ರೂ. ಇದೂವರೆಗೆ ಖರ್ಚು ಮಾಡಿದೆ. ಕಡಿಯುವ ನೀರಿಗೆ ಯಾವುದೇ ಹಣದ ಕೊರತೆ ಇಲ್ಲ ಎಂದು ಸ್ಪಷ್ಟಪಡಿಸಿದರು.

**ಕೆ.ಕೆ.ಆರ್.ಡಿ.ಬಿ. ಕಾಮಗಾರಿ ವಿಳಂಬಕ್ಕೆ ಅಸಮಾಧಾನ:** ಕೆ.ಕೆ.ರ್.ಡಿ.ಬಿ. ಮಂಡಳಿ ಅನುದಾನದಡಿ ಜಿಲ್ಲೆಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದ ಉಸ್ತುವಾರಿ ಕಾರ್ಯದರ್ಶಿಗಳು, ಕಳೆದ 2024–25ನೇ ಸಾಲಿನಲ್ಲಿ ಮಂಜೂರಾದ ಕಾಮಗಾರಿಗೆ ಹಣ ಬಿಡುಗಡೆ ಮಾಡಿದರೂ ಇದೂವರೆಗೆ ಕೆಲ ಕಾಮಗಾರಿಗಳನ್ನು ಆರಂಭಿಸಿದ ಲೋಕೋಪಯೋಗಿ ಇಲಾಖೆ, ಕೆ.ಆರ್.ಐ.ಡಿ.ಎಲ್ ಕಾರ್ಯಶೈಲಿಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಎರಡು ವರ್ಷವಾದರ ಕಾಮಗಾರಿನೆ ಆರಂಭಿಸಿಲ್ಲ ಎಂದರೆ ಮುಗಿಸೋದು ಯಾವಾಗ ಎಂದು ಇ.ಇ. ಗಳಿಗೆ ಪ್ರಶ್ನಿಸಿದ ಅವರು, ನಿಮಗೆ ಕೆಲಸ ಹೆಚ್ಚಾದರೆ ಏಕೆ ಕಾಮಗಾರಿ ವಹಿಸಿಕೊಂಡಿದ್ದೀರಿ ಎಂದು ಗರಂ ಆದರು.

ಇನ್ನು ಮಂಡಳಿಯಿಂದ ಕೈಗೊಳ್ಳುವ ಯಾವುದೇ ಕಾಮಗಾರಿ ಪ್ರಗತಿಯ ವಿವರವನ್ನು ಸಂಬಂಧಪಟ್ಟ ಇಲಾಖೆಯವರು ಆಗಾಗ ಮಂಡಳಿ ಗಮನಕ್ಕೆ ತರಬೇಕು ಮತ್ತು ಮಂಡಳಿ ಅಧಿಕಾರಿಗಳಿಂದ ತಪಾಸಣೆಗೆ ಒಳಪಡಿಸಬೇಕು ಎಂದು ಸಲಹೆ ನೀಡಿದರು. ಕೆ.ಕೆ. ಆರ್.ಡಿ.ಬಿ. ಕಾರ್ಯದರ್ಶಿ ನಲಿನ್ ಅತುಲ್, ಅಪರ ನಿರ್ದೇಶಕಿ ಪ್ರವೀಣ್ ಪ್ರಿಯಾ ಜಿಲ್ಲೆಯಲ್ಲಿ ನಡೆಯುತ್ತಿರುವ ಮಂಡಳಿ ಕಾಮಗಾರಿಗಳ ಕುರಿತು ವಿವರಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನುರ್, ಸಹಾಯಕ ಆಯುಕ್ತರಾದ ಸಾಹಿತ್ಯ ಆಲದಕಟ್ಟಿ, ಪ್ರೊಬೇಷನರ್ ಐ.ಎ.ಎಸ್ ಅಧಿಕಾರಿ ಶಿಖರ್ ಮೋಘಾ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಸಂತೋಷ ಇನಾಂದಾರ ಸೇರಿದಂತೆ ಸಣ್ಣ ನೀರಾವರಿ, ಕೆ.ಎನ್.ಎನ್.ಎಲ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

:CITATION:

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.2514/2026.**

**Petitioners:**

1. Gopal S/o late Bheemanna, Age: 58-yrs. Occu: Labour, R/o Village Nandgaon. Tq. Humnabad. Dist. Bidar.
2. Saraswati W/o Gopal, Age: 57-yrs. Occu: House hold, R/o Village Nandgaon. Tq. Humnabad. Dist. Bidar.
3. Chinamma W/o Kanteppa, Age: 60-yrs. Occu: House hold, R/o Village Nandgaon. Tq. Humnabad. Dist. Bidar.

**Respondent:**

**The Registrar of Birth and Death through The Tahasildar Humnabad. Dist. Bidar.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner No.1 father in law of petitioner 2 and 3 by namely LATE. BHEEMANNA S/O MALLAPPA, he was died on 12.12.2002 at Village Nandgaon. Tq. Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 14.08.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 29-06-2026.

//By order of the court//

**Chief Ministerial Officer,**
**Prl. Civil Judge & JMFC Court,**
**Humnabad.**

# ಕೆರೆಗಳಿಗೆ ನೀರು ತುಂಬಿಸಿ,ಆಗುತ್ತಿರುವ ಸೋರಿಕೆ ತಪ್ಪಿಸಲು ಮನವಿ

• **ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ**

ಕೆರೆಗಳಿಗೆ ನೀರು ತುಂಬಿಸಲು ಆಗುತ್ತಿರುವ ಸೋರಿಕೆ ಸಮಸ್ಯೆಯನ್ನು ಪರಿಹರಿಸಿ ಎಲ್ಲಾ ಕೆರೆಗಳಿಗೂ ನೀರು ತುಂಬಿಸಲು ಶಾಸಕ ಕೆ ವೆಂಕಟೇಶ್ ರವರು ಮುಂದಾಗಬೇಕು ಎಂದು ತಾಲ್ಲೂಕು ಮುಖಂಡರಾದ ಟಿ ಈರಯ್ಯ. ಪಿಪಿ ಪುಟ್ಟ ನಾಯಕ. ಸೀಗೂರು ವಿಜಯ್ ಕುಮಾರ್. ಎಚ್ ಡಿ ರಮೇಶ್ ಮನವಿ ಮಾಡಿಕೊಂಡಿದ್ದಾರೆ.

ತಾಲೂಕಿನ ಮುತ್ತಿನ ಮುಳೆಸೋಗೆ ಗ್ರಾಮದ ಬಳಿ ಹಾಲಿ ಶಾಸಕರಾದ ಕೆ ವೆಂಕಟೇಶ್ ರವರು ಕಾವೇರಿ ನದಿಯಿಂದ 79 ಗ್ರಾಮಗಳ 93 ಸಾವಿರ ರೈತರ ಭೂಮಿಗೆ ನೀರುಣಿಸುವ 150 ಕೆರೆಗಳಿಗೆ ನೀರು ತುಂಬಿಸುವ 295 ಕೋಟಿ ರೂ ವೆಚ್ಚದ ಮಹತ್ವಕಾಂಕ್ಷಿ ಯೋಜನೆ ಪೂರ್ಣ ನಿರ್ಮಾಣವಾಗಿ ಕಳೆದ 8 ತಿಂಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಲೋಕಾರ್ಪಣೆ ಮಾಡಿರುವುದು ಎಲ್ಲರಿಗೂ ತಿಳಿದ ವಿಷಯವಾಗಿದೆ.

ಆದರೆ ಪ್ರಸ್ತುತವಾಗಿ ಮಳೆ ಇಲ್ಲದೆ ಕೆರೆಗಳು ಕಟ್ಟೆಗಳಲ್ಲಿ ನೀರಿಲ್ಲದೆ ಬರಿದಾಗಿತ್ತು ಜನ ಜಾನುವಾರುಗಳಿಗೆ ಕುಡಿಯುವ ನೀರಿಲ್ಲದೆ ಪರಿತಪಿಸುವಂತಹಾಗಿದೆ ಎಂದು ತಾಲೂಕು ದರಕಾಸ್ ಸಮಿತಿ ಸದಸ್ಯ ಟಿ ಈರಯ್ಯ ಮಾಜಿ ಗ್ರಾ ಪಂ ಅಧ್ಯಕ್ಷ ಸೀಗೂರು ವಿಜಯಕುಮಾರ್ ಮಾಜಿ ಪುರಸಭೆ ಸದಸ್ಯ ಪಿಪಿ ಪುಟ್ಟ ನಾಯಕ ತಾಲೂಕು ಕೃಷಿಕ ಸಮಾಜದ ಪ್ರಧಾನ ಕಾರ್ಯದರ್ಶಿ ಎಚ್ ಡಿ ರಮೇಶ್ ತಿಳಿಸಿದ್ದಾರೆ. ಅಲ್ಲದ ರೈತರ ಜಮೀನಿನಲ್ಲಿ ತೋಡಿಸಲಾಗಿರುವ ಕೊಳವೆ ಬಾವಿಗಳಲ್ಲಿ ಅಂತರ್ಜಲ ಖುಷಿತ ವಾಗಿ ನೀರು ಬಾರದೆ ಕೃಷಿ ಚಟುವಟಿಕೆ ಆರಂಭವಾಗಿ ಬಿತ್ತನೆ ಕಾರ್ಯ ಮುಗಿದು ಸಸಿ ಹಂತದಲ್ಲಿ ಬೆಳವಣಿಗೆಗೆ ಮಳೆ ಇಲ್ಲದೆ ಬೊತ್ತಿ ಹೋಗುತ್ತಿದ್ದು ರೈತರು ಕೃಷಿ ಚಟುವಟಿಕೆಗಳನ್ನು ಸ್ಥಗಿತಗೊಳಿಸಿ ಮುಂದಾಗುವ ಆಹಾರ ಕೊರತೆ ಹಾಗೂ ಆರ್ಥಿಕ ಸಮಸ್ಯೆಯ ಬಗ್ಗೆ ಚಿಂತಕಾಂತರಾಗಿದ್ದಾರೆ ಎಂದು ಮುಖಂಡ ವಿವರಿಸಿದ್ದಾರೆ. ಕಾವೇರಿ ನದಿ ನೀರಾವರಿ



ನಿಗಮ ಮತ್ತು ಹಾರಂಗಿ ಬಲದಂಡೆ ವಿಭಾಗಕ್ಕೆ ಸಂಬಂಧಿಸಿದಂತ ಎಂಜಿನಿಯರ್ ಗಳ ಹೇಳಿಕೆ ಪ್ರಕಾರ ಈಗೂವರವಿಗೂ ಮುಖ್ಯ



ಪೈಪ್ ಮೂಲಕ ಕೆರೆಗಳಿಗೆ ಹಾಯ್ದು ಹೋಗಿರುವ ಪೈಪುಗಳಲ್ಲಿ ನೀರು ಸೋರಿಕೆಯ ಮುಖ್ಯ ಕಾರಣದಿಂದ ಕಾವೇರಿ ನದಿಯಲ್ಲಿ ನೀರಿದ್ದರೂ ಸಹ ಸಂಪೂರ್ಣವಾಗಿ ಪೂರೈಕೆ ಮಾಡಲಾಗುತ್ತಿಲ್ಲ ಕೇವಲ 20 ಕೆರೆಗಳಿಗೆ ನದಿಯ ಎಡ ಭಾಗದ ಕೆರೆಗಳಿಗೆ ಕೆರೆ ಕಟ್ಟೆಗಳಿಗೆ ಮಾತ್ರ ನೀರು ತುಂಬಿಸುವ ಕೆಲಸ ನಡೆಯುತ್ತಿದೆ ಎಂದು ಹೇಳುತ್ತಿದ್ದಾರೆ. ಆದರೆ ಕೇರಳ ರಾಜ್ಯ ಮತ್ತು ಕೊಡಗು ಜಿಲ್ಲೆಗಳಲ್ಲಿ ಮಳೆ ಬೀಳುತ್ತಿರುವ ಪರಿಣಾಮ ಕಾವೇರಿ ನದಿಯ ನೀರಿನ ಮಟ್ಟ ಏರಿದ್ದು ಈ ಸಂದರ್ಭದಲ್ಲಿ ನೀರಿನ ಭವಣೆಯನ್ನು ನೀಗಿಸಿಕೊಳ್ಳಬೇಕಾದ ಅನಿವಾರ್ಯತೆ ಇರುವುದರಿಂದ ಹಾರಂಗಿ ಹಣೆಕಟ್ಟು ವಿಭಾಗದ ಇಂಜಿನಿಯರ್ ಗಳ ಮೂಲಕ ಈ ನೀರಿನ ಸೋರಿಕೆ ಸಮಸ್ಯೆಯನ್ನು ಪರಿಹರಿಸಿ ಕೂಡಲೇ 79 ಗ್ರಾಮಗಳ 150 ಕೆರೆಗಳಿಗೂ ನೀರು ತುಂಬಿಸುವ ಕೆಲಸ ಮಾಡಿಸಬೇಕಾಗಿದೆ ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.

ಅಧಿಕಾರಿಗಳ ಸಭೆ ಕರೆಯಲಾಗಿದೆ : ಇದೇ ತಿಂಗಳು 20 ನೇ ತಾರೀಖಿನ ಸೋಮವಾರ ಸಂಬಂಧಿಸಿದ ಅಧಿಕಾರಿಗಳ ಸಭೆ ಕರೆಯಲಾಗಿದ್ದು ಶೀಘ್ರದಲ್ಲಿ ಎಲ್ಲಾ150 ಕೆರೆಗಳಿಗೂ ನೀರು ತುಂಬಿಸುವ ಕಾರ್ಯವನ್ನು ಅತಿ ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು ಎಂದು ಶಾಸಕ ಕೆ ವೆಂಕಟೇಶ್ ಸ್ಪಷ್ಟಪಡಿಸಿದ್ದಾರೆ.

# ಅಯೋಧ್ಯೆ ರಾಮ ಮಂದಿರ ಪ್ರಕರಣ : ಸಿಬಿಐ ತನಿಖೆಗೆ ವೆಂಕಟೇಶ್ ಹೆಗ್ಡೆ ಒತ್ತಾಯ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಅಯೋಧ್ಯೆರಾಮ ಮಂದಿರದಲ್ಲಿ ನಡೆದಿದೆ ಎಂದು ಆರೋಪಿಸಲಾಗುತ್ತಿರುವ ಭ್ರಷ್ಟಾಚಾರದ ಕುರಿತು ಸರ್ವೋಚ್ಚನ್ಯಾಯಾಲಯದ ಹಾಲಿ ನ್ಯಾಯಾಧೀಶರ ಉಸ್ತುವಾರಿಯಲ್ಲಿ ಸಿಬಿಐ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ಕಾಂಗ್ರೆಸ್ ಜಿಲ್ಲಾ ಪ್ರಚಾರ ಸಮಿತಿಯ ಮುಖ್ಯ ಸಂಯೋಜಕ ವೆಂಕಟೇಶ್ ಹೆಗ್ಡೆ ಶುಕ್ರವಾರ ನಗರದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಯೋಧ್ಯೆ ರಾಮ ಮಂದಿರ ನಿರ್ಮಾಣ ಮತ್ತು ದೇವಸ್ಥಾನಕ್ಕೆ ಭಕ್ತರಿಂದ ಬಂದಿರುವ ಹಣ, ಚಿನ್ನ, ಬೆಳ್ಳಿ, ಆಭರಣಗಳು ಹಾಗೂ ಇತರೆ ಕಾಣಿಕೆಗಳ ನಿರ್ವಹಣೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿವೆ ಎಂದು ಹೇಳಿದರು.ಈ ಆರೋಪಗಳ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ಉತ್ತರ ಪ್ರದೇಶ ಸರ್ಕಾರ ನೇಮಕ ಮಾಡಿರುವ ರಾಮ ಮಂದಿರ ಟ್ರಸ್ಟ್‌ನ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರನ್ನು ಕೂಡಲೇ ವಜಾಗೊಳಿಸಿ,ತಾತ್ಕಾಲಿಕವಾಗಿ ಆಡಳಿತಾಧಿಕಾರಿಯನ್ನು ನೇಮಿಸಬೇಕು. ನಂತರ ಪಾರದರ್ಶಕ ಮತ್ತು ಪ್ರಾಮಾಣಿಕ ವ್ಯಕ್ತಿಗಳನ್ನು ಟ್ರಸ್ಟ್‌ಗೆ ಆಯ್ಕೆ ಮಾಡುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು.ಈ ಪ್ರಕರಣದ



ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಲು ಸರ್ವೋಚ್ಚ ನ್ಯಾಯಾಲಯದ ಹಾಲಿ ನ್ಯಾಯಾಧೀಶರ ಉಸ್ತುವಾರಿಯಲ್ಲಿ ಸಿಬಿಐ ತನಿಖೆಗೆ ಆದೇಶಿಸಬೇಕು ಎಂದು ಅವರು ಆಗ್ರಹಿಸಿದರು.ಅದೇ ವೇಳೆ, ಈ ಬೆಳವಣಿಗೆಗೆ ನೈತಿಕ ಹೊಣೆ ಹೊತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ದೇಶದ ಜನರ ಕ್ಷಮೆ ಕೋರಬೇಕು ಎಂದು ಒತ್ತಾಯಿಸಿದರು.

ದೇಶದ ಜನರ ಧಾರ್ಮಿಕ ನಂಬಿಕೆಗೆ ಸಂಬಂಧಿಸಿದ ವಿಷಯದಲ್ಲಿ ಯಾವುದೇ ರೀತಿಯ ಅಕ್ರಮ ಅಥವಾ ಭ್ರಷ್ಟಾಚಾರ ನಡೆದಿದ್ದರೆ ಅದನ್ನು ಮುಚ್ಚಿಹಾಕದೆ, ಸತ್ಯಾಂಶವನ್ನು ಬಹಿರಂಗಪಡಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.ಈ ಸಂಧರ್ಭದಲ್ಲಿ ತಾಲೂಕ ಉಪಾಧ್ಯಕ್ಷ ತೋಟಪ್ಪ ಕಾಮನೂರ, ಪ್ರಕಾಶ ರಾಠೋಡ್, ಶೇಖರಗೌಡ ಮಾಲಿಪಾಟೀಲ್, ಸೋಮಲಿಂಗಪ್ಪ ಹುಡೆದ, ಇನ್ನಿತರರು ಉಪಸ್ಥಿತರಿದ್ದರು.

# ಜು. 20 ರಂದು ಮರುಳಾರಾಧ್ಯ ಶಿವಾಚಾರ್ಯರ ಜನ್ಮ ರಜತ ಮಹೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**



ಬೃಹನ್ಮಠಚಾಂಗಲೇರಾ ಮತ್ತು ಚಿಟಗುಪ್ಪ ಶ್ರೀ ಮಠದ ಕಿರಿಯ ಪೀಠಾಧಿಪತಿಗಳಾದ ಶ್ರೀ ಮರುಳಾರಾಧ್ಯ ಶಿವಾಚಾರ್ಯ ಅಪ್ಪಾಜಿ ಅವರ 25ನೇ ವರ್ಷದ ಜನ್ಮ ರಜತಮೋತ್ಸವದ ನಿಮಿತ್ತ ಸಮಾಜದ ಒಳಿತಿಗಾಗಿ ಮತ್ತೊಂದು ಜೀವದ ಉಳಿವಿಗಾಗಿ ಜುಲೈ 20ರಂದು ಪಟ್ಟಣದ ಶ್ರೀ ಗುರು ಅಯ್ಯಪ್ಪ ಸ್ವಾಮಿ ಹಿರೇಮಠ ಸಂಸ್ಥಾನದಲ್ಲಿ ರಕ್ತದಾನ ಶಿಬಿರ, ಮತ್ತು ಉಚಿತ ಆರೋಗ್ಯತಪಾಸಣೆ ಶಿಬಿರವನ್ನು ಆಯೋಜಿಸಲಾಗಿದೆ. ಸಾಯಂಕಾಲ ಬೀದರ್ ಜಿಲ್ಲೆಯ ವಿವಿಧ ಮಠಾಧೀಶರ ಸಾನಿಧ್ಯದಲ್ಲಿ ಧರ್ಮಸಭೆ ಜರುಗಲಿದೆ. ಆದ ಕಾರಣ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಭಕ್ತರ ಬಳಗ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಲಸೆ ಹೋಗ್ಬೇಡಿ ನಿಮ್ಮೂರಲ್ಲೇ ಕೆಲಸ ಮಾಡಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**



ನರೇಗಾ ಯೋಜನೆಯ ಬದಲಾಗಿ ಜುಲೈ1ರಿಂದ ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಆಜೀವಿಕಾ ಮಿಷನ್ (ಗ್ರಾಮೀಣ) ವಿಬಿ–ಜಿ ರಾಮ್ ಜಿ ಯೋಜನೆ ಅನುಷ್ಠಾನಗೊಂಡಿದ್ದು, ಈ ಯೋಜನೆಯು ಗ್ರಾಮೀಣ ಬಡ ಕುಟುಂಬಕ್ಕೆ ವರ್ಷಕ್ಕೆ 125 ದಿನಗಳ ಕೆಲಸದ ಖಾತ್ರಿ ನೀಡುತ್ತದೆ ಹಾಗಾಗಿ ತಾಲೂಕಿನಲ್ಲಿರುವ ವಿಬಿ–ಜಿ ರಾಮ್ ಜಿ (ನರೇಗಾ) ಯೋಜನೆಯ ಕಾರ್ಮಿಕರು ಕೆಲಸ ಹುಡುಕಿಕೊಂಡು ಬೇರೆ ನಗರಗಳಿಗೆ ವಲಸೆ ಹೋಗಬಾರದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಗ್ರಾಮೀಣ ಭಾಗದಲ್ಲಿರುವ ಬಡ ಕೂಲಿ ಕಾರ್ಮಿಕರ ಆಶಾಕಿರಣವಾಗಿರುವ ನರೇಗಾ ಯೋಜನೆ ಬಂದ ಆಗಿಲ್ಲ; ಕೂಲಿ ಕಾರ್ಮಿಕರ ಹಿತದೃಷ್ಟಿಗೆ ಅನುಗುಣವಾಗಿ ಕೇಂದ್ರ ಸರಕಾರವು ನರೇಗಾ ಯೋಜನೆಯಲ್ಲಿ ಹಲವು ಮಾರ್ಪಾಡುಗಳನ್ನು ಮಾಡಿರುವ ಜತೆಗೆ ನರೇಗಾ ಯೋಜನೆಗೆ ವಿಬಿ–ಜಿ ರಾಮ್ ಜಿ ಎಂದು ಹೊಸ ನಾಮಕರಣ ಮಾಡಿದೆ. ಈ ಹಿಂದೆ ನರೇಗಾ ಯೋಜನೆಯಡಿ 100 ದಿನಗಳಿದ್ದ ಕೆಲಸವನ್ನು, ಈ ಹೊಸ ಯೋಜನೆಯಲ್ಲಿ 125 ದಿನಗಳಿಗೆ ಹೆಚ್ಚಿಸಲಾಗಿದೆ. ಕಾರ್ಮಿಕರ 370 ರೂ.ಯಿಂದ 382 ರೂ. ಕೂಲಿದರ ಹೆಚ್ಚಿಸಿದೆ. 266 ಕಾಮಗಾರಿಗಳು ಇದದ್ದು ಈಗ 318 ಕಾಮಗಾರಿಗಳನ್ನು ಪರಿಚಯಿಸಿದೆ. ಇದರಲ್ಲಿ ಬಹುತೇಕ ಕಾಮಗಾರಿಗಳು ಕೂಲಿ ಆಧಾರಿತವಾಗಿವೆ. ಹಾಗಾಗಿ, ಕಾರ್ಮಿಕರು ಕೂಲಿ ಕೆಲಸದ ವಿಷಯದಲ್ಲಿ ಭಯಪಡಬೇಕಿಲ್ಲ. ಉದ್ಯೋಗ ಅರಿಸಿ ಗೂಳೆ ಹೋಗದೆ ವಿಬಿ–ಜಿ ರಾಮ್ ಜಿ ಯೋಜನೆಯಡಿ ನಿಮ್ಮೂರಲ್ಲೇ ಕೆಲಸ ಮಾಡಿ. ನಿಮ್ಮ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಯೋಜನೆಯಡಿ ಕೆಲಸದ ಬೇಡಿಕೆಗಾಗಿ ನಮೂನೆ 6ರಲ್ಲಿ ಅರ್ಜಿ ಸಲ್ಲಿಸಿ. ಕಾರ್ಮಿಕ ಸ್ನೇಹಿಯಾಗಿರುವ ವಿಬಿ–ಜಿ ರಾಮ್ ಜಿ ಈ ಹೊಸ ಯೋಜನೆಯ ಸದುಪಯೋಗ ಪಡೆದುಕೊಳ್ಳಿ ಎಂದು ಅವರು ತಿಳಿಸಿದ್ದಾರೆ.

# ಅಂಗನವಾಡಿ ಮಕ್ಕಳ ಪ್ರವೇಶ ಮತ್ತು ಬೀಳ್ಕೊಡುಗೆ




• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ತಾಲೂಕಿನ ಮಂಗಳೂರು ವಲಯದ ಕುದರಿಮೋತಿ ಗ್ರಾಮದ ಅಂಗನವಾಡಿಯಲ್ಲಿ ಮಕ್ಕಳ ಪ್ರವೇಶ ಮತ್ತು ಬೀಳ್ಕೊಡುಗೆ ಕಾರ್ಯಕ್ರಮ ನಡೆಯಿತು. ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ, ಮಹಿಳಾ, ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಟಾಟಾ ಕಲಿಕಾ ಟ್ರಸ್ಟ್ ನಿಂದ ಶಾಲಾಪೂರ್ವ ಶಿಕ್ಷಣ ಬಲವರ್ಧನೆ ಅಡಿ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು.

ಮೂರರಿಂದ ಆರು ವರ್ಷದ ಮಕ್ಕಳ ಶಾಲಾಪೂರ್ವ ಕಲಿಕೆಯೊಂದಿಗೆ ಬೀಳ್ಕೊಡುಗೆ ಮತ್ತು ಪ್ರವೇಶೋತ್ಸವ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಉಪನಿರ್ದೇಶಕ ಅಮರೇಶ್ ಮಾತನಾಡಿ, ಈ ವಿಶೇಷ ವಿನೂತನ ಕಾರ್ಯಕ್ರಮವನ್ನು ಜಿಲ್ಲೆಯದ್ಯಂತ ಮಾಡಲಾಗುತ್ತಿದ್ದು ಇಡೀ ರಾಜ್ಯದಲ್ಲಿಯೇ ಇದೊಂದು ಮಾದರಿಯ ಕಲಿಕಾ ಪದ್ಧತಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ನಟರಾಜ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೆಟದೇಶ್, ಮಲೆಕೊಪ್ಪ, ಟಾಟಾ ಕಲಿಕೆಯ ಜಿಲ್ಲಾ ವ್ಯವಸ್ಥಾಪಕ ಅಶೋಕ್, ಹಿರಿಯ ಮೇಲ್ವಿಚಾರಕಿ ಜಯಲಕ್ಷ್ಮಿ, ವಲಯ ಮೇಲ್ವಿಚಾರಕಿ ಮಾಧವಿ ವೈದ್ಯ, ಸಂಪನ್ಮೂಲ ವ್ಯಕ್ತಿ ಸಿದ್ದಪ್ಪ ಕುರಿ, ವಲಯ ಮೇಲ್ವಿಚಾರಕಿ ಮಂಜುಳಾ ಗುಗ್ಗರಿ ಇತರರು ಉಪಸ್ಥಿತರಿದ್ದರು.

# ಬರದ ಬವಣೆ : ತೋಟಗಾರಿಕೆ ಬೆಳೆ ರಕ್ಷಣೆ ನಿರ್ವಹಣೆ



ಇಂಡಿ:ಮಳೆಯ ಕೊರತೆ ಮತ್ತು ಅಸ್ಥಿರ ಹವಾಮಾನ ಪರಿಣಾಮ ತೋಟಗಾರಿಕೆ ಬೆಳೆಗಳ ಮೇಲೆ ಒತ್ತಡ ಹೆಚ್ಚುತ್ತಿದೆ. ಇಂತಹ ಸಂದರ್ಭದಲ್ಲಿ ತೆಂಗು, ಮಾವು, ತರಕಾರಿ ಉಳ್ಳಾಗಡ್ಡೆ ಸೇರಿದಂತೆ ಇತರೆ ತೋಟಗಾರಿಕೆ ಬೆಳೆಗಳ ತುರ್ತು ನಿರ್ವಹಣಾ ಕ್ರಮ ಅನುಸರಿಸಿದರೆ ಬರದ ಪರಿಣಾಮವನ್ನು ತಗ್ಗಿಸಿ ಉತ್ತಮ ಬೆಳವಣಿಗೆ ಹಾಗೂ ಇಳುವರಿಯನ್ನು ಕಾಯ್ದು ಕೊಳ್ಳಬಹುದು ಎಂದು ಡಾ. ಹೀನಾ ಹೇಳಿದರು.

ನಗರದ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಿದ ಬರ ಮಳೆಯ ಕೊರತೆ ನಿಮಿತ್ಯ ತೋಟಗಾರಿಗೆ ಬೆಳೆಗಳ ಸಂರಕ್ಷಣೆ ರೈತರಿಗೆ ಮಾಹಿತಿ ನೀಡುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ತೋಟಗಳಲ್ಲಿ ಮಣ್ಣಿನ ತೇವಾಂಶ ಸಂರಕ್ಷಣೆ ಹನಿ ನೀರಾವರಿ ಸಮತೋಲನ, ಗೊಬ್ಬರ ನಿರ್ವಹಣೆ ಹಾಗೂ ಸಮಗ್ರ ಕೀಟ ರೋಗ ನಿಯಂತ್ರಣಕ್ಕೆ ಆಧ್ಯತೆ ನೀಡುವದು ಅತ್ಯಗತ್ಯವಾಗಿದೆ. ಜೈವಿಕ ಗೊಬ್ಬರಗಳ ಬಳಕೆ ಹೆಚ್ಚಿಸುವುದರ ಜತೆಗೆ ಮಲ್ಚಿಂಗ ಅಂತರಬೆಳೆ ಮತ್ತು ಸೂಕ್ಷ್ಮ ಪೋಷಕಾಂಶಗಳ ಪೂರೈಕೆ ಮಾಡುವದರಿಂದ ಬರ ಎದುರಿಸುವ ಸಾಮರ್ಥ್ಯ ಹೆಚ್ಚಿಸಿಕೊಳ್ಳುತ್ತದೆ ಎಂದರು.

ವಿಜ್ಞಾನಿ ಡಾ. ಪ್ರಸಾದ ಮಾತನಾಡಿ ತೆಂಗಿನ ಗಿಡದ ಒಣಗಿದ ಗರಿಗಳನ್ನು ತೆಗೆದು ಹಾಕಬೇಕು, ಕಬ್ಬಿನ ರವದಿ ಗಿಡದ ಬಡ್ಡೆಯಲ್ಲಿ ಹೊದಿಕೆ ಮಾಡುವದರಿಂದ ನೀರಿನ ಸಂರಕ್ಷಣೆ ಮಾಡಬಹುದು, ಹಣ್ಣಿನ ಬೆಳೆಗಳಿಗೆ ಶೇ 5 ಕಯೋಲಿನ ದ್ರಾವಣವನ್ನು ಎಲೆಗಳ ಮೇಲೆ ಸಿಂಪಡಿಸಬೇಕು,ತರಕಾರಿ ಬೆಳೆಗಳಿಗೆ ಪೋಟ್ಯಾಸಿಯಂ ನೈಟ್ರೇಟ್ ಸಿಂಪಡಿಸಬೇಕು ಎಂದರು.

ವಿಜ್ಞಾನಿ ಡಾ. ಪ್ರಕಾಶ ಮಾತನಾಡಿ ಉಳ್ಳಾಗಡ್ಡೆಗೆ ಗಡ್ಡೆ ಪ್ರಾರಂಭ ಹಂತದಲ್ಲಿ ನೀರಿಗೆ ಆಧ್ಯತೆ ನೀಡಿ, ಬೇರೆ ಸಮಯದಲ್ಲಿ ಅವಶ್ಯಕತೆ ಇಲ್ಲ, ಡಾಳಿಂಬೆ ಮತ್ತು ಮೆಣಸಿನಕಾಯಿಗೆ 100 ರಿಂದ 150 ಪಿಪಿಎಂ ಸಲಿಶ್ಯಾಲಿಕ ಆಸಿಡ್ ದ್ರಾವಣ ಸಿಂಪಡಿಸಬೇಕು. ನಿಂಬೆ ಗಿಡಗಳಿದ್ದರೆ 5 ವರ್ಷಕ್ಕಿಂತ ದೊಡ್ಡ ಗಿಡದ ಕಾಂಡಗಳಿಗೆ ಸುಣ್ಣ ಲೇಪನ ಮಾಡಬೇಕು.ಬೊಡೋಪೆಸ್ಟ ಒಂದು ಕೆಜಿ ಸುಣ್ಣ ಒಂದು ಕೆಜಿ ಕಾಪರ್ ಸಲ್ಫೇಟ್ ದಿಂದ ಅಂಟುರೋಗನಿಯಂತ್ರಿಸಬಹುದು ಎಂದರು.

ಡಾ. ಪ್ರೇಮಚಂದ್ರ , ಡಾ. ಸುನೀಲ, ಜಕ್ಕಣ್ಣ ಬಿರಾದಾರ ವೇದಿಕೆಯ ಮೇಲಿದ್ದರು.

ಡಾ. ವೀಣಾ ಚಂದಾವರಿ ಸ್ವಾಗತಿಸಿದರು. ಮಂಜುಳಾ ನಿರೂಪಿಸಿದರು.

# ತಾಲೂಕು ಕಾರ್ಯಾಲಯಕ್ಕೆ ಜಿಲ್ಲಾಧಿಕಾರಿಗಳಿಂದ ಭೂಮಿ ಪೂಜೆ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ತಾಲ್ಲೂಕಿನ ಬಹುಕಾಲದ ಕನಸಾಗಿದ್ದ ಅತ್ಯಾಧುನಿಕ ಆಡಳಿತ ಸೌಧ(ತಹಸೀಲ್ದಾರ್ ಕಚೇರಿ) ಹಾಗೂ ತಾಲೂಕು ಪಂಚಾಯತ್ ಆಡಳಿತ ಕಚೇರಿ ಸಂಕೀರ್ಣ ನಿರ್ಮಾಣ ಕಾಮಗಾರಿಗೆ ಇಂದು ಅಧಿಕೃತ ಚಾಲನೆ ದೊರೆಯಿತು. ಕೊಪ್ಪಳ ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ್ ಅವರು ಶುಕ್ರವಾರ ಭೂಮಿ ಪೂಜೆ ನೆರವೇರಿಸುವ ಮೂಲಕ ?18.55 ಕೋಟಿ ವೆಚ್ಚದ ಈ ಮಹತ್ವಾಕಾಂಕ್ಷಿ ಯೋಜನೆಗೆ ಹಸಿರು ನಿಶಾನೆ ತೋರಿಸಿದರು.ಕುಕನೂರು ಪಟ್ಟಣದ ರುದ್ರಮುನೇಶ್ವರ ದೇವಸ್ಥಾನದ ಗುದ್ದೆಪ್ಪನ ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ ಸರ್ವೆ ನಂ.78 ರ ಸುಮಾರು 16 ಜಾಗದಲ್ಲಿ ಈ ಭವ್ಯ ಆಡಳಿತ ಸೌಧ ನಿರ್ಮಾಣ ಕಾರ್ಯ. ತಹಸೀಲ್ದಾರ್ ಕಚೇರಿ, ತಾಲೂಕು ಪಂಚಾಯತ್ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳ ಕಚೇರಿಗಳು ಒಂದೇ ಸಂಕೀರ್ಣದಲ್ಲಿ ಕಾರ್ಯನಿರ್ವಹಿಸುವಂತೆ ಅತ್ಯಾಧುನಿಕ ಸೌಲಭ್ಯಗಳು ಕಟ್ಟಡ ನಿರ್ಮಾಣಗೊಳ್ಳಲಿದೆ. ಯೋಜನೆ ವಿವಿಧ ಬಳಿಕ ಸಾರ್ವಜನಿಕರಿಗೆ ಒಂದೇ ಸೂರಿನಡಿ ಸರ್ಕಾರಿ ಸೇವೆಗಳು ಲಭ್ಯವಾಗಲಿದ್ದು, ಆಡಳಿತಾತ್ಮಕ ಕಾರ್ಯಕ್ರಮಗಳು ಹೆಚ್ಚು ನಿರೀಕ್ಷೆಯಿದೆ. ಜಮೀನಿನ ವಿವಾದಕ್ಕೆ ಜಿಲ್ಲಾಧಿಕಾರಿಗಳ ಸ್ಪಷ್ಟನೆ..!!



ಭೂಮಿ ಪೂಜೆ ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ್ ಅವರು, ಜಮೀನಿನ ಕುರಿತಂತೆ ಎದುರಾಗಿದ್ದ ಕಾನೂನು ಗೊಂದಲಗಳ ಕುರಿತು ಸ್ಪಷ್ಟನೆ ನೀಡಿದ್ದಾರೆ."ಧಾರ್ಮಿಕ ದತ್ತಿ (ಮುಜರಾಯಿ) ಇಲಾಖೆಗೆ ಸೇರಿದ ಈ ಜಮೀನನ್ನು ನಿಯಮಾನುಸಾರ ಲೀಸ್ ಆಧಾರದ ಮೇಲೆ ಪ್ರಜಾಸೌಧ, ಜೆಎಂಎಫ್‌ಸಿ ನ್ಯಾಯಾಲಯ ಹಾಗೂ ಉಪನಂದಣಾಧಿಕಾರಿಗಳ ಕಚೇರಿ ಕಟ್ಟಡಗಳ ನಿರ್ಮಾಣಕ್ಕಾಗಿ ಸರ್ಕಾರ ಅನುಮೋದಿಸಿದೆ. ಈ ವಿಷಯವನ್ನು ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗಿದೆ.ನ್ಯಾಯಾಲಯದಲ್ಲಿ ಸವಾಲುಗಳಿದ್ದರೂ, ಹೈಕೋರ್ಟ್ ವಕೀಲರು ಹಾಗೂ ಕಾನೂನು ಸಲಹೆ ಪಡೆದು ಎಲ್ಲಾ ಕಾನೂನು ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕವೇ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಯಾವುದೇ ರೀತಿಯ ಅಕ್ರಮ ನಡೆದಿಲ್ಲ," ಎಂದು ಅವರು ಸ್ಪಷ್ಟಪಡಿಸಿದರು.

# ಕೊಟ್ಟೂರು ಮಳೆಗಾಗಿ ಹರಾಳು ಗ್ರಾಮಸ್ಥರಿಂದ ಕತ್ತೆಗಳಿಗೆ ಮದುವೆ



• **ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು**

ತಾಲೂಕಿನ ಹರಾಳು ಗ್ರಾಮಸ್ಥರು. ಮಳೆಗಾಗಿ ಶುಕ್ರವಾರ ಸಂಪ್ರದಾಯದಂತೆ ಕತ್ತೆಗಳಿಗೆ ಮದುವೆ ಮಾಡಿದರು.ವಿಳಂಬವಾಗಿರುವ ಮಳೆ ಹಿನ್ನಡೆ ಕಂಡಿರುವ ಬಿತ್ತನೆ ಕಾರ್ಯ ಪಸಲು ಒಣಗಿ ಭಣಗತ್ತುವೆ ಮೇವಿನ ಕೊರತೆ.ನೀರಿನ ಕೊರತೆ–ಯ ನಡುವೆ ತಮ್ಮ ನಂಬಿಕೆಯಂತೆ ಮಳೆಗಾಗಿ ಪ್ರಾರ್ಥಿಸುತ್ತಾ ವಧು– ವರ ಕತ್ತೆಗಳಿಗೆ ಹೂವಿನಹಾರ ಹಾಕಿ ಅರಿಶಿನ ಕುಂಕಮ ಇಟ್ಟು ಅಲಂಕರಿಸಿ ಹೆಣ್ಣು ಕತ್ತೆಗೆ ಸೀರೆ ಕುಪ್ಪಸ ಗಂಡು ಕತ್ತೆಗೆ ಪಂಚೆ ಅಂಗಿತೊಡಸಿ. ಅಲಂಕರಿಸಿ ಶಾಸ್ತ್ರೋಕ್ತವಾಗಿ ಕತ್ತೆಗಳ ಮದುವೆ ನೇರವೇರಿಸಿದರು.

ಕತ್ತೆಗಳ ಮದುವೆ ಮಾಡಿದರೆ ಮಳೆ ಬಂದೆ ಬರುತ್ತದೆ ಎಂಬ ಬಲವಾದ ನಂಬಿಕೆ ಗ್ರಾಮೀಣ ಪ್ರದೇಶಗಳಲ್ಲಿದೆ ಅದಕ್ಕೆ ಅನುಗುಣವಾಗಿಯೇ ಗ್ರಾಮಸ್ಥರು ಕತ್ತೆಗಳ ಮದುವೆಯನ್ನು ಅಯೋಜಿಸಿದ್ದರು.

ಮದುವೆಗಾಗಿ ಕತ್ತೆಗಳನ್ನು ಹರಪ್ಪನಹಳ್ಳಿ ತಾಲೂಕಿನ ಉಚ್ಚಂಗಿದುರ್ಗ ದಿಂದ ಕರೆತರಿಸಿದ್ದರು.

ಮಳೆರಾಯನ ಭಕ್ತರಾಗಿದ್ದ ಗ್ರಾಮಸ್ಥರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಜೋಡಿ ಕತ್ತೆಗಳ ಮೆರವಣಿಗೆ ನೆಡಸಲಾಯಿತು.

ಈ ಕಾರ್ಯಕ್ರಮದಲ್ಲಿ ಗ್ರಾಮದ ಎಲ್ಲಾ ಹಿರಿಯರು ಮುಖಂಡರು ಮಕ್ಕಳು ಹಾಗು ಸಮಸ್ತ ದೈವಸ್ತರು ಬಾಗವಹಿಸಿದ್ದರು

# ಗ್ರಾಮೀಣ ಭಾಗದಲ್ಲಿ ಕಾಂಗ್ರೆಸ್ ಚುರುಕು ಮತದಾರರ ಜಾಗೃತಿಗೆ ಹೆಜ್ಜೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು, 17 ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಹೆಸರು ಹಾಗೂ ವಿವರಗಳನ್ನು ಪರಿಶೀಲಿಸಿಕೊಳ್ಳಬೇಕು. ಎಸ್‌ಐಆರ್ ಹಾಗೂ ಬಿಎಲ್‌ಎ–2 ಜಾಗೃತಿ ಅಭಿಯಾನದ ಮೂಲಕ ಮನೆಮನೆಗೆ ತೆರಳಿ ಮತದಾರರಲ್ಲಿ ಅರಿವು ಮೂಡಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಕೈಗೊಂಡಿದೆ ಎಂದು ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಮೀನಾಕ್ಷಿ ವಿ. ನಾಯಕ ಹೇಳಿದರು.

ಅವರು ಕಾಂಗ್ರೆಸ್ ಪಕ್ಷದ ವತಿಯಿಂದ ಯಲ್ಹೇರಿ, ಕೊಂಕಲ್, ಯಲಸತ್ತಿ, ವಂಕಸಂಭ್ರ, ಸಂಭ್ರಮ್ ಹಾಗೂ ಮಾದ್ವಾರ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಎಸ್‌ಐಆರ್ ಹಾಗೂ ಬಿಎಲ್‌ಎ–2 ಜಾಗೃತಿ ಅಭಿಯಾನದಲ್ಲಿ ಮಾತನಾಡಿದರು.ಅಭಿಯಾನದಲ್ಲಿ ಕಾರ್ಯಕರ್ತೆಯರಾದ ವಿಜಮ್ಮ ಮಲ್ಹಾರ್, ರಾಘವೇಂದ್ರ ಕೊಂಕಲ್, ನಾಗಪ್ಪ ಸಜ್ಜನ್ ಕಡೆಚೂರು ಹಾಗೂ ಕಾಸಿಮ್ ಪಟೇಲ್ ಭಾಗವಹಿಸಿ, ಮತದಾರರ ಪಟ್ಟಿಯ ಪರಿಷ್ಕರಣೆ, ಹೊಸ ಮತದಾರರ ನೋಂದಣಿ ಹಾಗೂ ಅಗತ್ಯ ದಾಖಲೆಗಳ ಕುರಿತು ಗ್ರಾಮಸ್ಥರಿಗೆ ಮಾಹಿತಿ ನೀಡಿದರು. ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಂಡು ಪ್ರಜಾಪ್ರಭುತ್ವದ ಹಕ್ಕನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಮನವಿ ಮಾಡಿದರು.ಈ ಸಂದರ್ಭದಲ್ಲಿ ಯಲ್ಹೇರಿ ಗ್ರಾಮದ ಸೋಮನಾಥರೆಡ್ಡಿ ಗೌಡ, ಬಿಎಲ್‌ಎ ಮಲ್ಲಪ್ಪ, ಕೊಂಕಲ್ ಗ್ರಾಮದ ರಾಘವೇಂದ್ರ ದುಖಾನ್, ಯಲಸತ್ತಿ ಗ್ರಾಮದ ನಾಗರಾಜ ಹೂಗಾರ್, ಯಂಕರೆಡ್ಡಿಗೌಡ, ವಂಕಸಂಭ್ರ ಗ್ರಾಮದ ಭೀಮಯ್ಯ ದಾಸರ್, ಡಾ. ರಾಮು, ಸತ್ಯಪ್ಪ, ಜಮೀರುಲ್, ರಾಮ ಕುಂಬಾರ, ಸಂಭ್ರಮ್ ಗ್ರಾಮದ ಲಕ್ಷ್ಮೀಕಾಂತರೆಡ್ಡಿ, ಬಿಎಲ್‌ಒ ವೆಂಕಟರೆಡ್ಡಿ, ರಾಘವೇಂದ್ರರೆಡ್ಡಿ, ವೆಂಕಟೇಶರೆಡ್ಡಿ, ಮಾದ್ವಾರ ಗ್ರಾಮದ ಡಾ. ಮಲ್ಲೇಶ ಆರ್ ಸೇರಿದಂತೆ ಗ್ರಾಮಸ್ಥರು ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಭಾರತೀಯ ಸೇನೆಗೆ ಆಯ್ಕೆಯಾದ ವೀರಯೋಧ ಬೀರಪ್ಪ ಗೋಡಿಹಾಳ ಮತ್ತು ಹೆತ್ತ ಪೋಷಕರಿಗೂ ಗೌರವ ಸನ್ಮಾನ; ಶ್ರೀಧರ ಸಾಹುಕಾರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ದೇಶ ಕಾಯುವ ಯೋಧನಿಗಿಂತ ಮಿಗಿಲಾದ ದೇವರಿಲ್ಲ, ಭಾರತಾಂಬೆಯ ರಕ್ಷಣೆಗಾಗಿ ತನ್ನ ಜೀವನವನ್ನೇ ಮುಡಿಪಾಗಿಡುವುದು ಪ್ರತಿಯೊಬ್ಬ ಭಾರತೀಯನಿಗೂ ಸಿಗುವ ಅತ್ಯುನ್ನತ ಸೌಭಾಗ್ಯ ಎಂದು ಬಿಜೆಪಿ ಯುವಮೋರ್ಚಾ ಜಿಲ್ಲಾಧ್ಯಕ್ಷರಾದ ಶ್ರೀಧರ ಸಾಹುಕಾರ ಅವರು ನುಡಿದರು.

ದೇಶದ ರಕ್ಷಣಾ ಪಡೆಗೆ ಆಯ್ಕೆಯಾಗುವ ಮೂಲಕ ಯಾದಗಿರಿ ಮತಕ್ಷೇತ್ರದ ಗುಂಡಳ್ಳಿ ಗ್ರಾಮದ ಕೀರ್ತಿಯನ್ನು ರಾಷ್ಟ್ರಮಟ್ಟಕ್ಕೆ ಎತ್ತಿ ಹಿಡಿದಿರುವ ವೀರಯೋಧ ಶ್ರೀ ಬೀರಪ್ಪ ತಂದೆ ತಿಪ್ಪಣ್ಣ ಗೋಡಿಹಾಳ ಅವರನ್ನು ಶ್ರೀಧರ ಸಾಹುಕಾರ ಅವರು ಆತ್ಮೀಯವಾಗಿ ಸನ್ಮಾನಿಸಿ, ಗೌರವಿಸಿದರು, ಹಾಗೂ ಇಂತಹ ಸಾಹಸಿ ಪುತ್ರನನ್ನು ದೇಶ ಸೇವೆಗೆ ಧಾರೆ ಎರೆದ ಹೆತ್ತ ತಂದೆ–ತಾಯಿಗೆ ಶಾಲು ಹೊದಿಸಿ, ಸಿಹಿ ತಿನ್ನಿಸಿ ಶುಭ ಹಾರೈಸಿದ ಶ್ರೀಧರ ಸಾಹುಕಾರ ಅವರು,

ನಮ್ಮ ಭಾಗದ ಗ್ರಾಮೀಣ ಪ್ರದೇಶದ ಯುವಕನೊಬ್ಬ ಗಡಿ ಕಾಯುವ ಸಂಕಲ್ಪ ಮಾಡಿರುವುದು ಇಡೀ ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ.

ದೇಶದ ಗಡಿ ಸುರಕ್ಷಿತವಾಗಿದ್ದರೆ ಮಾತ್ರ ನಾವಿಲ್ಲಿ ನೆಮ್ಮದಿಯಿಂದ ಇರಲು ಸಾಧ್ಯ, ತನ್ನ ಸ್ವಾರ್ಥವನ್ನು ಬದಿಗಿಟ್ಟು, ದೇಶವೇ ಮೊದಲು ಎಂಬ ಧ್ಯೇಯದೊಂದಿಗೆ ಹೊರಟಿರುವ ಬೀರಪ್ಪ ಅವರ ದೇಶಸೇವೆಯ ಪಯಣ ಇಂದಿನ ಯುವ ಪೀಳಿಗೆಗೆ ನಿಜವಾದ ಪ್ರೇರಣೆಯಾಗಿದೆ" ಎಂದು ಶ್ಲಾಘಿಸಿದರು, ಹಾಗೆ ಗ್ರಾಮದ ಯೋಧನ ಸ್ನೇಹಿತರು "ಭಾರತ್ ಮಾತಾ ಕೀ ಜೈ", "ವೀರಯೋಧ ಬೀರಪ್ಪನಿಗೆ ಜಯವಾಗಲಿ" ಎಂಬ ಘೋಷಣೆಗಳೊಂದಿಗೆ ಯೋಧನಿಗೆ ಜೈಕಾರ ಹಾಕುತ್ತಾ, ಅವರ ಮುಂದಿನ ಯಶಸ್ವಿ ಸೇವಾ ಜೀವನಕ್ಕೆ ಶುಭ ಹಾರೈಸಿದರು..

ಈ ಸಂದರ್ಭದಲ್ಲಿ ಮಂಜುನಾಥ ಗುತ್ತೇದಾರ, ಮಲ್ಲು ಕೋಲಿವಾಡ, ಅರುಣ ಹೊರಮನಿ ಸಾಹುಕಾರ, ಅಮರೇಶ್ ನಾಲ್ವಡಗಿ, ಯಲ್ಲಪ್ಪ ಗುಂಡಗರ್ತಿ, ಮರೆಪ್ಪ ಬಲಕಲ್, ಭಾಷ ಕುರುಕುಂದಿ, ದುಳಪ್ಪಾ ಬಡಿಗೇರ, ಭೀಮು ಯಾದಗಿರಿ, ಮರೆಪ್ಪ ಕಟ್ಟಿಮನಿ, ಸಿದ್ದು ಬೈರಗೊಂಡ, ಸಿದ್ದು ವಿ, ಸೇರಿದಂತೆ ಗ್ರಾಮದ ಪ್ರಮುಖರು, ಮುಖಂಡರು ಹಾಗೂ ದೇಶಾಭಿಮಾನಿಗಳು ಉಪಸ್ಥಿತರಿದರು.

# ತೀವ್ರ ತಿರುವಿನಲ್ಲಿ ಮತ್ತೆ ಲಾರಿ ಅಪಘಾತ ರಸ್ತೆ ಸುರಕ್ಷತೆಗೆ ಕ್ರಮಕ್ಕೆ ಸಾರ್ವಜನಿಕರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಜು.17: ಪಟ್ಟಣದ ಹೊರವಲಯದ ಯಾದಗಿರಿ–ಗುರುಮಠಕಲ್ ಮುಖ್ಯರಸ್ತೆಯ ಬೂದೂರು ಗೇಟ್ ಸಮೀಪ ಶುಕ್ರವಾರ ಬೆಳಿಗ್ಗೆ ಸಕ್ಕರೆ ಮೂಟೆಗಳನ್ನು ಸಾಗಿಸುತ್ತಿದ್ದ ಲಾರಿಯೊಂದು (ಖಎ02ಉಅ7488) ಚಾಲಕನ ನಿಯಂತ್ರಣ ಶುಕ್ರವಾರ ಬೆಳಿಗ್ಗೆ ಆಯಾ ತಪ್ಪಿ ಅಪಘಾತಕ್ಕೀಡಾಯಿತು. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಅಲ್ಪ ಗಾಯಗಳಾದ ಹಿನ್ನಲೆ ಚಾಲಕನನ್ನು ಸಮುದಾಯ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗಾಗಿ ರವಾನಿಸಲಾಯಿತು.

ಮಳ್ಳಿ ಉಗರ್ ಸಕ್ಕರೆ ಕಾರ್ಖಾನೆಯಿಂದ ಒಡಿಶಾ ರಾಜ್ಯದತ್ತ ಸಕ್ಕರೆ ಸಾಗಿಸುತ್ತಿದ್ದ ಲಾರಿ ತೀವ್ರ ತಿರುವಿನ ಬಳಿ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಉರುಳಿದೆ ಎಂದು ತಿಳಿದುಬಂದಿದೆ.ಸ್ಥಳೀಯರ ಪ್ರಕಾರ, ಬೂದೂರು ಗೇಟ್ ಸಮೀಪದ ಈ ತಿರುವು ಅಪಘಾತಗಳ ತಾಣವಾಗಿ ಮಾರ್ಪಟ್ಟಿದೆ. ಇದೇ ಸ್ಥಳದಲ್ಲಿ ಈ ಹಿಂದೆಯೂ ಲಾರಿಗಳು, ಶಾಲಾ ವಾಹನಗಳು ಸೇರಿದಂತೆ ಹಲವು ವಾಹನಗಳು ಅಪಘಾತಕ್ಕೀಡಾಗಿರುವ ಘಟನೆಗಳು ನಡೆದಿವೆ. ಆದರೂ ಶಾಶ್ವತ ಸುರಕ್ಷತಾ ಕ್ರಮಗಳನ್ನು ಕೈಗೊಂಡಿಲ್ಲ ಎಂಬ ಆರೋಪ ಕೇಳಿಬರುತ್ತಿದೆ.

ಚಾಲಕರು ಅತಿವೇಗದಲ್ಲಿ ವಾಹನ ಚಲಾಯಿಸುವುದನ್ನು ತಪ್ಪಿಸಿ, ರಸ್ತೆ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ತಿರುವುಗಳಲ್ಲಿ ಎಚ್ಚರಿಕೆಯಿಂದ ವಾಹನ ಚಲಾಯಿಸುವುದು ಹಾಗೂ ಸಮಯ ಉಳಿಸುವ, ಗುಂಡಿ ತಪ್ಪಿಸುವ ಉದ್ದೇಶದಿಂದ ತಪ್ಪು ದಿಕ್ಕಿನಲ್ಲಿ ಅಥವಾ ಅಡ್ಡರಸ್ತೆಗಳಲ್ಲಿ ಸಂಚರಿಸುವುದನ್ನು ಸಂಪೂರ್ಣವಾಗಿ ಬಿಡಬೇಕು ಎಂದು ಸಾರ್ವಜನಿಕರು ಮನವಿ ಮಾಡಿದ್ದಾರೆ.ಪದೇ ಪದೇ ಸಂಭವಿಸುತ್ತಿರುವ ಅಪಘಾತಗಳು ಸಾರ್ವಜನಿಕರಲ್ಲಿ ಆತಂಕಕ್ಕೆ ಕಾರಣವಾಗಿದ್ದು, ಅಪಘಾತಗಳನ್ನು ತಡೆಗಟ್ಟಲು ಅಪಾಯಕಾರಿ ತಿರುವಿನ ಬಳಿ ವೇಗ ನಿಯಂತ್ರಣ ವ್ಯವಸ್ಥೆ, ಎಚ್ಚರಿಕೆ ಫಲಕಗಳು, ಪ್ರತಿಫಲಕಗಳು ಹಾಗೂ ಅಗತ್ಯ ರಸ್ತೆ ಸುರಕ್ಷತಾ ಕ್ರಮಗಳನ್ನು ಸಂಬಂಧಪಟ್ಟ ಇಲಾಖೆ ತಕ್ಷಣ ಕೈಗೊಳ್ಳಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ದೇಶಸೇವೆಗೆ ಹೊರಟ ಯುವ ಸೈನಿಕನಿಗೆ ಶುಭ ಹಾರೈಕೆ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ತಾಲೂಕಿನ ಕುಪ್ಪಿ ಗ್ರಾಮದ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ವೃತ್ತದಲ್ಲಿ ಭಾರತೀಯ ಸೇನೆಗೆ ಆಯ್ಕೆಯಾಗಿರುವ ಶಂಕರಗೌಡ ರಾಮನಗೌಡ ಭರಡ್ಡಿ (ಗೆದ್ದಲಮರಿ) ಅವರನ್ನು ಗ್ರಾಮಸ್ಥರು ಹಾಗೂ ಮುಖಂಡರು ಸನ್ಮಾನಿಸಿ ಗೌರವಿಸಿದರು.

ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖಂಡ ಮುದಿಗೌಡ ಎಚ್. ಹಣಮರಡ್ಡಿ, ದೇಶಸೇವೆ ಮಾಡುವ ಅವಕಾಶ ದೊರಕುವುದು ಪ್ರತಿಯೊಬ್ಬ ಯುವಕರ ಕನಸಾಗಿದೆ. ಶಂಕರಗೌಡ ಅವರು ಕಠಿಣ ಪರಿಶ್ರಮ, ಶಿಸ್ತು ಹಾಗೂ ನಿರಂತರ ಅಭ್ಯಾಸದ ಫಲವಾಗಿ ಭಾರತೀಯ ಸೇನೆಗೆ ಆಯ್ಕೆಯಾಗಿರುವುದು ಗ್ರಾಮದ ಹೆಮ್ಮೆ ಎಂದು ಹೇಳಿದರು. ದೇಶದ ಗಡಿಯನ್ನು ಕಾಯುವ ಮಹತ್ತರ ಜವಾಬ್ದಾರಿಯನ್ನು ಹೊತ್ತು ಆಸ್ಸಾಂಗೆ ತೆರಳುತ್ತಿರುವ ಅವರಿಗೆ ಶುಭ ಹಾರೈಸಿದರು.

ಸನ್ಮಾನ ಸ್ವೀಕರಿಸಿದ ಶಂಕರಗೌಡ ಭರಡ್ಡಿ ಮಾತನಾಡಿ, ತಮ್ಮ ಯಶಸ್ಸಿಗೆ ಕುಟುಂಬದವರು, ಗುರುಗಳು ಹಾಗೂ ಗ್ರಾಮದ ಹಿರಿಯರ ಪ್ರೋತ್ಸಾಹವೇ ಮುಖ್ಯ ಕಾರಣವಾಗಿದೆ. ದೇಶಸೇವೆಯನ್ನು ಪ್ರಾಮಾಣಿಕತೆ ಮತ್ತು ನಿಷ್ಠೆಯಿಂದ ನಿರ್ವಹಿಸುವ ಸಂಕಲ್ಪ ಹೊಂದಿರುವುದಾಗಿ ತಿಳಿಸಿದರು.ಕಾರ್ಯಕ್ರಮದಲ್ಲಿ ಬಸನಗೌಡ ಹಣಮರಡ್ಡಿ, ಹಣಮಂತ್ರಾಯಗೌಡ ಹುಡೇದ್, ಪ್ರಭುಗೌಡ ಬಿರಾದಾರ, ಭೀಮನಗೌಡ ಅಳ್ಳಿಕೋಟಿ, ಬಸಯ್ಯಸ್ವಾಮಿ ಹಿರೇಮಠ, ಚಿದಾನಂದಗೌಡ, ಬಸನಗೌಡ ಹುಡೇದ್, ಯಂಕನಗೌಡ ಸಾಹುಕಾರ, ನಿಂಗಣ್ಣ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಯುವಕರು ಉಪಸ್ಥಿತರಿದ್ದರು.

# ಕುರಿ ಮಾರುಕಟ್ಟೆ ಆರಂಭಿಸಿ, ಮೂಲಸೌಕರ್ಯ ಕಲ್ಪಿಸಿ; ಎಪಿಎಂಸಿಗೆ ಉಮೇಶ್ ಮುದ್ನಾಳ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



: ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿ ಪ್ರತಿ ಸೋಮವಾರ ನಡೆಯುವ ದನ ಹಾಗೂ ಎತ್ತುಗಳ ಸಂತೆಯೊಂದಿಗೆ ಕುರಿ ಮಾರುಕಟ್ಟೆಯನ್ನೂ ಆರಂಭಿಸಬೇಕು ಎಂದು ಒತ್ತಾಯಿಸಿರುವ ಸಾಮಾಜಿಕ ಮುಖಂಡ ಉಮೇಶ್ ಕೆ. ಮುದ್ನಾಳ, ಮಾರುಕಟ್ಟೆಯಲ್ಲಿ ರೈತರು ಹಾಗೂ ಜಾನುವಾರುಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆಯಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲೇ ಅತಿದೊಡ್ಡ ಜಾನುವಾರು ಸಂತೆ ಎಂಬ ಹೆಗ್ಗಳಿಕೆ ಹೊಂದಿರುವ ಗುರುಮಠಕಲ್ ಎಪಿಎಂಸಿ ಮಾರುಕಟ್ಟೆಯಲ್ಲಿ ಕುಡಿಯುವ ನೀರು, ನೆರಳು, ಪಶುವೈದ್ಯರ ಸೇವೆ ಸೇರಿದಂತೆ ಅಗತ್ಯ ಸೌಲಭ್ಯಗಳ ಕೊರತೆಯಿಂದ ರೈತರು ಮತ್ತು ಜಾನುವಾರುಗಳು ಪ್ರತಿ ವಾರ ಸಂಕಷ್ಟ ಅನುಭವಿಸುತ್ತಿದ್ದಾರೆ, ಕುರಿ ಮಾರಾಟಕ್ಕೆ 50 ಕಿಲೋಮೀಟರ್ ದೂರದಲ್ಲಿರುವ ಯಾದಗಿರಿ ಬರುವ ಪರಿಸ್ಥಿತಿ ತಪ್ಪಿಸಿ ಇಲ್ಲೇ ಪ್ರಾರಂಭಿಸಬೇಕು ಎಂದು ಆಗ್ರಹ ವ್ಯಕ್ತ ಪಡಿಸಿದರು. ಸಂತೆ ನಡೆಯುವ ದಿನಗಳಲ್ಲಿ ಪಶುವೈದ್ಯರನ್ನು ಕಡ್ಡಾಯವಾಗಿ ನಿಯೋಜಿಸಿ ಜಾನುವಾರುಗಳ ಆರೋಗ್ಯ ತಪಾಸಣೆ ನಡೆಸಬೇಕು. ಸಾಂಕ್ರಾಮಿಕ ರೋಗಗಳ ಹರಡುವಿಕೆಯನ್ನು ತಡೆಯಲು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಜಾನುವಾರುಗಳನ್ನು ಕಟ್ಟಲು ಸಾಲುಸಾಲಾಗಿ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು. ರೈತರು ಹಾಗೂ ಜಾನುವಾರುಗಳಿಗೆ ನೆರಳಿನ ವ್ಯವಸ್ಥೆ ಕಲ್ಪಿಸಲು ಮರಗಳನ್ನು ನೆಡುವುದು ಅಥವಾ ಶಾಶ್ವತ ಶೆಡ್ ನಿರ್ಮಿಸಬೇಕು ಎಂದು ಅವರು ಆಗ್ರಹಿಸಿದರು.

ಇದರ ಜೊತೆಗೆ ಮಾರುಕಟ್ಟೆ ಆವರಣದಲ್ಲಿ ಅರಣ್ಯ ಇಲಾಖೆ ವತಿಯಿಂದ ಸಸಿಗಳನ್ನು ನೆಟ್ಟು ಪರಿಸರವನ್ನು ಸ್ವಚ್ಛ ಹಾಗೂ ಸುಂದರವಾಗಿಡಲು ಕ್ರಮ ಕೈಗೊಳ್ಳಬೇಕು. ಪ್ರತಿ ವಾರ ಸಾವಿರಾರು ರೈತರು ಹಾಗೂ ನೂರಾರು ಜಾನುವಾರುಗಳು ಆಗಮಿಸುವ ಈ ಸಂತೆಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಎಪಿಎಂಸಿ ಆಡಳಿತದ ಜವಾಬ್ದಾರಿಯಾಗಿದೆ ಎಂದು ಉಮೇಶ್ ಕೆ. ಮುದ್ನಾಳ ಹೇಳಿದರು.

ರೈತರು ಮತ್ತು ಜಾನುವಾರುಗಳಿಗೆ ಅನುಕೂಲಕರ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು. ಕುರಿ ಮಾರುಕಟ್ಟೆಯನ್ನೂ ಶೀಘ್ರ ಆರಂಭಿಸಿ, ಎಲ್ಲಾ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಇಲ್ಲವಾದಲ್ಲಿ ರೈತರೊಂದಿಗೆ ಸೇರಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ವಿನೋದ್ ಕುಮಾರ್ ಕಾಮಿನ್ ಮತ್ತು ಮಲ್ಲೇಶ್ ಜೊತೆಗಿದ್ದರು.

# ಜಲಾಶಯದ ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಬಳಸಲು ಜಿಲ್ಲಾಡಳಿತ ಮನವಿ: ಜಿಲ್ಲಾಧಿಕಾರಿ ಪೂವಿತಾ ಎಸ್.

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜು 17 : ಜಲಾಶಯದ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಕಾಯ್ದಿರಿಸುವ ಕುರಿತು ಜಲಸಂಪನ್ಮೂಲ ಇಲಾಖೆಯ ಸರಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಇವರುಗಳು ಸೂಚಿಸಿರುವಂತೆ ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆಯ ಕೊರತೆಯಿಂದಾಗಿ ಜಲಾಶಯಗಳ ಒಳಹರಿವು ಶೂನ್ಯಕ್ಕೆ ಇಳಿದಿದ್ದು, ಹಾಗೂ ನೀರಿನ ಮಟ್ಟ ಕ್ಷೀಣಿಸುತ್ತಿರುವುದರಿಂದ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಬೇಕಿರುವ ಕಾರಣ ನಾರಾಯಣಪೂರ ಹಾಗೂ ತುಂಗಭದ್ರಾ ಜಲಾಶಯಗಳಲ್ಲಿ ಪ್ರಸ್ತುತ ಲಭ್ಯವಿರುವ ನೀರನ್ನು ಮುಂಬರುವ ದಿನಗಳಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ಕಾಯ್ದಿರಿಸಿಕೊಂಡು ಬಳಸಲು ಹಾಗೂ ಜಲಾಶಯಗಳನ್ನು ನಂಬಿಕೊಂಡು ರೈತರು ಬೆಳೆಯನ್ನು ಬೆಳೆಯದಂತೆ ಮತ್ತು ಇತರೆ ಉದ್ದೇಶಗಳಿಗೆ ಜಲಾಶಯಗಳ ನೀರನ್ನು ಬಳಸದೆ ಕುಡಿಯುವ ನೀರಿಗೆ ಮಾತ್ರ ಬಳಸುವ ಮೂಲಕ ಜಿಲ್ಲಾಡಳಿತಕ್ಕೆ ಸಹಕರಿಸುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭ್ರಷ್ಟಚಾರ ಆರೋಪ; ಮಾನ್ವಿ ಸಿಡಿಪಿಓ ಶಿವಗಂಗಮ್ಮ ಅಮಾನತ್ತು

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜು 17 : ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ನೇಮಕಾತಿಯಲ್ಲಿ ಭ್ರಷ್ಟಚಾರ ಎಸೆಗಿರುವ ಆರೋಪ ಸಾಬೀತುಗೊಂಡ ಹಿನ್ನಲೆಯಲ್ಲಿ ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶಿವಗಂಗಮ್ಮ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವಾಲಯದ ಸರ್ಕಾರದ 2ನೇ ಅಧೀನ ಕಾರ್ಯದರ್ಶಿಗಳಾದ ರಶ್ಮಿ ಎಂ.ಎಸ್ ಅವರು ಆದೇಶ ಹೊರಡಿಸಿದ್ದಾರೆ.

ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ಬಾಬಾನಾಯಕ ಕಾಲೋನಿ, ಯರಮಲದೊಡ್ಡಿ ಹಾಗೂ ಉಮಳಿ ಹೊಸೂರು–2 ಅಂಗನವಾಡಿ ಕೇಂದ್ರಗಳ ಸಹಾಯಕಿ ಹಾಗೂ ಕಾರ್ಯಕತೆ–ಯರ ನೇಮಕಾತಿಯಲ್ಲಿ ಭ್ರಷ್ಟಾಚಾರ ಎಸೆಗಿರುವ ಪ್ರಕರಣಕ್ಕೆ ಸಂಬಂಧಿಸಿ ಇಲಾಖೆಯು ತನಿಖಾ ತಂಡವನ್ನು ರಚಿಸಲಾಗಿತ್ತು. ಮಾನ್ವಿ ತಾಲೂಕಿನ ಬಾಬಾನಾಯಕ ಕಾಲೋನಿ, ಯರಮಲದೊಡ್ಡಿ ಮತ್ತು ಉಮಳಿ ಹೊಸೂರು–2 ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿಯಲ್ಲಿ ಭ್ರಷ್ಟಾಚಾರದ ಆರೋಪದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖೆಯ ಅಧಿಕಾರಿಗಳು ತನಿಖೆ ನಡೆಸಿ ಸಲ್ಲಿಸಿರುವ ಪ್ರಾಥಮಿಕ ವರದಿಯನ್ನಾಧಾರಿಸಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರಾಯಚೂರು ಮತ್ತು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅವರ ಅಭಿಪ್ರಾಯದನ್ವಯ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಅವರಿಗೆ ವಹಿಸಿರುವ ಕರ್ತವ್ಯಗಳ ನಿರ್ವಹಣೆ ಸಂದರ್ಭದಲ್ಲಿ ಭ್ರಷ್ಟಾಚಾರದಲ್ಲಿ ತೊಡಗಿರುವುದು ತನಿಖಾ ತಂಡದ ವರದಿಯಿಂದ ಮೇಲ್ನೋಟಕ್ಕೆ ಸಾಬಿತುಗೊಂಡಿರುತ್ತದೆ.

ಈ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಪೂರ್ವನುಮತಿ ಪಡೆಯದೇ ಕೇಂದ್ರ ಸ್ಥಾನ ಬಿಡುವಂತಿಲ್ಲ ಹಾಗೂ ಇಲಾಖೆಯ ವಿಚಾರಣೆ ಮುಂದುವರೆಸಲಾಗಿದೆ ಎಂದು ಮಹಿಳೆಯರ ಮತ್ತು ಮಕ್ಕಳ ಹಾಗೂ ಅಭಿವೃದ್ಧಿ ಹಾಗೂ ವಿಕಲಚೇತನರ ಹಿರಿಯ ನಾಗರೀಕರ ಸಬಲೀಕರಣ ಸಚಿವಾಲಯ ಸರ್ಕಾರದ 2ನೇ ಅಧೀನಕಾರ್ಯದರ್ಶಿಗಳು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಶಿಶಿಕ್ಷು ಇಂಟರ್ನಿಗಳ ಆಯ್ಕೆಗೆ ಅರ್ಜಿ ಆಹ್ವಾನ

ಕಲಬುರಗಿ,ಜು.17–ಕಲಬುರಗಿಯ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಯೋಜನೆ, ನೀತಿ ಮತ್ತು ದತ್ತಾಂಶ ವಿಶ್ಲೇಷಣಾ ವಿಭಾಗಕ್ಕೆ ವಿವಿಧ ವಿಭಾಗಗಳಲ್ಲಿ ಇಂಟರ್ನ್‌ಗಳಾಗಿ ತೊಡಗಿಸಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಮಂಡಳಿಯ ಉಪ ಕಾರ್ಯದರ್ಶಿ ಸುರೇಖಾ ಕಿರಣಗಿ ತಿಳಿಸಿದ್ದಾರೆ.ಅರ್ಜಿಗಳನ್ನು ಮಂಡಳಿಯ ಅಂತರ್ಜಾಲ ವಿಳಾಸ https://kkrdb.karnataka.gov.in ಮೂಲಕ ಇದೇ ಜುಲೈ 27ರೊಳಗಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.ಸಂಶೋಧನಾ ಓರ್ವ ಇಂಟರ್ನ್ ಹುದ್ದೆಗೆ ಅರ್ಥಶಾಸ್ತ್ರ, ಸಾರ್ವಜನಿಕ ನೀತಿ, ಅಭಿವೃದ್ಧಿ ಅಧ್ಯಯನಗಳು ಅಥವಾ ಸಂಬಂಧಿತ ವಿಷಯದಲ್ಲಿ ಸ್ನಾತಕೋತ್ತರ ಪದವಿ ಜೊತೆಗೆ ಸಂಶೋಧನಾ ವಿಧಾನಗಳು ಹಾಗೂ ದತ್ತಾಂಶ ವಿಶ್ಲೇಷಣೆಯಲ್ಲಿ ಜ್ಞಾನ ಹೊಂದಿರಬೇಕು. ಡೇಟಾ ಇಂಟರ್ನ್ (ಸಾಮಾನ್ಯ) ಒಂದು ಹುದ್ದೆಗೆ ಡೇಟಾ ಸೈನ್ಸ್, ಅರ್ಥಶಾಸ್ತ್ರ, ಸಾರ್ವಜನಿಕ ನೀತಿ, ಅಭಿವೃದ್ಧಿ ಅಧ್ಯಯನಗಳು, ಸಮಾಜ ಕಾರ್ಯ ಅಥವಾ ಸಂಬಂಧಿತ ವಿಷಯದಲ್ಲಿ ಸ್ನಾತಕೋತ್ತರ ಪದವಿ ಜೊತೆಗೆ ಆರ್.ಪೈಥಾನ್, ಖಖಿಂಖಿಂ ಖಕಿಐ ಮತ್ತು ಎಂ.ಎಸ್. ಆಫೀಸ್ ಜ್ಞಾನ ಹೊಂದಿರಬೇಕು.ಡೇಟಾ ಇಂಟರ್ನ್ (GIS) ಒಂದು ಹುದ್ದೆಗೆ ಇಂಜಿನಿಯರಿಂಗ್, ಭೂಗೋಳಶಾಸ್ತ್ರ, ಭೌಗೋಳಿಕ ಮಾಹಿತಿ ವ್ಯವಸ್ಥೆ (GIS), ಪರಿಸರ ವಿಜ್ಞಾನ, ನಗರ ಯೋಜನೆ, ಕಂಪ್ಯೂಟರ್ ವಿಜ್ಞಾನ ಅಥವಾ ಸಂಬಂಧಿತ ವಿಷಯದಲ್ಲಿ ಸ್ನಾತಕ ಅಥವಾ ಸ್ನಾತಕೋತ್ತರ ಪದವಿ ಜೊತೆಗೆ GIS, ಸ್ಥಳೀಯ ದತ್ತಾಂಶ ವಿಶ್ಲೇಷಣೆ ಮತ್ತು ನಕ್ಷೆ ತಯಾರಿಕಾ ತಂತ್ರಗಳ ಜ್ಞಾನವಿರಬೇಕು.

# ಬೀದಿ ಬದಿ ವ್ಯಾಪಾರಿಗಳು ನಿಗದಿಪಡಿಸಿದ ಸ್ಥಳಗಳಲ್ಲಿ ವ್ಯಾಪಾರ ನಡೆಸಲು ಸೂಚನೆ

ಕಲಬುರಗಿ,ಜು.17–ಸಾರ್ವಜನಿಕರ ಹಿತದೃಷ್ಟಿಯಿಂದ ಕೆ.ಎಂ.ಎಫ್. (ಏಒಈ) ಡೈರಿಯಿಂದ ಹನುಮಾನ್ ದೇವಸ್ಥಾನದವರೆಗೆ ಹಾಗೂ ಬಸ್‌ನಿಲ್ದಾಣದಿಂದ ಕಣ್ಣೆ ಮಾರ್ಕೆಟ್‌ವರೆಗಿನ ನಿಗದಿತ ಜಾಗದಲ್ಲಿ ಈ ಎರಡು ಸ್ಥಳಗಳಲ್ಲಿ ಮಹಾನಗರಪಾಲಿಕೆಯು ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಲು ಸ್ಥಳವನ್ನು (ಗಿಜಟಿಜುಟಿರ ಚಿಂಟಿಜ) ಮೀಸಲಿರಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಪಾದಚಾರಿ ಮಾರ್ಗಗಳಲ್ಲಿ ಅನಧಿಕೃತವಾಗಿ ವ್ಯಾಪಾರ ಮಾಡುವುದರಿಂದ ಸಾರ್ವಜನಿಕರಿಗೆ ವಿಶೇಷವಾಗಿ ಪಾದಚಾರಿಗಳಿಗೆ ಓಡಾಡಲು ತೀವ್ರ ತೊಂದರೆಯಾಗುತ್ತಿದೆ.

# ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎಸ್ ಡಿ ಎಮ್ ಸಿ ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ತಾಲೂಕಿನ ಭಟಪನಹಳ್ಳಿ ಗ್ರಾಮದ ಸರಕಾರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನವಾಗಿ ಶಾಲಾ ಸುಧಾರಣ ಸಮಿತಿಯ ಪದಾಧಿಕಾರಿಗಳನ್ನು ಗುರುವಾರ ಗ್ರಾಮದವರ ಸಮ್ಮುಖದಲ್ಲಿ ಫಕೀರಪ್ಪ ಪೋತುಂಡಿ ಅಧಕ್ಷರಾಗಿ ಉಮಾದೇವಿ ಮುದಿಯಪ್ಪ ಪೂಜಾರ ಉಪಾಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆಮಾಡಲಾಯಿತು.

ಸದಸ್ಯರಾಗಿ ಪ್ರಕಾಶ ಗುರಿಕಾರ, ವೀರಪ್ಪ ಹೊಸಮನಿ, ಶರಣಪ್ಪ ದೊಡ್ಡಮನಿ, ಯಂಕಪ್ಪ ಜರಕುಂಟಿ, ಶರಣಪ್ಪ ಪೋತುಂಡಿ, ಸುರೇಶ್ ಹಾದಿಮನಿ, ಮಂಜುನಾಥ ಹರಿಜನ, ಅರವಿಂದ ಪೂಜಾರ, ಭಾರತಿ ಮಾರುತಿ ಹಾದಿಮನಿ, ನಾಗವ್ವ ಹನುಮಪ್ಪಗಳಗಂಟಿ,ಯಲ್ಲವ್ವಲಕ್ಷ್ಮಪ್ಪಾ ಕಲ್ಲಗೋಡಿ, ಮಲ್ಲಮ ಶಿವಕುಮಾರ ದೊಡ್ಡಮನಿ, ದ್ರಾಕ್ಷಿಯಣಿ ಶಾಂತವಿರಯ್ಯ ಭದ್ರಾಪುರ, ವಿಜಯ ಲಕ್ಷ್ಮಿ ಸುರೇಶ್ ಗುರಿಕಾರ, ಹನುಮವ್ವ ಹರಿಜನ, ಯಶೋಧಾ ರಾಮಪ್ಪ ಗುದ್ಯಾಡಿ ಆಯ್ಕೆಯಾಗಿದ್ದರೆ.ನೂತನ ಪದಾಧಿಕಾರಿಗಳನ್ನು ಸನ್ಮಾನಿ ಗೌರವಿಸಲಾಯಿತು.ಈ ಸಂದರ್ಭದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶ್ರೀಧರ ಹೊಸಮನಿ ಮಾತನಾಡಿ, "ಶಾಲಾ ಸುಧಾರಣೆ ಸಮಿತಿ ಹಾಗೂ ಶಿಕ್ಷಣ ಇಲಾಖೆ ಪರಸ್ಪರ ಹೊಂದಾಣಿಕೆ ಇದ್ದಾಗ ಮಕ್ಕಳ ಶಿಕ್ಷಣ ಅಭಿವೃದ್ಧಿ ಸಾಧ್ಯ ಆ ನಿಟ್ಟಿನಲ್ಲಿ. ಶಾಲಾ ಸಂಸತ ನಡೆದುಕೊಂಡು ಅದರಲ್ಲಿನ ಪ್ರತಿಯೊಬ್ಬ ಸದಸ್ಯರು ಸಭೆಗೆ ಹಾಜರಾಗಿ ಅನಿಸಿಕೆ, ಸಲಹೆ,ಸೂಚನೆ ನೀಡಿ ಸಹಕಾರ ನೀಡಬೇಕಿದೆಎಂದರು. ವಿದ್ಯಾರ್ಥಿಗಳಿಗೆ ಡಿಜಿಟಲ್ ಶಿಕ್ಷಣದ ಮಾರ್ಗದರ್ಶನದ ಅವಶ್ಯಕತೆ ಇದ್ದು, ಇದನ್ನು ಶಾಲೆಗೆ ಅಳವಡಿಸುವಲ್ಲಿ ಸಮಿತಿಯೊಂದಿಗೆ ತಾವು ಕೂಡಾ ಸಹಕಾರ ನೀಡಿವಾದಾಗಿ ತಿಳಿಸಿಡಿದರು. ಆಟದ ಮೈದಾನದ ಕೊರತೆ ಇದ್ದು,ನಮ್ಮ ಜಾಗದಲ್ಲಿ ಅಭ್ಯಾಸ ಮಾಡುವಂತೆ ಶಿಕ್ಷರಿಗೆ ತಿಳಿಸಿದರು.ಈ ಸಂಧರ್ಭದಲ್ಲಿ ನೂತನ ಅಧ್ಯಕ್ಷ ಫಕೀರಪ್ಪ ಪೋತುಂಡಿ ಮಾತನಾಡಿ ಇಂದಿನ ಮಕ್ಕಳು ಮೊಬೈಲ್ ಕಡೆಹೆಚ್ಚು ಗಮನ ಹರಿಸುತ್ತಿದ್ದಾರೆ. ಪಾಲಕರು ಅದನ್ನು ತಪ್ಪಿಸಿ ಶಿಕ್ಷಣ ಕಡೆ ಆಸಕ್ತಿ ಬೆಳಸಬೇಕು ಎಂದುಕರೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಗ್ರಾಪಂ ಮಾಜಿ ಅಧ್ಯಕ್ಷ ಮಹೇಶ್ ದೊಡ್ಡಮನಿ, ಶರಣಪ್ಪ ಹಾದಿಮನಿ,ಹಂಚಳಪ್ಪ ಕಳ್ಳಗೋಡಿ, ಮಲ್ಲಪ್ಪ ಗುಡಿಹಿಂದಲ, ಕೆಂಚಪ್ಪ ನಡುಲಮಾಣಿ, ಪರಸಪ್ಪ ಹೊಸಮನಿ, ವೀರಯ್ಯ ಭದ್ರಾಪುರ,ಮುಖ್ಯ ಗುರುಮಾತೆ ಶಾದೇಕಾಬೇಗಂ ದೈಹಿಕ ಶಿಕ್ಷಣ ಶಿಕ್ಷಕ ಶರಣಪ್ಪ ವಿರಾಪುರ ಇನ್ನಿತರ ಶಿಕ್ಷಕ ವೃಂದದವರಿದ್ದರು.

# ಸೋನಮ್ ವಾಂಗ್ಚುಕ್ ನಿರಶನ ಬೆಂಬಲಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ಧರಣಿ ಸತ್ಯಾಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು




ಜು.17: ನೀಟ್ ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆ ಅಕ್ರಮ ಖಂಡಿಸಿ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ, ಪರಿಸರ, ಮಾನವ ಹಕ್ಕುಗಳ ಹೋರಾಟಗಾರ ಸೋನಮ್ ವಾಂಗ್ಚುಕ್ ಹಾಗೂ ವಿದ್ಯಾರ್ಥಿಗಳ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಬೆಂಬಲಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ನಗರದ ತಹಸಿಲ್ ಕಚೇರಿಯ ಮುಂದೆ ಶುಕ್ರವಾರ ಧರಣಿ ಸತ್ಯಾಗ್ರಹ ನಡೆಸಿ, ಶಿರಸ್ತೆದಾರ್ ಅಂಬಾದಾಸ್ ಅವರ ಮೂಲಕ ವಿವಿಧ ಹಕ್ಕೊತ್ತಾಯಗಳ ಮನವಿಪತ್ರವನ್ನು ರಾಷ್ಟ್ರಪತಿಗಳಿಗೆಶುಕ್ರವಾರರವಾನಿಸಲಾಯಿತು.

ಕಳೆದ 19 ದಿನಗಳಿಂದ ಸೋನಮ್ ವಾಂಗ್‌ಚುಕ್ ಮತ್ತು ಉಪವಾಸ ನಿರತ ಇತರ ಪ್ರತಿಭಟನಾಕಾರರ ಆರೋಗ್ಯ ದಿನದಿಂದ ದಿನಕ್ಕೆ ಗಣನೀಯವಾಗಿ ಹದಗೆಡುತ್ತಿದ್ದರೂ ಕೇಂದ್ರ ಸರ್ಕಾರದ ಯಾವೊಬ್ಬ ಪ್ರತಿನಿಧಿಯೂ ಸತ್ಯಾಗ್ರಹಿಗಳ ಬೇಡಿಕೆಗಳನ್ನು ಆಲಿಸದೇ ಇರುವುದು ಗಮನಿಸಿದರೆ ಫ್ಯಾಸಿಸ್ಟ್ ಸರ್ಕಾರದ ಜೀವ ವಿರೋಧಿ ನೀತಿಗೆ ಸ್ಪಷ್ಟ ಸಾಕ್ಷಿಯಾಗಿದೆ. ಪ್ರಜಾಪ್ರಭುತ್ವದ ಹಕ್ಕುಗಳನ್ನು ಚಲಾಯಿಸುವ ನಾಗರಿಕರಿಗೆ ಯಾವುದೇ ಬೆಲೆ ಇಲ್ಲದಂತಾಗಿದೆ ಎಂದು ಪ್ರತಿಭಟನಾನಿರತರು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾನಿರತರನ್ನು ಉದ್ದೇಶಿಸಿ ಮಾತನಾಡಿದ ಒಕ್ಕೂಟದ ಸಂಚಾಲಕ ಚಂದ್ರಶೇಖರ ಗೊರಬಾಳ, ನೀಟ್ ಪ್ರಶ್ನೆ ಪತ್ರಿಕೆ ಹಗರಣಕ್ಕೆ ಸಂಬಂಧಿಸಿದಂತೆ, ಸಿಬಿಐ ನಡೆಸಿದ ತನಿಖೆಯಲ್ಲಿ ಪ್ರಶ್ನೆ ಪತ್ರಿಕೆ ತಯಾರಿಸುವ ಮಂಡಳಿಯ ಮಹಾರಾಷ್ಟ್ರ ಮೂಲದ ಸದಸ್ಯನೇ ಪ್ರಶ್ನೆ ಪತ್ರಿಕೆಯನ್ನು ಖಾಸಗಿ ಕೋಚಿಂಗ್ ಸೆಂಟರ್‌ವೊಂದಕ್ಕೆ ಮಾರಾಟ ಮಾಡಿರುವುದು ಬಯಲಾಗಿದೆ. ಇಂತಹ ಹಲವು ಪ್ರಕರಣಗಳು ನಡೆದಿವೆ. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಲ್ಲ ಇದೊಂದು ಹಗರಣ ಎನ್ನುವುದು ಸಾರ್ವಜನಿಕ ವಲಯದಲ್ಲಿ ಜಗಜ್ಜಾಹೀರಾಗಿದೆ. ಪ್ರಾಮಾಣಿಕವಾಗಿ ಅಭ್ಯಾಸ ಮಾಡಿದ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳು ಇದರಿಂದ ವಂಚನೆಗೊಳಗಾಗಿದ್ದಾರೆ. ಕೇಂದ್ರ ಸರ್ಕಾರ ಮತ್ತು ಶಿಕ್ಷಣ ಇಲಾಖೆಯ ಹೊಣೆಹೊತ್ತ ಸಚಿವರು ಈ ಬಗ್ಗೆ ಕಿಂಚಿತ್ತೂ ಮಾತನಾಡುತ್ತಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ಮುಖಂಡ ಬಸವಂತರಾಯಗೌಡ ಮಾತನಾಡಿ, "ಯುಪಿಎ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ, ದೇಶವನ್ನು ಅಧೋಗತಿಗೆ ದೂಡಿದೆ ಎಂದು ಆರೋಪಿಸಿ, ಅಣ್ಣಾ ಹಜಾರೆಯವರನ್ನು ಮುಂದಿಟ್ಟುಕೊಂಡು ದೊಡ್ಡ ಆಂದೋಲನ ಸೃಷ್ಟಿಮಾಡಿ 2013ರ ವೇಳೆ ಜನರಿಗೆ ನೂರಾರು ಹುಸಿ ಭರವಸೆಗಳನ್ನು ನೀಡುವ ಮೂಲಕ ಅಧಿಕಾರಕ್ಕೆ ಬಂದ ಬಿಜೆಪಿ ತದನಂತರ ತಾನೂ ಬ್ರಹ್ಮಾಂಡ ಭ್ರಷ್ಟಾಚಾರದಲ್ಲಿ ತೊಡಗಿದೆ. ರೈತರ ಆದಾಯವನ್ನು ದ್ವಿಗುಣ ಮಾಡುತ್ತೇನೆ ಎಂದು ಮೋದಿಯವರು ಹೇಳಿದ್ದರೂ, ಆದರೆ ವಾಸ್ತವದಲ್ಲಿ ಕೃಷಿಗೆ ಹಾಕಿದ ಬಂಡವಾಳ ವಾಪಸ್ ಬರುತ್ತಿಲ್ಲ. ಇದರಿಂದ ರೈತರು ವರ್ಷದಿಂದ ವರ್ಷಕ್ಕೆ ಆತ್ಮಹತ್ಯೆಯ ಹಾದಿ ಹಿಡಿದಿದ್ದಾರೆ. ಈ ಬಗ್ಗೆ ಪ್ರಧಾನಿಯರು ತುಟಿಪಿಟಕ್ಕೆನ್ನುತ್ತಿಲ್ಲ" ಎಂದು ಆಪಾದಿಸಿದರು.

ಎಸ್‌ಐಓ ಜಿಲ್ಲಾ ಘಟಕದ ಅಧ್ಯಕ್ಷ ಡಾ.ವಸೀಮ್ ಮಾತನಾಡಿ, "ನೀಟ್ ಪರೀಕ್ಷಾ ಅಕ್ರಮ 22 ಲಕ್ಷ ವಿದ್ಯಾರ್ಥಿಗಳನ್ನು ಮಾನಸಿಕ ಖಿನ್ನತೆಗೆ ದೂಡಿದೆ. ಅಲ್ಲದೇ ಬಡ ಪ್ರತಿಭಾವಂತ ವಿದ್ಯಾರ್ಥಿಗಳ ಕನಸನ್ನು ನುಚ್ಚುನೂರು ಮಾಡಿದೆ. ಇದೊಂದು ಬಹುದೊಡ್ಡ ಹಗರಣವಾಗಿದ್ದು, ವಿದ್ಯಾರ್ಥಿಗಳ ಬೇಡಿಕೆಗಳನ್ನಿಟ್ಟುಕೊಂಡು ಮಾನವ ಹಕ್ಕುಗಳ ಹೋರಾಟಗಾರ ಸೋನಮ್ ವಾಂಗ್ಚುಕ್ ಮತ್ತು ವಿದ್ಯಾರ್ಥಿಗಳು ಕಳೆದ 19 ದಿನಗಳಿಂದ ಉಪವಾಸ ಸತ್ಯಾಗ್ರಹ ಆರಂಭಿಸಿದ್ದು, ಕನಿಷ್ಠ ಸೌಜನ್ಯಕ್ಕಾದರೂ ಕೇಂದ್ರ ಸರ್ಕಾರ ಅವರ ಅಹವಾಲನ್ನು ಆಲಿಸಿಲ್ಲ. ಪುನಃ ಅವರ ಹೋರಾಟವನ್ನು ಹೇಗಾದರೂ ಮಾಡಿ ಹತ್ತಿಕ್ಕಲು ನೋಡುತ್ತಿರುವುದು ಸರಿಯಲ್ಲ" ಎಂದು ಹೇಳಿದರು.

ಸಮುದಾಯದ ಮುಖಂಡ ಎಸ್. ದೇವೇಂದ್ರಗೌಡ ಮಾತನಾಡಿ, "ನೀಟ್ ಪ್ರಶ್ನೆ ಪತ್ರಿಕಾ ಮಂಡಳಿಯ ಸದಸ್ಯರೇ ಅಕ್ರಮದಲ್ಲಿ ಭಾಗಿಯಾಗಿರುವುದು ತನಿಖೆಯಲ್ಲಿ ಬಯಲಾಗಿದ್ದು, ಬೇಲಿಯೇ ಎದ್ದು ಹೊಲ ಮೇದಂತಾಗಿದೆ. ಇದರ ಹಿಂದೆ ಖಾಸಗಿ ಶಿಕ್ಷಣ ಸಂಸ್ಥೆಗಳ ಲಾಭಿ ಮತ್ತು ಕೇಂದ್ರ ಸರ್ಕಾರದ ಕೆಲ ಕಾಣದ ಕೈಗಳ ಹುನ್ನಾರ ಅಡಗಿದೆ. ದೇಶದ ಶಿಕ್ಷಣ ವ್ಯವಸ್ಥೆ ಅಧೋಗತಿಗೀಡಾಗಿದ್ದು, ಸಂಪೂರ್ಣ ಖಾಸಗೀಮಯವಾಗುತ್ತಿದೆ. ಇದರ ನೈತಿಕ ಹೊಣೆ ಹೊರಬೇಕಾದ ಕೇಂದ್ರ ಸರ್ಕಾರ ನುಣುಚಿಕೊಳ್ಳುತ್ತಿದೆ" ಎಂದು ಆರೋಪಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಮುಖಂಡ ಅಮೀನ್‌ಪಾಷಾ ದಿದ್ದಿಗಿ ಮಾತನಾಡಿ, ಕೇಂದ್ರದ ಬಿಜೆಪಿ ಸರ್ಕಾರಕ್ಕೆ ಕಣ್ಣು, ಕಿವಿ, ಮೂಗು, ಬಾಯಿ ಇಲ್ಲ; ಪ್ರಜ್ಞಾಶೂನ್ಯವಾಗಿದೆ. ನೀಟ್ ಅಕ್ರಮ ಖಂಡಿಸಿ, ವಿದ್ಯಾರ್ಥಿಗಳ ಸಲುವಾಗಿ ಸೋನಮ್ ವಾಂಗ್ಚುಕ್ ಹಾಗೂ ಪ್ರಜಾಸತ್ತಾತ್ಮಕ ಸಂಘಟನೆಯ ವಿದ್ಯಾರ್ಥಿಗಳು ಉಪವಾಸ ಕುಳಿತರೆ ಪ್ರಧಾನಿ ಮೋದಿಯವರು ದೇಶ ದೇಶ ಸುತ್ತುತ್ತಿದ್ದಾರೆ. ಗಾಂಧೀಜಿಯವರು ಉಪವಾಸ ಕುಳಿತರೆ ಬ್ರಿಟಿಷ್ ಅಧಿಕಾರಿಗಳೇ ಅವರು ಇರುವಲ್ಲಿಗೆ ಬಂದಿದ್ದರು. ಆದರೆ ಪ್ರಸ್ತುತ ಬಿಜೆಪಿ ಸರ್ಕಾರದಲ್ಲಿನ ಸಚಿವರ, ಅಧಿಕಾರಿಗಳ ದರ್ಪ, ದೌರ್ಜನ್ಯ ನೋಡಿದರೆ, ಈ ದೇಶದ ಜನರ ಬಗ್ಗೆ ಅವರಿಗೆ ಕಿಂಚಿತ್ತೂ ಕಾಳಜಿ ಇಲ್ಲ ಎಂಬುದು ಅರ್ಥವಾಗುತ್ತದೆ" ಎಂದು ವಾಗ್ದಾಳಿ ನಡೆಸಿದರು.

ಸಿಪಿಐ ಮುಖಂಡ ಭಾಷುಮಿಯಾ ಮಾತನಾಡಿ, "ಮೂರನೇ ಅವಧಿಗೆ ಕೇಂದ್ರದಲ್ಲಿ ಅಧಿಕಾರ ಹಿಡಿದಿರುವ ಬಿಜೆಪಿ ಸರ್ಕಾರ ಜನಸಾಮಾನ್ಯರ ಮೇಲೆ, ದುಡಿಯುವ ಜನರ ಮೇಲೆ ಹಾಗೂ ವಿದ್ಯಾರ್ಥಿ ಯುವಜನರ ಮೇಲೆ ದಾಳಿ ನಡೆಸುತ್ತಿದೆ. ಜನ ವಿರೋಧಿ, ಕಾರ್ಮಿಕ ವಿರೋಧಿ ನೀತಿಗಳು ಇಡೀ ದೇಶವನ್ನು ಆರ್ಥಿಕ ಸಂಕಷ್ಟಕ್ಕೆ ಗುರಿಮಾಡಿದ್ದು, ಜನರು ಅಗತ್ಯವಸ್ತುಗಳನ್ನು ಕೊಳ್ಳಲು ಪರದಾಡುತ್ತಿದ್ದಾರೆ. ಈ ಫ್ಯಾಸಿಸ್ಟ್ ಸರ್ಕಾರವನ್ನು ಬೃಹತ್ ಜನಾಂದೋಲನದ ಮೂಲಕವೇ ಹಿಮ್ಮೆಟ್ಟಿಸಲು ಸಾಧ್ಯ ಎಂದು ಹೇಳಿದರು. ಉಪನ್ಯಾಸಕ ಶಂಕರ ಗುರಿಕಾರ, ಡಿಎಸ್‌ಎಸ್ ಮೂರ್ತಿ ಬಣದ ಜಿಲ್ಲಾಧ್ಯಕ್ಷ ಅಶೋಕ ನಂಜಲದಿನ್ನಿ, ಕೃಷ್ಣಮೂರ್ತಿ ಧುಮುತಿ, ರೈತ ಮುಖಂಡ ಬಸವರಾಜ ಗೋಡಿಹಾಳ, ಸಮ್ಮದ್ ಚೌದ್ರಿ, ಎನ್ಆರ್‌ಬಿಸಿ ಹೋರಾಟಗಾರ ನಾಗರಡ್ಡೆಪ್ಪ ದೇವರಮನಿ, ಅವರು ಕೇಂದ್ರ ಸರ್ಕಾರದ ಆಡಳಿತ ವೈಫಲ್ಯವನ್ನು ಖಂಡಿಸಿದರು. ಪ್ರತಿಭಟನಾ ಧರಣಿಯಲ್ಲಿ ಜಮಾಅತೆ ಇಸ್ಲಾಂ ಹಿಂದ್‌ನ ಹುಸೇನ್‌ಸಾಬ್, ವೆಂಕನಗೌಡ ಗದ್ರಟಗಿ, ಕಂಟೆಪ್ಪ, ಡಿ.ಎಚ್.ಕಂಬಳಿ, ನಾಗರಾಜ್ ಪೂಜಾರ್, ಚಿಟ್ಟಿಬಾಬು ಬೂದಿವಾಳಕ್ಯಾಂಪ್, ಬಸವರಾಜ ಬಾದರ್ಲಿ, ಗಂಗಮ್ಮ ಗೊರಬಾಳ, ಸರಸ್ವತಿ ಪಾಟೀಲ್, ಶಕುಂತಲಾ ಪಾಟೀಲ್, ಹನುಮೇಶ ಗುಡದೂರು, ಬಸವರಾಜ ಕೊಂಡೆ, ಬಸವರಾಜ ಹಸಮಕಲ್, ಡಾ.ಬಸವರಾಜ ನಾಯಕ, ವೀರೇಶ ಕನ್ನಾರಿ, ಕಟ್ಟಡ ಕಾರ್ಮಿಕರ ಸಂಘದ ಜಗದೀಶ್, ತುಳಸಪ್ಪ ದಡೇಸುಗೂರು, ಸಿಪಿಐ(ಎಂಎಲ್) ಲಿಬರೇಶನ ತಾಲ್ಲೂಕು ಕಾರ್ಯದರ್ಶಿ ಬಸವರಾಜ ಬೆಳಗುರ್ಕಿ, ಇಮ್ತಿಯಾಜ್, ಖಾಸಿಂ ಕಾರ್ಪೆಂಟರ್, ಅಬುಲೈಸ್ ನಾಯ್ಕ ಸೇರಿದಂತೆ ಇನ್ನಿತರರು ಇದ್ದರು.

# ವ್ಯಕ್ತಿತ್ವ ವಿಕಸನಕ್ಕಾಗಿ ಕ್ರೀಡೆ ಅವಶ್ಯಕ : ಸುಜಾತ ಹೂನೂರ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ವ್ಯಕ್ತಿತ್ವ ವಿಕಸನವಾಗುತ್ತದೆ ಎಂದು ಲಿಂಗಸಗೂರು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತಾ ಹೂನೂರ ಶುಕ್ರವಾರ ಹೇಳಿದರು.

ಪಟ್ಟಣ ಸಮೀಪದ ಕನ್ನಾಪುರಟ್ಟಿ ವ್ಯಾಪ್ತಿಗೆ ಒಳಪಡುವ ಜವಾಹರ ನವೋದಯ ವಿದ್ಯಾಲಯದ ಆವರಣದಲ್ಲಿ 37ನೇ ಎನ್ ವ್ಹಿ ಎಸ್ ಕ್ಲಸ್ಟರ್ ಮಟ್ಟದ ಬಾಲ್ ಗೇಮ್ಸ್ ಮೀಟ್ 2026 ಕ್ರೀಡಾಕೂಟ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಜ್ಯೋತಿ ಬೆಳಗಿಸಿ ಮಾತನಾಡಿದ ಅವರು ಕ್ರೀಡೆಯು ಕೇವಲ ದೈಹಿಕ ಚಟುವಟಿಕೆಯಲ್ಲ, ಇದು ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಗೆ ಮತ್ತು ಬಲವಾದ ವ್ಯಕ್ತಿತ್ವವನ್ನು ರೂಪಿಸಲು ಪ್ರಮುಖವಾದ ಅಡಿಪಾಯವಾಗಿದೆ. ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ, ಪರಿಶ್ರಮ, ಆತ್ಮವಿಶ್ವಾಸ, ನಾಯಕತ್ವದ ಗುಣಗಳು ಮತ್ತು ಜೀವನದ ಸವಾಲುಗಳನ್ನು ಎದುರಿಸುವ ಧೈರ್ಯ ಹೆಚ್ಚುತ್ತದೆ. ಕ್ರೀಡೆಯಲ್ಲಿ ಸೋಲು ಗೆಲುವು ಸಮನಾಗಿ ಸ್ವೀಕರಿಸಬೇಕು. ನಿರ್ಣಾಯಕರು ಯಾರಿಗೂ ತಾರತಮ್ಯ ಮಾಡದೆ ತೀರ್ಮಾನ ನೀಡಬೇಕೆಂದು ತಿಳಿಸಿದರು.ಜವಾಹರ ನವೋದಯ ಪ್ರಾಚಾರ್ಯ ಮುನೀಂದ್ರ ಕುಮಾರ ಮಾತನಾಡಿ ಮಕ್ಕಳು ಸ್ಪರ್ಧಾ ಮನೋಭಾವನೆಯಿಂದ ಕ್ರೀಡೆಯಲ್ಲಿ ಪಾಲ್ಗೊಳ್ಳಬೇಕು. ಕ್ರೀಡೆಯೆಂದರೆ ಸೋಲು, ಗೆಲುವು ಸಹಜ. ಇದನ್ನು ಗಣನೆಗೆ ತೆಗೆದುಕೊಳ್ಳದೇ ಸ್ಪರ್ಧಾ ಮನೋಭಾವನೆಯಿಂದ ಭಾಗವಹಿಸಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು.ಪಿಜಿಟಿ ಇಂಗ್ಲಿಷ್ ಉಪನ್ಯಾಸಕಿ ಅಂಜಲಿ ಕಾರ್ಯಕ್ರಮ ನಿರೂಪಣೆ ಹಾಗೂ ಪ್ರತಿಜ್ಞಾವಿಧಿ ಭೋದಿಸಿದರು. ಪಿಜಿಟಿ ಇತಿಹಾಸ ಉಪನ್ಯಾಸಕಎಸ್. ಎಂ ನೋಲ್ಕರ್ ಸ್ವಾತಿಸಿಕೊಂಡರು.ಕ್ರೀಡಾಕೂಟದಲ್ಲಿ ಹತ್ತು ಜಿಲ್ಲಾ ಪ್ರತಿಭಾನ್ವಿತ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಹಿಂದಿ ಉಪನ್ಯಾಸಕ ರಾಮಸಿಂಗ, ಮಾತನಾಡಿದರು.ವೇದಿಕೆಯಲ್ಲಿ ಪಿಟಿಸಿಓ ಚಂದ್ರಶೇಖರ್, ಹಿರಿಯ ಕ್ರೀಡಾ ನಿವೃತ್ತಿ ಶಿಕ್ಷಕ ಎಸ್.ಎನ್ ಅಕ್ಕಿ, ವಿದ್ಯಾರ್ಥಿ ಪ್ರತಿನಿಧಿ ವಿನಯ, ಕ್ರೀಡಾ ಶಿಕ್ಷಕರು ಉಪನ್ಯಾಸಕರು, ಪ್ರತಿಭಾನ್ವಿತ ಕ್ರೀಡಾಪಟುಗಳು ಸೇರಿದಂತೆ ಇತರರಿದ್ದರು.

# ಬಿಜೆಪಿ ಮುಖಂಡ ಕೆ. ಕರಿಯಪ್ಪ ಅವರ ೬೦ನೇ ಜನ್ಮದಿನ: ರೈತರ ಹಿತದೃಷ್ಟಿಯಿಂದ ಮಹಾವರುಣ ಯಾಗ: ಪೂಜೆ ಸಲ್ಲಿಸಿದ ಮರುಕ್ಷಣವೇ ಸುರಿದ ಮಳೆ!

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜು.17.ಪ್ರಸ್ತುತ ತಾಲ್ಲೂಕಿನಾದ್ಯಂತ ಮಳೆಯ ಅಭಾವದಿಂದ ರೈತರು ಮತ್ತು ಸಾರ್ವಜನಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಲಾಶಯಗಳು ಬತ್ತುತ್ತಿದ್ದು,ಅಂತರ್ಜಲಮಟ್ಟ ಕುಸಿದು ಬೋರ್‌ವೆಲ್‌ಗಳು ಕೈಕೊಟ್ಟಿವೆ. ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿರುವ ಹಿನ್ನೆಲೆಯಲ್ಲಿ, ಲೋಕ ಕಲ್ಯಾಣಕ್ಕಾಗಿ ಬಿಜೆಪಿ ಮುಖಂಡ ಕೆ. ಕರಿಯಪ್ಪ ಅವರು ತಮ್ಮ 60ನೇ ಜನ್ಮದಿನದ ಅಂಗವಾಗಿ ನಗರದ ಸತ್ಯ ಗಾರ್ಡನ್‌ನಲ್ಲಿ 'ಮಹಾವರುಣ ಯಾಗ ಹಾಗೂ ಪರ್ಜನ್ಯ ಹೋಮ'ವನ್ನು ಹಮ್ಮಿಕೊಂಡಿದ್ದರು.ಬಿಜೆಪಿ ಮುಖಂಡ ಕೆ. ಕರಿಯಪ್ಪ ಮಾತನಾಡಿ,'ನನ್ನ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂಬ ಕಾರ್ಯಕರ್ತರು ಹಾಗೂ ಅಭಿಮಾನಿಗಳ ಒತ್ತಾಯದ ಮೇರೆಗೆ ಈ ನಿರ್ಧಾರ ಕೈಗೊಳ್ಳಲಾಗಿದೆ. ಜನಸಾಮಾನ್ಯರು ಮತ್ತು ರೈತರು ಎದುರಿಸುತ್ತಿರುವ ಸಂಕಷ್ಟವನ್ನು ಗಮನದಲ್ಲಿಟ್ಟುಕೊಂಡು, ಲೋಕ ಕಲ್ಯಾಣಕ್ಕಾಗಿ ಮಹಾ ವರುಣಯಾಗ ಹಾಗೂ ಪರ್ಜನ್ಯ ಹೋಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.ಅಲ್ಲದೆ, 'ಪ್ರಕೃತಿಯ ವೈಪರೀತ್ಯದಿಂದಾಗಿ ಮಳೆಯಿಲ್ಲದೆ ರೈತರು ತೀವ್ರ ಆತಂಕದಲ್ಲಿದ್ದಾರೆ. ಸಕಾಲದಲ್ಲಿ ಸಮೃದ್ಧಿಯಾಗಿ ಮಳೆಯಾಗಲಿ ಎಂಬ ಸಂಕಲ್ಪದೊಂದಿಗೆ,ಪರಾಭವ ನಾಮ ಸಂವತ್ಸರದ ಆಷಾಢ ಶುದ್ಧ ತದಿಗೆಯಿಂದ ಪಂಚಮಿಯವರೆಗೆ ವೇದಶಾಸ್ತ್ರ ಪಾರಂಗತರಿಂದ ವೈದಿಕ ಸಂಪ್ರದಾಯದಂತೆ ಶಾಸ್ತ್ರೋಕ್ತವಾಗಿ ಯಾಗವನ್ನು ನೆರವೇರಿಸಲಾಗಿದೆ'ಎಂದು ಅವರು ವಿವರಿಸಿದರು.ಪೂಜೆಯ ಫಲವಾಗಿ ಸುರಿದ ಮಳೆ:ಕುರಿ ಕಾಯುವವರು ಕಂಬಳಿ ಬೀಸಿದರೆ ಮಳೆ ಬರುತ್ತದೆ ಎಂಬ ಹಿರಿಯರ ನಂಬಿಕೆಯಂತೆ, ಕೆ.ಕರಿಯಪ್ಪ ಅವರು ರೈತರ ಸಂಕಷ್ಟ ಪರಿಹಾರಕ್ಕಾಗಿ ಹಮ್ಮಿಕೊಂಡಿದ್ದ ಈ ವಿಶೇಷ ಪೂಜೆಯ ಸಂಜೆಯ ಒಳಗೆಯೇ ಮಳೆ ಸುರಿದಿರುವುದು ಎಲ್ಲೆಡೆ ಅಚ್ಚರಿ ಮತ್ತು ಸಂಭ್ರಮಕ್ಕೆ ಕಾರಣವಾಗಿದೆ. ಈ ಮಳೆ ತುಂಗಭದ್ರಾ ಜಲಾಶಯದ ಭರ್ತಿಗೆ ನಾಂದಿಯಾಗಲಿ ಎಂದು ಸಾರ್ವಜನಿಕರು ಆಶಯ ವ್ಯಕ್ತಪಡಿಸುತ್ತಿದ್ದಾರೆ ರಾಜಕೀಯ ವಲಯದಲ್ಲಿ ಹೊಸ ಸಂಚಲನ:ಮಹಾವರುಣ ಯಾಗದ ಯಶಸ್ಸು ಹಾಗೂ ಕೆ. ಕರಿಯಪ್ಪ ಅವರ ಸಮಾಜಮುಖಿ ಕಾರ್ಯಗಳು ರಾಜಕೀಯ ವಲಯದಲ್ಲಿ ಹೊಸ ಸಂಚಲನ ಮೂಡಿಸಿವೆ. ಸಿಂಧನೂರು ಕ್ಷೇತ್ರದಲ್ಲಿ ಇದೀಗ 'ಬದಲಾವಣೆಯ ಪರ್ವ'ದ ಮಾತುಗಳು ಕೇಳಿಬರುತ್ತಿವೆ. ಇತ್ತೀಚೆಗೆ ತಮಿಳುನಾಡಿನಲ್ಲಿ ನಟ ವಿಜಯ್ ಜೋಸೆಫ್ ಅವರ ಪಕ್ಷವನ್ನು ಅಭೂತಪೂರ್ವವಾಗಿ ಬೆಂಬಲಿಸಿ,ಅಲ್ಲಿನ ಜನತೆ ಐತಿಹಾಸಿಕ ಬದಲಾವಣೆಗೆ ಸಾಕ್ಷಿಯಾಗಿದ್ದಾರೆ. ಅದೇ ಮಾದರಿಯಲ್ಲಿ,ಸಿಂಧನೂರು ತಾಲೂಕಿನಲ್ಲೂ ಮುಂಬರುವ 2028ರ ವಿಧಾನಸಭೆ ಚುನಾವಣೆಯಲ್ಲಿ ಜನತೆ ಬದಲಾವಣೆಯನ್ನು ಬಯಸುತ್ತಿದ್ದು, ಬಿಜೆಪಿ ಮುಖಂಡ ಕೆ ಕರಿಯಪ್ಪ ಪರ ಒಲವು ವ್ಯಕ್ತವಾಗುತ್ತಿದೆ ಎಂಬ ಚರ್ಚೆ ಸಾರ್ವಜನಿಕ ವಲಯದಲ್ಲಿ ಜೋರಾಗಿದೆ.ಈ ವೇಳೆ ಬಿಜೆಪಿ ಪಕ್ಷದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಸೇರಿದಂತೆ ಇತರು ಇದ್ದರು.

# ಹಂಚಿನಾಳ ಕೆ ಕ್ಯಾಂಪ್‌ನಲ್ಲಿ ಸಾಂಕ್ರಾಮಿಕ ರೋಗಗಳ ಕುರಿತು ಜಾಗೃತಿ




• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಸಿಂಧನೂರು: ಜು.17.ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಮತ್ತು ಗಾಂಧಿನಗರದ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ಹಂಚಿನಾಳ (ಕೆ) ಕ್ಯಾಂಪ್‌ನಲ್ಲಿ ಸಾಂಕ್ರಾಮಿಕ ರೋಗಗಳು ಹಾಗೂ ರೇಬಿಸ್ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.ಕಾರ್ಯಕ್ರಮದಲ್ಲಿ ಮಾತನಾಡಿದ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಮತಿ ಗೀತಾ ಹಿರೇಮಠ್ ಅವರು , ಪ್ರಾಣಿಗಳ ಕಡಿತದಿಂದ ಉಂಟಾಗುವ ಗಂಭೀರ ಆರೋಗ್ಯ ಸಮಸ್ಯೆಗಳ ಬಗ್ಗೆ ಎಚ್ಚರಿಕೆ ನೀಡಿದರು. "ನಾಯಿ, ಬೆಕ್ಕು ಅಥವಾ ಇತರೆ ಪ್ರಾಣಿಗಳ ಕಡಿತದಿಂದ ರೇಬಿಸ್ ರೋಗ ಹರಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಇದು ಕೇಂದ್ರ ನರಮಂಡಲದ ಮೇಲೆ ದಾಳಿ ಮಾಡುವ ಮಾರಕ ವೈರಸ್ ಆಗಿದೆ. ರೋಗ ಲಕ್ಷಣಗಳು ಕಾಣಿಸಿಕೊಂಡ ನಂತರ ಚಿಕಿತ್ಸೆ ನೀಡುವುದು ಕಷ್ಟಸಾಧ್ಯ, ಆದ್ದರಿಂದ ಲಸಿಕೆ ಪಡೆಯುವುದೊಂದೇ ಪರಿಹಾರ ಎಂದು ತಿಳಿಸಿದರು. ಪ್ರಾಣಿ ಕಚ್ಚಿದ ಕೂಡಲೇ ಗಾಯದ ಜಾಗವನ್ನು ಸೋಪಿನಿಂದ ಚೆನ್ನಾಗಿ ತೊಳೆಯಬೇಕು. ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರ ಸಲಹೆಯಂತೆ ಆಂಟಿ-ರೇಬಿಸ್ ಲಸಿಕೆ ಪಡೆಯಬೇಕು.ಜಿಲ್ಲಾಡಳಿತವು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಲಸಿಕೆಯನ್ನು ಲಭ್ಯವಾಗಿಸಿದೆ, ಸಾರ್ವಜನಿಕರು ನಿರ್ಲಕ್ಷ್ಯ ಮಾಡಬಾರದು ಎಂದು ಮನವಿ ಮಾಡಿದರು.ಈ ಸಂದರ್ಭದಲ್ಲಿ ರೇಬಿಸ್ ರೋಗದ ಲಕ್ಷಣಗಳಾದ ಜ್ವರ, ತಲೆನೋವು, ಗಂಟಲು ನೋವು, ಅತಿಯಾದ ತುರಿಕೆ, ನೀರು ಮತ್ತು ಗಾಳಿಯನ್ನು ಕಂಡರೆ ಭಯಪಡುವುದು ಹಾಗೂ ಸ್ನಾಯು ಸೆಳೆತ ಕಂಡು ಬರುತ್ತದೆ ಎಂಬ ಮಾಹಿತಿ ನೀಡಲಾಯಿತು.ಈ ವೇಳೆ ಸಿಎಚ್‌ಓ ಸುಮಾ ಪಾಟೀಲ್, ಪಿಎಚ್‌ಸಿಓ ರೇಣುಕಾ, ಎಚ್‌ಐಓ ಪದ್ಮಾವತಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ನೂತನ ಜಿಲ್ಲಾ ಆರೋಗ್ಯಾಧಿಕಾರಿಯಾಗಿ ಡಾ.ನಂದಿತಾ ಎಮ್.ಎನ್. ಅಧಿಕಾರ ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜು.17: ಜಿಲ್ಲೆಯ ನೂತನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ (ಡಿಎಚ್‌ಓ)ಯಾಗಿ ಡಾ.ನಂದಿತಾ ಎಮ್. ಎನ್. ಅವರು ಜುಲೈ 17ರ ಶುಕ್ರವಾರ ದಂದು ಅಧಿಕಾರ ಸ್ವೀಕರಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ನಿರ್ಗಮಿತ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಸುರೇಂದ್ರ ಬಾಬು ಅವರಿಂದ ಅಧಿಕಾರವನ್ನು ಅಧಿಕೃತವಾಗಿ ಸ್ವೀಕರಿಸಿ, ನಂತರ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಜಿಲ್ಲೆಯ ಸಾರ್ವಜನಿಕ ಆರೋಗ್ಯ ಸೇವೆಗಳನ್ನು ಮತ್ತಷ್ಟು ಬಲಪಡಿಸಲು ಹಾಗೂ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಆದ್ಯತೆ ನೀಡುವುದಾಗಿ ತಿಳಿಸಿದರು.ತಾಯಿ ಮತ್ತು ಶಿಶು ಆರೋಗ್ಯ, ಕ್ಷಯ-ರೋಗ ನಿರ್ಮೂಲನೆ, ಸಾಂಕ್ರಾಮಿಕ ರೋಗಗಳ ನಿಯಂತ್ರಣ, ಲಸಿಕಾ ಕಾರ್ಯಕ್ರಮ, ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ಸೇವೆಗಳ ವಿಸ್ತರಣೆ ಸೇರಿದಂತೆ ಇಲಾಖೆಯ ಎಲ್ಲ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಜಾರಿಗೊಳಿಸಲು ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಲಾಗುವುದು ಎಂದು ಹೇಳಿದರು.

ಈ ವೇಳೆ ಇಲಾಖೆಯ ವಿವಿಧ ವಿಭಾಗದ ಮುಖ್ಯಸ್ಥರು, ವೈದ್ಯರು, ಸಿಬ್ಬಂದಿಗಳು ನೂತನ ಡಿಎಚ್‌ಓ ಅವರನ್ನು ಅಭಿನಂದಿಸಿ, ಶುಭ ಹಾರೈಸಿದರು.ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಇಲಾಖೆಯ ವಿವಿಧ ವಿಭಾಗಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಶರಣಬಸವ ವಿಶ್ವವಿದ್ಯಾಲಯದಿಂದ ಕಂಚಿಕೇರಿ ಸದಾನಂದಗೆ ಪಿಎಚ್. ಡಿ.

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಶ್ರೀ ಕಂಚಿಕೇರಿ ಸದಾನಂದ ಅವರು ಮಂಡಿಸಿದ "ಹೈಡ್ರೋಬಾಯೋಲಾಜಿಕಲ್ ಸ್ಟಡೀಸ್ ಆನ್ ಗೊಬ್ಬೂರ ರಿಜರ್ವಿಯರ್, ಅಫಜಲ್‌ಪುರ, ಕಲಬುರಗಿ ಡಿಸ್ಟ್ರಿಕ್ಟ್, ಕರ್ನಾಟಕ" ಎಂಬ ಮಹಾಪ್ರಭಂದಕ್ಕೆ ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದಿಂದ ಪಿಎಚ್. ಡಿ. ಪದವಿ ಪಡೆದಿದ್ದಾರೆ. ವಿವಿಯ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಪ್ರಾಣಿಶಾಸ್ತ್ರ ವಿಭಾಗದ ಡಾ. ನಾಗಭೂಷಣ ರೆಡ್ಡಿ ಇವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದಾರೆ.

# ತಾಳೂರು ರಸ್ತೆ ಬಸ್ ಸಂಚಾರ ಮಾರ್ಗ ತಾತ್ಕಾಲಿಕ ಬದಲಾವಣೆ : ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಆದೇಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ತಾಳೂರು ಗ್ರಾಮಕ್ಕೆ ಸಂಪರ್ಕಿಸುವ ಮುಖ್ಯ ರಸ್ತೆಯಲ್ಲಿ ಸೇತುವೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಸಾರ್ವಜನಿಕ ಸುರಕ್ಷತೆ ಹಾಗೂ ಸುಗಮ ಸಂಚಾರದ ಹಿತದೃಷ್ಟಿಯಿಂದ ಈ ಮಾರ್ಗದಲ್ಲಿ ಚಲಿಸುವ ಬಸ್ಸುಗಳ ಸಂಚಾರವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿ, ಪರ್ಯಾಯ ಮಾರ್ಗಗಳಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

*ಕಾಮಗಾರಿಯ ಹಿನ್ನೆಲೆ:*

ಲೋಕೋಪಯೋಗಿ ಇಲಾಖೆಯ ಕೆಎಂಇಆರ್‌ಸಿ ಯೋಜನೆ ಅಡಿಯಲ್ಲಿ ರಾಜ್ಯ ಹೆದ್ದಾರಿ-61 ಮತ್ತು ಹೆದ್ದಾರಿ-128 ಕ್ಕೆ ಸೇರುವ ದೇವದುರ್ಗ-ಅಮರಾಪುರ-ಭೋಗಾವತಿ-ಹಿರೇಕೋಟ್ನೇಕಲ್-ತಾಳೂರು-ಬಳ್ಳಾರಿ-ರೂಪನಗುಡಿ-ಚೆಳ್ಳಗುರ್ಕಿ ರಸ್ತೆಯ ಚತುಷ್ಪಥ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ. ಕೋರ್ಲಗುಂದಿ ಮತ್ತು ಹಂದ್ಯಾಳ್ ಗ್ರಾಮಗಳ ಮಧ್ಯೆ ಬರುವ ಎಲ್.ಎಲ್.ಸಿ ಕಾಲುವೆಗೆ ಅಡ್ಡಲಾಗಿ ಹೊಸ ಸೇತುವೆ ನಿರ್ಮಾಣ ಕಾರ್ಯ ಭರದಿಂದ ಸಾಗುತ್ತಿದೆ. ಈ ಸೂಕ್ಷ್ಮ ರಸ್ತೆಯಲ್ಲಿ ಭಾರಿ ಗಾತ್ರದ



ಸರ್ಕಾರಿ ಬಸ್ಸುಗಳು ನಿರಂತರವಾಗಿ ಸಂಚರಿಸುವುದರಿಂದ ಸೇತುವೆ ಕಾಮಗಾರಿಗೆ ತೀವ್ರ ಅಡಚಣೆಯಾಗುತ್ತಿತ್ತು. ಇದನ್ನು ಪರಿಗಣಿಸಿ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ವರದಿ ನೀಡಿದ್ದರು.

ಹಾಗಾಗಿ ಮೋಟಾರ್ ವಾಹನ ಕಾಯ್ದೆ 1988ರ ಅಧಿನಿಯಮ 115 ಹಾಗೂ ಕರ್ನಾಟಕ ಮೋಟಾರ್ ವಾಹನ ನಿಯಮಗಳು 1989ರ ನಿಯಮ 221 ಎ (5) ರನ್ವಯ ಈ ಕ್ರಮ ಕೈಗೊಳ್ಳಲಾಗಿದೆ.

ಪರ್ಯಾಯ ಮಾರ್ಗಗಳು:

ಬಳ್ಳಾರಿಯಿಂದ ಹೊರಡುವ ಬಸ್ಸುಗಳು ಕೋಳೂರು ಕ್ರಾಸ್ - ದಮ್ಮೂರು - ಡಿ. ಕಗ್ಗಲ್ - ಚಾನಾಳು - ಚಾನಾಳು ಕ್ರಾಸ್ ಮಾರ್ಗವಾಗಿ ತಾಳೂರು ಗ್ರಾಮವನ್ನು ತಲುಪುವುದು.

ಪರ್ಯಾಯವಾಗಿ ಬಳ್ಳಾರಿಯಿಂದ ಮೋಕಾ - ಬಸರ-ಕೋಡು - ಹಿರೇಹಡಗಲಿ ಮಾರ್ಗವಾಗಿ ತಾಳೂರು ಗ್ರಾಮಕ್ಕೆ ಸಂಚರಿಸಬಹುದಾಗಿದೆ.

ಈ ಆದೇಶವು ಆಗಸ್ಟ್ 06 ರವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ರಸ್ತೆಯ ಪರ್ಯಾಯ ತಿರುವುಗಳಲ್ಲಿ ಸೂಕ್ತ ಸಂಕೇತ ಫಲಕಗಳನ್ನು ಅಳವಡಿಸಲು ಹಾಗೂ ಅಗತ್ಯ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಯವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಈ ತಾತ್ಕಾಲಿಕ ಬದಲಾವಣೆಗೆ ಸಾರ್ವಜನಿಕರು ಹಾಗೂ ಪ್ರಯಾಣಿಕರು ಸಹಕರಿಸಬೇಕು ಎಂದು ಅವರು ತಿಳಿಸಿದ್ದಾರೆ.

# ಭೂ ಒಡೆತನ ಯೋಜನೆ: ಜಮೀನು ಖರೀದಿ ಪ್ರಸ್ತಾವನೆಗೆ ಆಕ್ಷೇಪಣೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಳ್ಳಾರಿ ಜಿಲ್ಲಾ ಕಚೇರಿಯ ವತಿಯಿಂದ ಜಾರಿಗೆ ತರಲಾಗುತ್ತಿರುವ 'ಭೂ ಒಡೆತನ ಯೋಜನೆ'ಯಡಿ ಪರಿಶಿಷ್ಟ ಪಂಗಡದ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಜಮೀನು ಖರೀದಿಸಲು ನಿಗಮವು ಉದ್ದೇಶಿಸಿದೆ. ಇದಕ್ಕಾಗಿ ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲ್ಲೂಕಿನ ತೆಕ್ಕಲಕೋಟೆ ಹಾಗೂ ಸಿರುಗುಪ್ಪ ಹೋಬಳಿಯ ಸಿರಿಗೇರಿ ಮತ್ತು ರಾರಾವಿ ಗ್ರಾಮಗಳ ಒಟ್ಟು 15 ಭೂ ಮಾಲೀಕರು ತಮ್ಮ ಜಮೀನನ್ನು ನಿಗಮಕ್ಕೆ ಮಾರಾಟ ಮಾಡಲು ಸ್ವಇಚ್ಛೆಯಿಂದ ಪ್ರಸ್ತಾವನೆಗಳನ್ನು ಸಲ್ಲಿಸಿದ್ದಾರೆ.

ಆಕ್ಷೇಪಣೆ ಸಲ್ಲಿಕೆಗೆ ಆಗಸ್ಟ್ 1 ಕೊನೆ ದಿನ: ಪ್ರಸ್ತಾವನೆ ಸಲ್ಲಿಕೆಯಾಗಿರುವ ಜಮೀನುಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಅಥವಾ ಇತರ ಯಾವುದೇ ವ್ಯಕ್ತಿಗಳಿಂದ ಏನಾದರೂ ಕಾನೂನುಬದ್ಧ ಆಕ್ಷೇಪಣೆಗಳಿದ್ದಲ್ಲಿ, ಅವರು ಸೂಕ್ತ ದಾಖಲೆಗಳೊಂದಿಗೆ ತಮ್ಮ ಲಿಖಿತ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ.

ಆಕ್ಷೇಪಣೆಗಳನ್ನು ಆಗಸ್ಟ್ 01 ರ ಒಳಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿಯ ಅವಧಿಯಲ್ಲಿ ಖುದ್ದಾಗಿ ಸಲ್ಲಿಸಲು ಕೋರಲಾಗಿದೆ. ನಿಗದಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ವಿಳಾಸ: ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಮನೆ ನಂ.37/10, ನಂದಿ ಶಾಲೆ ಹಿಂಭಾಗ, 1ನೇ ತಿರುವು, ನಂದಿ ಕಾಲೋನಿ, ಕಂಟೋನ್ಮೆಂಟ್, ಬಳ್ಳಾರಿ - 583104. ದೂ. 08392-245551 ಅನ್ನು ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಸ್ಪತ್ರೆಗಳ ಸುತ್ತಮುತ್ತ ತಂಬಾಕು ಮುಕ್ತ ವಲಯ ಜಾರಿ: ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮ : ತಹಶೀಲ್ದಾರ ವಿಶ್ವಜಿತ್ ಮೆಹೆತಾ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಾರ್ವಜನಿಕರ ಆರೋಗ್ಯ ರಕ್ಷಣೆ ಮತ್ತು ರೋಗಿಗಳಿಗೆ ಮುಕ್ತ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಆಸ್ಪತ್ರೆಗಳ ಸುತ್ತಮುತ್ತ ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲು ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ ವಿಶ್ವಜಿತ್ ಮೆಹೆತಾ ಅವರು ಹೇಳಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 100 ಯಾರ್ಡ್ ವ್ಯಾಪ್ತಿಯಲ್ಲಿ ಕಡ್ಡಾಯ ನಿಷೇಧ: ಕೋಟ್ಪಾ ಕಾಯ್ದೆಯಡಿ ಶಾಲಾ-ಕಾಲೇಜುಗಳಂತೆ ಈಗ ಆಸ್ಪತ್ರೆಗಳೂ ಸಹ ಪ್ರಮುಖ ಆದ್ಯತೆಯ ವಲಯಗಳಾಗಿವೆ. ಆಸ್ಪತ್ರೆಯ ಆವರಣದಿಂದ 100 ಯಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಬೀಡಿ, ಸಿಗರೇಟ್, ಗುಟ್ಕಾ ಸೇರಿದಂತೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದನ್ನು ಕಾನೂನುಬಾಹಿರ ಎಂದು ಘೋಷಿಸಲಾಗಿದೆ ಎಂದು ತಿಳಿಸಿದರು. ಅಂಗಡಿಗಳ ತೆರವುಗೊಳಿಸಲು ಕಾರ್ಯಾಚರಣೆ ನಡೆಸಿ:

ನಗರದ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ತಡೆಗೋಡೆಯ ಹೊರಭಾಗದಲ್ಲಿ ಸಣ್ಣ ಪುಟ್ಟ ಗೂಡಂಗಡಿಗಳಲ್ಲಿ ತಂಬಾಕು ಉತ್ಪನ್ನ ಮಾರಾಟ ಮತ್ತು ಬಳಕೆ ಅತಿಹೆಚ್ಚು ಕಂಡುಬರುತ್ತಿದೆ. ಈ ಕುರಿತು ಮಹಾನಗರ ಪಾಲಿಕೆ ಮತ್ತು ಆರೋಗ್ಯ ನಿರೀಕ್ಷಕರು ಜಂಟಿ ದಾಳಿ ನಡೆಸಿ, ತಂಬಾಕು ಉತ್ಪನ್ನಗಳನ್ನು ವಶಪಡಿಸಿಕೊಳ್ಳಬೇಕು. ಅಂಗಡಿಗಳನ್ನು ತೆರವುಗೊಳಿಸುವ ಮೂಲಕ ಆಸ್ಪತ್ರೆಯ ಪ್ರವೇಶ ದ್ವಾರ ಹಾಗೂ ಸುತ್ತಮುತ್ತಲಿನ ಗೋಡೆಗಳ ಮೇಲೆ 'ಇದು ತಂಬಾಕು ಮುಕ್ತ ವಲಯ, ನಿಯಮ ಉಲ್ಲಂಘಿಸಿದರೆ ದಂಡ ವಿಧಿಸಲಾಗುವುದು' ಎಂಬ ಎಚ್ಚರಿಕೆ ಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಸೂಚಿಸಿದರು.

ನಿಯಮ ಉಲ್ಲಂಘಿಸುವ ತಂಬಾಕು ಅಂಗಡಿಗಳಿಗೆ ದಂಡ ವಿಧಿಸಿ: ರಾಜ್ಯ ತಂಬಾಕು ನಿಯಂತ್ರಣ ಕೋಶದ ಸಂಯೋಜಕ ಡಾ. ಮಹಾಂತೇಶ ಉಳ್ಳಾಗಡ್ಡಿ ಅವರು ಮಾತನಾಡಿ, ಜಿಲ್ಲೆಯ ಯಾವುದೇ ಶೈಕ್ಷಣಿಕ ಸಂಸ್ಥೆಯ 100 ಮೀಟರ್ ವ್ಯಾಪ್ತಿಯ ಒಳಗಡೆ ಯಾವುದೇ ರೀತಿಯ ತಂಬಾಕು ಉತ್ಪನ್ನಗಳ ಮಾರಾಟ ಮಾಡುವಂತಿಲ್ಲ. ಲೈಸೆನ್ಸ್ ನೀಡುವಾಗ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಪರಿಗಣಿಸಬೇಕು. ಕೋಟ್ಪಾ ಲೈಸೆನ್ಸ್ ನಿಯಮಗಳನ್ನು



ಉಲ್ಲಂಘಿಸುವ ಮಳಿಗೆಗಳ ವಿರುದ್ಧ ಕಠಿಣ ಆರ್ಥಿಕ ದಂಡ ವಿಧಿಸಲು ಅವಕಾಶವಿದೆ ಎಂದು ಹೇಳಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘನೆಗೆ ರೂ. 4,000 ದಂಡ. ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘನೆಗೆ ರೂ. 3,000 ದಂಡ. ಒಂದು ವೇಳೆ ಕಾನೂನು ಉಲ್ಲಂಘನೆ ಮುಂದುವರೆದಲ್ಲಿ, ಪ್ರತಿದಿನಕ್ಕೆ ರೂ. 100 ರಂತೆ ಹೆಚ್ಚುವರಿ ದಂಡ ವಿಧಿಸಲಾಗುತ್ತದೆ. ಅದೇರೀತಿಯಾಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 1 ವರ್ಷದ ಅವಧಿಗೆ ರೂ. 500 ಲೈಸೆನ್ಸ್ ಶುಲ್ಕ ನಿಗದಿಪಡಿಸಲಾಗಿದೆ. ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 5 ವರ್ಷಗಳ ಅವಧಿಗೆ ರೂ. 500 ನವೀಕರಣ ಶುಲ್ಕ ಇರಲಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಟಿಬಿ-ತಂಬಾಕು ಮುಕ್ತ ಸಮನ್ವಯತೆ:

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿ ಡಾ. ಮರಿಯಂಬಿ ವಿ.ಕೆ ಅವರು ಮಾತನಾಡಿ, ಕ್ಷಯರೋಗಿಗಳಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳನ್ನು ತಡೆಯಲು 'ಟಿಬಿ-ತಂಬಾಕು ಸಮನ್ವಯ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪ್ರಸ್ತುತ ದಾಖಲಾಗಿರುವ ಟಿಬಿ ಪ್ರಕರಣಗಳ ಪೈಕಿ 115 ಕ್ಷಯರೋಗಿಗಳು ನಿಯಮಿತವಾಗಿ ತಂಬಾಕು ಸೇವನೆ ಮಾಡುತ್ತಿರುವುದು ಪತ್ತೆಯಾಗಿದೆ. ಈ ಎಲ್ಲಾ 115 ರೋಗಿಗಳನ್ನು ಆರೋಗ್ಯ ಇಲಾಖೆಯ ಸಿಬ್ಬಂದಿ ನಿರಂತರವಾಗಿ ಸಂಪರ್ಕ ಮಾಡಲಾಗುತ್ತಿದ್ದು, ಅವರಿಗೆ ತಂಬಾಕು ಮುಕ್ತಿಗಾಗಿ ಸೂಕ್ತ ಕೌನ್ಸೆಲಿಂಗ್ ಮತ್ತು ಚಿಕಿತ್ಸಕ ನೆರವು ನೀಡಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಂಬಾಕು ಮುಕ್ತಿ ಕೇಂದ್ರವು ಈ ತ್ರೈಮಾಸಿಕದಲ್ಲಿ ಒಟ್ಟು 3,352 ಒಪಿಡಿ ರೋಗಿಗಳನ್ನು ಸ್ಕ್ರೀನಿಂಗ್‌ಗೆ ಒಳಪಡಿಸಲಾಗಿದೆ. ಇವರಲ್ಲಿ 1,332 ಜನರಿಗೆ ತಂಬಾಕು ಮುಕ್ತಿಗಾಗಿ ವಿಶೇಷ ಕೌನ್ಸೆಲಿಂಗ್ ನೀಡಲಾಗಿದೆ. ತೀವ್ರ ತಂಬಾಕು ವ್ಯಸನದಿಂದ ಬಳಲುತ್ತಿದ್ದ 20 ಜನರನ್ನು ಸಂಪೂರ್ಣವಾಗಿ ತಂಬಾಕು ಮುಕ್ತರನ್ನಾಗಿಸುವಲ್ಲಿ ಕೇಂದ್ರದ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ನಿಯಮಾನುಸಾರ ಕಡ್ಡಾಯವಾಗಿ ಧೂಮಪಾನ ವಲಯಗಳನ್ನು ಸ್ಥಾಪಿಸಬೇಕು. ಕ.ಕ.ರಾ.ರ.ಸಾ. ಸಂಸ್ಥೆಯ ಬಳ್ಳಾರಿ ವಿಭಾಗದಲ್ಲಿ ಒಟ್ಟು 37 ಪ್ರಕರಣಗಳನ್ನು ದಾಖಲಿಸಿ ರೂ. 3,050 ದಂಡ ವಸೂಲಿ ಮಾಡಲಾಗಿದೆ. ನಿಲ್ದಾಣಗಳಲ್ಲಿ ತಂಬಾಕು ನಿಷೇಧ ಹಾಗೂ ಬಸ್‌ಗಳ ಮೇಲಿನ ಜಾಹೀರಾತು ತೆರವುಗೊಳಿಸಬೇಕು. ಬಸ್ ನಿಲ್ದಾಣಗಳಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟವಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಹಶೀಲ್ದಾರ ವಿಶ್ವಜಿತ್ ಮೆಹೆತಾ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ನಗರ ಡಿವೈಎಸ್ಪಿ ಗೋವಿಂದರಾಜು ವಿ., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಇಂದ್ರಾಣಿ ವಿ., ಬಿಎಂಸಿ ಆರ್ ಸಿ ಅಧೀಕ್ಷಕಿ ಡಾ. ಇಂಧುಮತಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರ ಪ್ರಶಾಂತ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಾಣಿಕಟ್ಟಾದಲ್ಲಿ ಗುಡ್ಡ ಕುಸಿದು ರಸ್ತೆ ಸಂಚಾರ ಸಂಪೂರ್ಣ ಬಂದ್



• ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ

ಕಳೆದೆರಡು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ಗೋಕರ್ಣದಿಂದ ತದಡಿಗೆ ಸಾಗುವ ಮಾರ್ಗಮಧ್ಯದ ಸಾಣಿಕಟ್ಟಾದಲ್ಲಿ ಗುಡ್ಡದ ಮಣ್ಣು ಕುಸಿದು ರಸ್ತೆಯ ಆವರಿಸಿಕೊಂಡ ಘಟನೆ ಶುಕ್ರವಾರ ನಡೆದಿದೆ. ಇದರಿಂದಾಗಿ ರಸ್ತೆ ಸಂಚಾರ ಸಂಪೂರ್ಣ ಬಂದ್ ಮಾಡಲಾಗಿದೆ. ಹಾಗೇ ತದಡಿ, ಬೇಲೆಕಾನ್‌ಗೆ ತೆರಳಬೇಕೆಂದರೆ ಸುತ್ತುಬಳಸಿ ಬರಬೇಕಾದ ಪರಿಸ್ಥಿತಿ ಉಂಟಾಗಿದೆ.

ಸಾಣಿಕಟ್ಟಾ, ಮೂಡಂಗಿ ಭಾಗಗಳಲ್ಲಿ ರಸ್ತೆಯಂಚಿಗೆ ಗುಡ್ಡವಿದ್ದು ಅದೆಲ್ಲವೂ ಬಿರುಕು ಬಿಟ್ಟು ನಿಂತಿದೆ. ಯಾವುದೇ ಕ್ಷಣದಲ್ಲಿ ಮತ್ತೆ ಅಪಾಯ ಉಂಟಾಗುವ ಸಾಧ್ಯತೆ ಇರುವುದರಿಂದ ಪೊಲೀಸರು 2 ಕಡೆಗಳಲ್ಲಿ ಬ್ಯಾರಿಕೆಡ್ ಹಾಕಿ ವಾಹನ ಸಂಚಾರಕ್ಕೆ ತಡೆ-ಯೊಡ್ಡಿದ್ದಾರೆ.

ಗೋಕರ್ಣ ಗ್ರಾ.ಪಂ.ವತಿಯಿಂದ ತಾತ್ಕಾಲಿಕವಾಗಿ ಮಣ್ಣನ್ನು ತೆರವುಗೊಳಿಸಿದ್ದಾರೆ. ಆದರೆ ಇದು ನಮಗೆ ಸಂಬಂಧಿಸಿದ್ದಲ್ಲ ಎಂಬ ಹಾರಿಕೆ ಉತ್ತರವನ್ನು ನೀಡುತ್ತಿದ್ದಾರೆ ಎಂದು ಸಾಣಿಕಟ್ಟಾದ ಪ್ರಮುಖರಾದ ಓ.ಟಿ.ನಾಯ್ಕ ತಿಳಿಸಿದ್ದಾರೆ. ಪಂಚಾಯತದವರಿಗೆ ಹೇಳಿದರೆ ಅದು ಲೋಕೋಪಯೋಗಿ ಇಲಾಖೆಗೆ ಬರುತ್ತದೆ ಎಂದು ತಮ್ಮ ಹೊರೆಯನ್ನು ಅವರ ಮೇಲೆ ಹಾಕಿಬಿಡುತ್ತಾರೆ.

ಆದರೆ ಇಲ್ಲಿ ಯಾವುದೇ ಕೆಲಸವನ್ನು ಗಂಭೀರವಾಗಿ ಮಾಡುವುದಿಲ್ಲ. ನೀರಿನ ಪೈಪ್‌ಲೈನ್ ಒಡೆದುಹೋದ ನಂತರ ಅನೇಕಬಾರಿ ಗ್ರಾ.ಪಂ.ನವರಿಗೆ ಮಾಹಿತಿ ನೀಡಿದರೂ ಇದುವರೆಗೂ ಬಂದು ಸರಿಪಡಿಸಿಲ್ಲ. ಮುಂದೆ ಅನಾಹುತ ಉಂಟಾದಲ್ಲಿ ಅದಕ್ಕೆ ಗ್ರಾಮ ಪಂಚಾಯತಿಯವರೇ ಕಾರಣವಾಗಲಿದ್ದಾರೆ ಎಂದು ಓ.ಟಿ. ನಾಯ್ಕ ಮಾಹಿತಿ ನೀಡಿದ್ದಾರೆ.

# ಮಾದಕ ವ್ಯಸನಗಳ ಸೇವನೆ ಬೇಡ BRO ವಿದ್ಯಾರ್ಥಿಗಳಿಗೆ ಸಲಹೆ ನೀಡಿದ ; SP ಜಾಹ್ನವಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಮಾದಕ ವ್ಯಸನಗಳ ಸೇವನೆಯಿಂದ ದೂರ ಇರುವುದರಿಂದ ಜೀವನ ಸುಂದರವಾಗಿರುತ್ತದೆ ಬೇಡ ಃಖಔ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಅವರು ಬುಧವಾರ ನಗರದ ವಿಜಯನಗರ ಮಹಾವಿದ್ಯಾಲಯ ಹೊಸಪೇಟೆ ಕಾಲೇಜಿನಲ್ಲಿ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ-ಯ ಕಾರ್ಯಕ್ರಮ ಕುರಿತು ಮಾತನಾಡಿದರು.

ಮಾದಕ ವಸ್ತುಗಳ ಸೇವನೆಯಿಂದ ಏನೆಲ್ಲಾ ದುಷ್ಪರಿಣಾಮ ಬೀರುತ್ತೆ ಅಂತ ಪ್ರತಿವರ್ಷ ಜಾಗೃತಿ ಮೂಡಿ ಸುತ್ತ ಬಂದಿದ್ದೇವೆ ಡ್ರಗ್ ಸೇವನೆಯಿಂದ ದೂರ ಇರುವುದರಿಂದ ಜೀವನ ಸುಂದರವಾಗಿರುತ್ತದೆ. ಡ್ರಗ್ ಸೇವನೆ ಮತ್ತು ಮಾರಾಟ ಕಂಡು ಬಂದರೆ ಡ್ರಗ್ ಫ್ರೀ ಆಪ್ ಮತ್ತು ಕೆಎಸ್‌ಪಿ ಡೌನ್ಲೋಡ್ ಮಾಡಿ ಕಂಪ್ಲೇಂಟ್ ಕೊಡೋಕೆ ಅವಕಾಶವಿದೆ ಖುದ್ದಾಗಿ ಕೆಎಸ್‌ಪಿ ಡಯಲ್ ಮಾಡಿ ಹೆಲ್ಪ್‌ಲೈನ್ ನಂಬರ್ ಕೂಡ 1908 ಹಾಗೂ 1933 ಮತ್ತು 112 ಕರೆ ಮಾಡಿ ನಿಮ್ಮ ಸುತ್ತಮುತ್ತಲಿನ ಡ್ರಗ್ ಸೇವನೆ ಮಾರಾಟ ಕಂಡು ಬಂದರೆ ಮಾಹಿತಿ ನೀಡಿ ನಿಮ್ಮ ಹೆಸರು ಗೌಪ್ಯವಾಗಿ ಇಟ್ಟು ಅಂತವರ ವಿರುದ್ಧ ಕ್ರಮ ಜರುಗಿಸುತ್ತೇವೆ. ಬೇಡ ಬ್ರೋ ಎನ್ನುವ ಇದರ ಮೂಲ ಉದ್ದೇಶ ಇದನ್ನು ಕಂದಾಯ ಇಲಾಖೆ. ಪೊಲೀಸ್ ಇಲಾಖೆ. ಆರೋಗ್ಯ ಇಲಾಖೆ. ಡ್ರಗ್ ಇಲಾಖೆ ಎಲ್ಲರೂ ಸೇರಿ ಡ್ರಗ್ ಪಿಡುಗನ್ನು ನಿರ್ಮೂಲನೆ ಹೋರಾಟ ಮಾಡುವ ಮೂಲಕ ನಾವೆಲ್ಲರೂ ಕೈಜೋಡಿಸೋಣ ಎಂದು ಹೇಳಿದರು.

ನಂತರ ವಿಜಯನಗರ ಜಿಲ್ಲಾಧಿಕಾರಿ ಎಸ್



ಕವಿತಾ ಮನ್ನಿಕೇರಿ ಅವರು ಮಾತನಾಡಿ

ನಿಮ್ಮ ಸುತ್ತಮುತ್ತಲಿನಲ್ಲಿ ಡ್ರಗ್ ಸೇವನೆ ಕಂಡು ಬಂದರೆ ಹೆಲ್ಪ್‌ಲೈನ್ ನಂಬರ್ ಗೆ ಮಾಹಿತಿ ನೀಡಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಸಾಮಾಜಿಕ ಹೊಣೆ ಆಗಿರುತ್ತದೆ. ಮಾದಕ ವಸ್ತುಗಳ ಸೇವನೆಯಿಂದ ಏನೆಲ್ಲಾ ದುಷ್ಪರಿಣಾಮ ಹೇಗೆ ಪ್ರಭಾವ ಬೀರುತ್ತೆ ಎಂದು ಕಿರು ಚಿತ್ರದ ಮೂಲಕ ಅದ್ಭುತವಾಗಿ ತೋರಿಸಿದ್ದಾರೆ ನೀವೆಲ್ಲಾ ಉತ್ತಮ ಪ್ರಜೆಯಾಗುತ್ತೀರಿ ಅಂತ ನಾನು ಭಾವಿಸುತ್ತೇನೆ ನೋ ಬ್ರೋ ಬೇಡ ಬ್ರೋ ಎಂದು ಹೇಳುವ ಘೋಷವಾಕ್ಯ ಮೂಲಕ ಹೇಳಿದರು. ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾಧಿಕಾರಿ ಎಸ್.ಕವಿತಾ ಮನ್ನಿಕೇರಿ. ಎಸ್ ಪಿ.ಜಾಹ್ನವಿ ಅಡಿಷನಲ್ ಎಸ್ ಪಿ ಮಂಜುನಾಥ್. ಡಿ ವೈ ಎಸ್ ಪಿ ಮುರುಳಿಧರ್.ಮೆಟ್ರಿಮಲ್ಲಿಕಾರ್ಜುನ್.ವಿವಿ ಸದಸ್ಯ ಗುಗ್ಗ ಚನ್ನಬಸಪ್ಪ.ಡಾ. ಮನೋವೈದ್ಯ ಕಾವ್ಯ. ಡ್ರಗ್ ಇಲಾಖೆ ಅಧಿಕಾರಿ ವಿಜಯನಗರ ಪ್ರಾಂಶುಪಾಲರಾದ ಪ್ರಭು ಗೌಡ. ಶಿಕ್ಷಕರು ಸಿಬ್ಬಂದಿಗಳು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬಳ್ಳಾರಿ ಗ್ರಾಮೀಣ ಮತ್ತು ನಗರ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಎಸ್‌ಐಆರ್ ನಮೂನೆ ವಿತರಣೆಯಲ್ಲಿ ಶೇ.100 ರಷ್ಟು ಪ್ರಗತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, 93-ಬಳ್ಳಾರಿ ಗ್ರಾಮೀಣ ಮತ್ತು 94-ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಮನೆ-ಮನೆಭೇಟಿ ನೀಡಿ ವಿತರಿಸುವ ಗಣತಿ ನಮೂನೆ ಕಾರ್ಯವು ಶೇ.100 ರಷ್ಟು ಪ್ರಗತಿ ಸಾಧಿಸಲಾಗಿದೆ. ಕ್ಷೇತ್ರವಾರು ವಿತರಣೆ ವಿವರ:*93-ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರ:*ಈ ಕ್ಷೇತ್ರದಲ್ಲಿ ಒಟ್ಟು 2,51,325 ಮತದಾರರಿದ್ದು, ಇವರಿಗಾಗಿ ಒಟ್ಟು 236 ಮತಗಟ್ಟೆಗಳಿದ್ದು, ಒಟ್ಟು ಶೇ. 97.21 ರಷ್ಟು ಮತದಾರರ ಮ್ಯಾಪಿಂಗ್ ಪ್ರಕ್ರಿಯೆ ಈಗಾಗಲೇ ಯಶಸ್ವಿಯಾಗಿ ಪೂರ್ಣಗೊಂಡಿದೆ. ವಿತರಿಸಲಾದ 2,51,325 ಗಣತಿ ನಮೂನೆಗಳ ಪೈಕಿ 1,29,589 ನಮೂನೆಗಳು (ಶೇ. 51.56) ಗಣಕೀಕರಣಗೊಂಡಿವೆ. ಜೊತೆಗೆ 393 ನಮೂನೆಗಳು ಆನ್‌ಲೈನ್ ಮೂಲಕ ಸ್ವೀಕೃತವಾಗಿವೆ. ಒಟ್ಟು 7,154 ಮತದಾರರನ್ನು ವಿವಿಧ ವರ್ಗಗಳಡಿ ಗುರುತಿಸಲಾಗಿದೆ. ಇದರಲ್ಲಿ 3,047 ಮರಣ ಹೊಂದಿದ ಮತದಾರರು, 3,314 ಶಾಶ್ವತ ವಲಸೆ ಹೊಂದಿರುವವರು, 712 ಪುನರಾವರ್ತಿತ ಮತದಾರರು, 62 ಗೈರು ಹಾಜರಿ ಮತ್ತು 19 ಇತರೆ ಪ್ರಕರಣಗಳಿವೆ.*94-ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ:*ಈ ಕ್ಷೇತ್ರದಲ್ಲಿ ಒಟ್ಟು 2,79,144 ಮತದಾರರಿದ್ದು, 261 ಮತಗಟ್ಟೆಗಳನ್ನು ಒಳಗೊಂಡಿದೆ. ಶೇ. 98.01 ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ. ವಿತರಿಸಲಾದ 2,79,144 ಗಣತಿ ನಮೂನೆಗಳ ಪೈಕಿ 1,10,297 ನಮೂನೆಗಳು (ಶೇ. 39.51) ಗಣಕೀಕರಣಗೊಂಡಿವೆ. ಆನ್‌ಲೈನ್ ಮೂಲಕ 962 (ಶೇ. 0.34) ನಮೂನೆಗಳು ಸ್ವೀಕೃತವಾಗಿವೆ. ಒಟ್ಟು 3,932 ಮತದಾರರನ್ನು ವಿವಿಧ ವರ್ಗಗಳಡಿ ಗುರುತಿಸಲಾಗಿದ್ದು, ಇದರಲ್ಲಿ 2,198 ಮರಣ ಹೊಂದಿದ ಮತದಾರರು, 1,329 ಶಾಶ್ವತ ವಲಸೆ ಹೊಂದಿರುವವರು, 343 ಈಗಾಗಲೇ ನೋಂದಾಯಿತರಾಗಿರುವವರು, 32 ಗೈರು ಹಾಜರಿ ಇರುವವರು, 30 ಇತರೆ ಪ್ರಕರಣಗಳು ಒಳಗೊಂಡಿವೆ. ಎಸ್‌ಐಆರ್ ಅಂಗವಾಗಿ ಮನೆ ಮನೆಗೆ ವಿತರಿಸಲಾಗಿರುವ ಪ್ರಿ-ಪ್ರಿಂಟೆಡ್ ಭಾವಚಿತ್ರ ಹೊಂದಿರುವ 'ಗಣತಿ ನಮೂನೆ' ಅನ್ನು ಭರ್ತಿ ಮಾಡಿ ನಿಗದಿತ ಅವಧಿಯೊಳಗೆ ತಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದು 93-ಬಳ್ಳಾರಿ ಗ್ರಾಮೀಣ ಮತದಾರರ ನೋಂದಣಾಧಿಕಾರಿಯೂ ಆದ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಮತ್ತು 94- ಬಳ್ಳಾರಿ ನಗರ ಮತದಾರರ ನೋಂದಣಾಧಿಕಾರಿ ಆಗಿರುವ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# 21 ರಿಂದ ರೈತರಿಗೆ ವೈಜ್ಞಾನಿಕ ಕೋಳಿ ಸಾಕಾಣಿಕೆ ತರಬೇತಿ

ಕಲಬುರಗಿ,ಜು.17-ಕಲಬುರಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ 2026ರ ಜುಲೈ 21 ಹಾಗೂ 22 ರಂದು ಎರಡು ದಿನಗಳ ವೈಜ್ಞಾನಿಕ ಕೋಳಿ ಸಾಕಾಣಿಕೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರದ ಉಪನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯ ರೈತರು ತರಬೇತಿಗೆ ಬರುವಾಗ ತಮ್ಮ ಆಧಾರ್ ಕಾರ್ಡ ನಕಲು ಪ್ರತಿ, ಎರಡು ಪಾಸ್‌ಪೋರ್ಟ್ ಸೈಜಿನ ಕಲರ ಫೋಟೋ ಹಾಗೂ ಜಾತಿ ಪ್ರಮಾಣಪತ್ರದ ನಕಲು ಪ್ರತಿ (ಎಸ್.ಸಿ. ಮತ್ತು ಎಸ್.ಟಿ.) ದಾಖಲೆಗಳನ್ನು ತರಬೇಕೆಂದು ಅವರು ತಿಳಿಸಿದ್ದಾರೆ.

# ನಿರಂತರವಾಗಿ ಸುರಿದ ಮಳೆ : ತಗ್ಗು ಪ್ರದೇಶದಲ್ಲಿ ನೀರು

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ತಾಲೂಕಿನಲ್ಲಿ ಗುರುವಾರದಿಂದ ಆರಂಭಗೊಂಡ ಮಳೆಯು ನಿರಂತರವಾಗಿ ಸುರಿಯುತ್ತಿದ್ದು, ಇದರಿಂದಾಗಿ ಕೆರೆ ಕಟ್ಟೆಗಳು, ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿವೆ. ಕೃಷಿಕರು ಇದರಿಂದ ಹರ್ಷರಾಗಿದ್ದು, ತಮ್ಮ ನಾಟಿಕಾರ್ಯವನ್ನು ಬರದಿಂದ ನಡೆಸುತ್ತಿದ್ದಾರೆ. ಹಾಗೂ ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿದ್ದು ಒಂದಿಷ್ಟು



ಸಮಸ್ಯೆಗಳು ಎದುರಾಗಿವೆ.

ಅಡಕೆ ತೋಟಗಳಲ್ಲಿ ನೀರು ನಿಂತಿದ್ದರಿಂದಾಗಿ ಸಹಜವಾಗಿಯೇ ಬೆಳೆಗಾರರು ಆತಂಕಗೊಂಡಿದ್ದಾರೆ. ಇನ್ನು ಪೂಜಗೇರಿ ಹಳ್ಳ ತುಂಬಿ ಹರಿಯುತ್ತಿದ್ದು, ಮಳೆ ಹೀಗೆ ಮುಂದುವರೆದರೆ ಕೃಷಿ ಭೂಮಿಗೆ ನೀರು ನುಗ್ಗುವ ಅಪಾಯವಿದೆ. ಕೆಲವು ತಗ್ಗು ಪ್ರದೇಶಗಳಲ್ಲಿ ನೀರು ನಿಂತಿದ್ದರಿಂದಾಗಿ ಸಂಚಾರಕ್ಕೆ ಅಡೆತಡೆ ಉಂಟಾಗಿದೆ. ಆದರೆ ಯಾವುದೇ ತರಹದ ತೀವ್ರ ಹಾನಿ ಉಂಟಾಗಿಲ್ಲ ಎಂದು ತಾಲೂಕು ಆಡಳಿತದವರು ತಿಳಿಸಿದ್ದಾರೆ.

# ಎಸ್.ಆರ್. ಪಾಟೀಲರಿಗೆ ಎಂಎಲ್‌ಸಿ ಸ್ಥಾನ ನೀಡಲು ಆಗ್ರಹ



**ಬೀಳಗಿ:** ತೆರವಾಗಲಿರುವ ವಿಧಾನ ಪರಿಷತ್ (ಎಂಎಲ್‌ಸಿ) ಸ್ಥಾನಗಳಲ್ಲಿ ಒಂದನ್ನು ಮಾಜಿ ಸಚಿವ ಎಸ್.ಆರ್. ಪಾಟೀಲ ಅವರಿಗೆ ನೀಡುವ ಮೂಲಕ ಅವರ ಸುದೀರ್ಘ ಸಾರ್ವಜನಿಕ ಸೇವೆಗೆ ಕಾಂಗ್ರೆಸ್ ಪಕ್ಷ ಸೂಕ್ತ ಗೌರವ ಸಲ್ಲಿಸಬೇಕು ಎಂದು ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಉಪಾಧ್ಯಕ್ಷ ದಾದಾಪೀರ ಹಾಸಿಂಪೀರ ಮುಜಾವರ ಆಗ್ರಹಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್.ಆರ್. ಪಾಟೀಲ ಜನಸಾಮಾನ್ಯರ ಕಷ್ಟ–ಸುಖಗಳಿಗೆ ಸದಾ ಸ್ಪಂದಿಸುವ ಅಪರೂಪದ ಜನನಾಯಕರು. ಅನೇಕ ರಾಜಕಾರಣಿಗಳು ಹಾಗೂ ಉದ್ಯಮಿಗಳು ತಮ್ಮ ಹೂಡಿಕೆಗಳನ್ನು ದೊಡ್ಡ ನಗರಗಳಾದ ಬೆಂಗಳೂರು, ಹುಬ್ಬಳ್ಳಿ ಸೇರಿದಂತೆ ವಿವಿಧೆಡೆ ಕೇಂದ್ರೀಕರಿಸಿದರೆ, ಎಸ್.ಆರ್.ಪಾಟೀಲ 'ಜನನಿ ಜನ್ಮಭೂಮಿಶ್ಚ ಸ್ವರ್ಗಾದಪಿ ಗರೀಯಸಿ' ಎಂಬ ಆದರ್ಶವನ್ನು ಜೀವನದಲ್ಲಿ ಅಳವಡಿಸಿಕೊಂಡು ತಮ್ಮ ಹುಟ್ಟೂರು ಹಾಗೂ ತಾಲೂಕಿನ ಅಭಿವೃದ್ಧಿಗೆ ಆದ್ಯತೆ ನೀಡಿದ್ದಾರೆ ಎಂದು ಹೇಳಿದರು.

ದೂರದೃಷ್ಟಿ ಮತ್ತು ಅಭಿವೃದ್ಧಿಪರ ಚಿಂತನೆಯ ಮೂಲಕ ಸಾವಿರಾರು ಜನರಿಗೆ ಉದ್ಯೋಗ ಕಲ್ಪಿಸಿ, ಸ್ಥಳೀಯ ಆರ್ಥಿಕ ಬೆಳವಣಿಗೆಗೆ ಹೊಸ ದಿಕ್ಕು ನೀಡಿದ ನಾಯಕ ಎಸ್.ಆರ್.ಪಾಟೀಲರು

ಕಾಂಗ್ರೆಸ್ ಪಕ್ಷದಲ್ಲಿ ವಿರೋಧ ಪಕ್ಷದ ನಾಯಕ, ಸಚಿವ ಸೇರಿದಂತೆ ವಿವಿಧ ಹುದ್ದೆಗಳನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿ, ಜನಪರ ಆಡಳಿತ ಮತ್ತು ಅಭಿವೃದ್ಧಿಗೆ ಶ್ರಮಿಸಿದ ಅನುಭವಿ ರಾಜಕಾರಣಿಯಾಗಿದ್ದಾರೆ. ರಾಜ್ಯ ರಾಜಕಾರಣದಲ್ಲಿ ವಿಶಿಷ್ಟ ಸ್ಥಾನ ಹೊಂದಿದ್ದಾರೆ. ಇಂತಹ ಹಿರಿಯ ಹಾಗೂ ಜನಾನುರಾಗಿ ನಾಯಕರ ಸೇವೆಯನ್ನು ಮುಂದುವರಿಸಲು ಅವರಿಗೆ ವಿಧಾನ ಪರಿಷತ್ ಸದಸ್ಯತ್ವ ನೀಡುವುದು ನ್ಯಾಯಸಮ್ಮತವಾಗಿದ್ದು, ಪಕ್ಷವು ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು. ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಪರವಾಗಿ ಎಸ್.ಆರ್. ಪಾಟೀಲ ಅವರಿಗೆ ಎಂಎಲ್‌ಸಿ ಸ್ಥಾನ ನೀಡುವಂತೆ ಪಕ್ಷದ ವರಿಷ್ಠರಿಗೆ ಮನವಿ ಸಲ್ಲಿಸಲಾಗುವುದು ಎಂದು ದಾದಾಪೀರ ಹಾಸಿಂಪೀರ ಮುಜಾವರ ತಿಳಿಸಿದರು.



**ಹುಣಸೂರು: ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಹುಣಸೂರು, ಮೈಸೂರು ಜಿಲ್ಲೆ. ಇಲ್ಲಿನ ಎನ್‌ಎಸ್‌ಎಸ್ ಘಟಕದ ವತಿಯಿಂದ ಈದಿನ ವಿಶೇಷ ಸಮಗ್ರ ಮತದಾರ ಪಟ್ಟಿ ಪರಿಷ್ಕರಣೆ (SIR) ಅಂಗವಾಗಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಜಾಥಾ ಅಂಗವಾಗಿ ಎನ್‌ಎಸ್‌ಎಸ್ ಸ್ವಯಂ ಸೇವಕಿಯರು ಹಾಗೂ ವಿದ್ಯಾರ್ಥಿಗಳು ಹುಣಸೂರು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ವಿವಿಧ ಘೋಷಣೆಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಹಾಗೂ ವಿದ್ಯಾರ್ಥಿಗಳು ನನ್ನ ಮತ, ನನ್ನ ಹಕ್ಕು, SIR ನಲ್ಲಿ ಹೊಸ ಭಾವಚಿತ್ರ ಬದಲಾಯಿಸಬಹುದು, SIR ನನ್ನ ಹಕ್ಕು, SIR ಅಂತರ್ಜಾಲದ ಮೂಲಕವೂ ದಾಖಲಿಸಬಹುದು, ಸಹಕಾರಕ್ಕಾಗಿ BLO ಸಂಪರ್ಕಿಸಿ, ಅನಕ್ಷರಸ್ಥರಿಗೆ ಸಹಾಯ ಮಾಡಿ, ಹೀಗೆ ಮೊದಲಾದ ಘೋಷಣೆಗಳನ್ನು ಕೂಗಿ ಅರಿವು ಮೂಡಿಸಿದರು. ಈ ಜಾಥಾ ಕಾರ್ಯಕ್ರಮದಲ್ಲಿ ಪ್ರಭಾರ ಪ್ರಾಂಶುಪಾಲರಾದ ಶ್ರೀ ನಟರಾಜು. ಕೆ.ಎಸ್, ಶ್ರೀ ದೇವರಾಜು.ಸಿ, ಶ್ರೀ ಜಗದೀಶ. ಶ್ರೀ ಸರ್ವೋತ್ತಮ್, ಡಿ. ಟಿ, ಶ್ರೀ ಗಿರೀಶ್. ಹೆಚ್.ಎನ್, ಶ್ರೀ ಚಂದ್ರಕಾಂತ್, ಶ್ರೀಮತಿ ತೇಜಸ್ವಿನಿ, ಶ್ರೀಮತಿ ಕೆ. ಆರ್. ಶೀಲಾ, ಶ್ರೀ ಸುರೇಶ್, ಶಶಿಕುಮಾರ್, ಕೀರ್ತಿಕುಮಾರ್, ಕುಮಾರಿ ಸಲ್ಮಾ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಜಾಥಾವನ್ನು ಯಶಸ್ವಿಗೊಳಿಸಿದರು.**

# ಬೇಜವಾಬ್ದಾರಿಯಿಂದ ಕೆಲಸ ಮಾಡುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**





ಈ ಹಿಂದೆ ಮಾಡಿದ ತಪ್ಪುಗಳನ್ನು ತಿದ್ದುಕೊಂಡು, ಜವಾಬ್ದಾರಿ ಅರಿತು ಒಂದು ತಿಂಗಳಲ್ಲಿ ಸಮರ್ಪಕವಾಗಿ ಕೆಲಸ ಮಾಡದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗ ಅಧ್ಯಕ್ಷ ಡಾ. ಹೆಚ್ ಕೃಷ್ಣ ಎಚ್ಚರಿಕೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೆ.ಎಫ್.ಸಿ.ಎಸ್.ಸಿ (ಏಈಅಖಅ) ಸಗಟು ಮಳಿಗೆಗೆ ಭೇಟಿ ನೀಡಿದಾಗ ನಿಯಮಾನುಸಾರ ವಿತರಿಸಬೇಕಾದ ಅಕ್ಕಿಯನ್ನು ಹಂಚದೆ, ಸುಮಾರು 565 ಕ್ವಿಂಟಲ್‌ನಷ್ಟು ಹೆಚ್ಚುವರಿ ಅಕ್ಕಿ ದಾಸ್ತಾನನ್ನು ವಿತರಿಸದೆ ಉಳಿಸಿಕೊಂಡಿದ್ದು ಕಂಡುಬಂದಿದೆ. ಇನ್ನು ಜೋಳದ ದಾಸ್ತಾನು ಪರೀಕ್ಷಿಸಿದಾಗ ಕಡತದಲ್ಲಿರುವುದಕ್ಕಿಂತ 30 ಕ್ವಿಂಟಲ್ ಕಡಿಮೆ ಇರುವುದು ಕಂಡುಬಂದಿದೆ. ಈ ಕೊರತೆಯನ್ನು ದಾಖಲೆ ಸಮೇತ ದೃಢವಾಗಿದೆ. ನ್ಯಾಯಬೆಲೆ ಮಳಿಗೆಗಳನ್ನು ಪರಿಶೀಲಿಸಿದ್ದಾಗ ಅಲ್ಲಿಯೂ ಸಾಕಷ್ಟು ಅವ್ಯವಸ್ಥೆ ಕಂಡುಬಂದಿದೆ ತಕ್ಷಣವೇ ಈ ಲೋಪದೋಷಗಳನ್ನು ಸರಿಪಡಿಸಿಕೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ನೌಬಾದ ಮತ್ತು ಕರಡಿಮಾಲ್ ನಲ್ಲಿರುವ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳಿಗೆ ಹಾಗೂ ನೌಬಾದನ ಶಾಲೆಯೊಂದಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಆಹಾರ, ಮೊಟ್ಟೆ ಹಾಗೂ ಬಾಳೆ ಹಣ್ಣು ವಿತರಣೆ ಮಾಡದಿರುವುದು ಕಂಡುಬಂದಿದೆ ಅಧಿಕಾರಿಗಳ ಈ ವರ್ತನೆ ಸರಿಯಲ್ಲ. ಅದೇ ರೀತಿ ನಗರದ ವಿವಿಧ ಪೆಟ್ರೋಲ್ ಪಂಪ್ ಗಳಿಗೆ ಭೇಟಿ ನೀಡಿದ ಸಮಯದಲ್ಲಿ ಮೂಲಭೂತ ಸೌಕರ್ಯ ಇಲ್ಲದಿರುವುದು ಗಮನಕ್ಕೆ ಬಂದಿದೆ. ಬ್ರಿಮ್ಸ್ ಆಸ್ಪತ್ರೆಯಲ್ಲೂ ಸಹ ಸಾಕಷ್ಟು ಸಮಸ್ಯೆ ಕಂಡುಬಂದಿವೆ. ಅಧಿಕಾರಿಗಳು ಮುಂದಿನ ದಿನಗಳಲ್ಲಿ ತಮ್ಮ ಜವಾಬ್ದಾರಿ ಅರಿತು ಕೆಲಸ ಮಾಡಬೇಕು ಹಾಗೂ ಪೆಟ್ರೋಲ್ ಪಂಪ್ ಗಳಿಗೆ ಭೇಟಿ ನೀಡಿ ಪಂಪ್ ಮಾಲೀಕರಿಗೆ ಆಗಮಿಸುವ ಗ್ರಾಹಕರಿಗೆ ಮೂಲಭೂತ ಸೌಕರ್ಯ ಒದಗಿಸುವಂತೆ ನೋಡಿಕೊಳ್ಳಬೇಕೆಂದು ಅಧಿಕಾರಿಗಳು ಸೂಚನೆ ನೀಡಬೇಕೆಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಆಹಾರ ಆಯೋಗದ ಸದಸ್ಯರಾದ ಕೆ.ಎಸ್. ವಿಜಯಲಕ್ಷ್ಮಿ, ಮಾರುತಿ ದೊಡ್ಡಲಿಂಗಣ್ಣವರ, ಲಿಂಗರಾಜ ಕೋಟೆ, ಸುಮಂತ ರಾವ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿವಿವಿಎಸ್ ಸಂಗೀತ ಕಾಲೇಜಿಗೆ ವಿವಿ ಸಮಿತಿ ಭೇಟಿ

- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ನೂತನವಾಗಿ ಆರಂಭಗೊಂಡಿರುವ ಬಿವಿವಿ ಸಂಘದ ಸಂಗೀತ ಮತ್ತು ಪ್ರದರ್ಶಕ ಕಲೆಗಳ ಮಹಾವಿದ್ಯಾಲಯಕ್ಕೆ ವಿವಿಧ ಕೋರ್ಸುಗಳಿಗೆ ಅನುಮೋದನೆ ನೀಡುವ ಸಂಬಂಧ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಪರಿಶೀಲನಾ ಸಮಿತಿ ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಸಮಿತಿಯ ಸದಸ್ಯರು ಪಂ. ಪುಟ್ಟರಾಜ ಗವಾಯಿ ಹಾಗೂ ಹಾನಗಲ್ ಕುಮಾರೇಶ್ವರ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಬಳಿಕ ಮಹಾವಿದ್ಯಾಲಯದ ಮೂಲಸೌಕರ್ಯ, ಗಾಯನ, ತಬಲಾ, ಸಿತಾರ್ ಹಾಗೂ ಭರತನಾಟ್ಯ ವಿಭಾಗಗಳ ತರಗತಿ ಕೊಠಡಿಗಳು, ಸಂಗೀತ ಮತ್ತು ಪ್ರದರ್ಶಕ ಕಲೆಗಳಿಗೆ ಅಗತ್ಯವಿರುವ ಸೌಲಭ್ಯಗಳು, ಗ್ರಂಥಾಲಯ, ಆಡಳಿತ ವ್ಯವಸ್ಥೆ ಸೇರಿದಂತೆ ವಿವಿಧ ಶೈಕ್ಷಣಿಕ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ವಿವಿಧ ಕೋರ್ಸುಗಳನ್ನು ಆರಂಭಿಸಲು ಅಗತ್ಯವಿರುವ ಮಾನದಂಡಗಳ ಕುರಿತು ಮಾಹಿತಿ ಪಡೆದು ಸಂಬಂಧಿತ ದಾಖಲೆಗಳನ್ನು ಪರಿಶೀಲಿಸಿದ ಸಮಿತಿಯ ಸದಸ್ಯರು, ಬಸವೇಶ್ವರ ಕಲಾ ಮಹಾವಿದ್ಯಾಲಯದ ಹಿಂದುಸ್ಥಾನಿ ಸಂಗೀತ ವಿಭಾಗದಿಂದ ಆಯೋಜಿಸಲಾಗಿದ್ದ ವಿವಿಧ ಸಂಗೀತ ಕಾರ್ಯಕ್ರಮಗಳು ಹಾಗೂ ಸಾಧನೆಗಳ ದಾಖಲಾತಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅನುಮೋದನಾ ಸಮಿತಿಯ ಸದಸ್ಯರುಗಳಾದ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ರಾಮಕೃಷ್ಣಯ್ಯ, ತಜ್ಞರಾದ ಡಾ.ಸುಮಿತ್ರಾ ಹಿರೇಮಠ ಅವರನ್ನು ಬಿ.ವಿ.ವಿ.ಸಂಘದಿಂದ ಸನ್ಮಾನಿಸಲಾಯಿತು.

ಬಿವಿವಿ ಸಂಘದ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ, ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಸಂಘದ ಆಡಳಿತ ಸಲಹೆಗಾರ್ತಿ ಡಾ. ಮೀನಾ ಚಂದಾವರಕರ, ಆಡಳಿತಾಧಿಕಾರಿಗಳಾದ ವಿ.ಆರ್. ಶಿರೋಳ ಹಾಗೂ ಡಾ. ವಿ.ಎಸ್. ಕಟಗಿಹಳ್ಳಿಮಠ, ಪದನಿಮಿತ್ಯ ಕಾರ್ಯದರ್ಶಿ ಡಾ.ಎಸ್.ಎಂ.ಗಾಂವ್ಕರ್, ಪ್ರಾಚಾರ್ಯರಾದ ಎಸ್.ಆರ್. ಮೂಗನೂರಮಠ ಮತ್ತು ಜಗನ್ನಾಥ್ ಚವ್ಹಾಣ, ಸಂಗೀತ ಮತ್ತು ಪ್ರದರ್ಶಕ ಕಲೆಗಳ ಮಹಾವಿದ್ಯಾಲಯದ ನಿರ್ದೇಶಕ ಡಾ.

ಆರ್.ಎಂ.ಬೆಣ್ಣೂರ, ಸಂಗೀತ ವಿಭಾಗದ ಮುಖ್ಯಸ್ಥ ಡಾ. ಕೆ.ವಿ. ಮಠ, ವಿಶ್ರಾಂತ ಪ್ರಾಚಾರ್ಯ ಸಿದ್ದರಾಮಯ್ಯ ಮಠಪತಿ ಸೇರಿದಂತೆ ಹಲವರು ಇದ್ದರು.

# ವೈಭವದ ಬುಟ್ಟಿ ಜಾತ್ರೆ: ಸಮೃದ್ಧ ಬೆಳೆಗಾಗಿ ವಿಶೇಷ ಕುಂಭ ಕಳಸೋತ್ಸವ

- **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**



ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಶುಕ್ರವಾರ ಸಾಂಪ್ರದಾಯಿಕ 'ಬುಟ್ಟಿ ಜಾತ್ರೆ' ಹಾಗೂ ಭವ್ಯ ಕುಂಭ ಕಳಸೋತ್ಸವ ಕಾರ್ಯಕ್ರಮವು ಅತ್ಯಂತ ಶ್ರದ್ಧಾ–ಭಕ್ತಿಯಿಂದ ಜರುಗಿತು.

ಈ ಧಾರ್ಮಿಕ ಮಹೋತ್ಸವದ ನೇತೃತ್ವವನ್ನು ಶಿವಕುಮಾರ ರಾಂಪುರೆ ಅವರು ವಹಿಸಿ, ಚಾಲನೆ ನೀಡಿದರು. ರೈತರು ಬೆಳೆದ ಬೆಳೆಗೆ ಉತ್ತಮ ಮಳೆ ಬಂದು, ನಾಡು ಸುಭಿಕ್ಷವಾಗಿರಲಿ ಮತ್ತು ಸಮೃದ್ಧ ಬೆಳೆಯಾಗಲಿ ಎಂದು ಈ ಸಂದರ್ಭದಲ್ಲಿ ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

**ದೇವಸ್ಥಾನಗಳ ಸ್ವಚ್ಛತೆ ಹಾಗೂ ತಳಿರು ತೋರಣ ಅಲಂಕಾರ:** ಹಬ್ಬದ ಪ್ರಯುಕ್ತ ಮುಂಜಾನೆ 7 ಗಂಟೆಯಿಂದಲೇ ಸಡಗರದ ವಾತಾವರಣ ನಿರ್ಮಾಣವಾಗಿತ್ತು. ಗ್ರಾಮದ ಯುವಕರು ಹೆಚ್ಚಿನ ಉತ್ಸಾಹದಿಂದ ಪಾಲ್ಗೊಂಡು ಶ್ರೀ ಮಡಿವಾಳೇಶ್ವರ ದೇವಾಲಯ, ಶ್ರೀ ಹನುಮಾನ್ ದೇವಾಲಯ ಹಾಗೂ ಬಸವಣ್ಣ (ಕಟ್ಟೆ) ಮಂದಿರಗಳನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ, ಹಸಿರು ತಳಿರು ತೋರಣಗಳನ್ನು ಕಟ್ಟಿ ಧಾರ್ಮಿಕ ವಿಧಿವಿಧಾನಗಳಿಗೆ ಸಜ್ಜುಗೊಳಿಸಿದರು.

**ಮಂಗಳ ವಾದ್ಯಗಳೊಂದಿಗೆ ಭವ್ಯ ಕುಂಭ ಕಳಸದ ಮೆರವಣಿಗೆ:** ಶ್ರೀ ಮಡಿವಾಳೇಶ್ವರ ದೇವಾಲಯದಿಂದ ಆರಂಭವಾದ ಕುಂಭ ಕಳಸ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ತಲೆಯ ಮೇಲೆ ಕಳಸ ಹೊತ್ತ ನೂರಾರು ಸುಮಂಗಲೆಯರು, ಭಜನಾ ಮಂಡಳಿಯ ಭಜನೆ ಹಾಗೂ ಸಾಂಪ್ರದಾಯಿಕ ಮಂಗಳ ವಾದ್ಯಗಳ (ಭಾಜ ಭಜಂತ್ರಿ) ನಾದಕ್ಕೆ ಹೆಜ್ಜೆ ಹಾಕಿದರು.

ಮೆರವಣಿಗೆಯು ಗ್ರಾಮದ ಪ್ರಮುಖ ದೇವಸ್ಥಾನಗಳಾದ ಹನುಮಾನ್ ಮಂದಿರ, ಲಕ್ಷ್ಮಿ ಮಂದಿರ, ಭಾಗ್ಯವಂತಿ ಮಂದಿರ, ಬಸವಣ್ಣ ಮಂದಿರ, ಸಿದ್ದೇಶ್ವರ ಮಂದಿರ, ರೋಕಡೆ ಹನುಮಾನ್ ಮಂದಿರ, ರಾಂಪುರ ಹನುಮಾನ್ ಮಂದಿರ ಹಾಗೂ ಮಡಿವಾಳಪ್ಪ ಮಂದಿರಗಳಿಗೆ ಭೇಟಿ ನೀಡಿ, ನೀರು ಹಾಕುವ ವಿಶೇಷ ಪೂಜಾ ಕಾರ್ಯಕ್ರಮವನ್ನು ನೆರವೇರಿಸಿತು.

**ಸಾಂಪ್ರದಾಯಿಕ ಬುಟ್ಟಿ ಜಾತ್ರೆ ಹಾಗೂ ಮಹಾ ಅನ್ನದಾಸೋಹ:** ಮೆರವಣಿಗೆಯ ನಂತರ ಮುಖ್ಯ ದೇವಾಲಯದಲ್ಲಿ ಸಾಂಪ್ರದಾಯಿಕ 'ಬುಟ್ಟಿ ಜಾತ್ರೆ'ಯ ಅಂಗವಾಗಿ ಭಕ್ತರು ಪರಸ್ಪರ ಪ್ರಸಾದ ವಿನಿಮಯ ಮಾಡಿಕೊಂಡರು. ದೇವಾಲಯದ ಟ್ರಸ್ಟ್ ವತಿಯಿಂದ ಆಗಮಿಸಿದ್ದ ಸಹಸ್ರಾರು ಭಕ್ತಾದಿಗಳಿಗೆ ಸುಪ್ರಸಿದ್ಧ 'ಆಮಲಿ ಪ್ರಸಾದ' ಹಾಗೂ ಅನ್ನದಾಸೋಹದ ಸೇವೆ ಒದಗಿಸಲಾಯಿತು.

ಈ ಧಾರ್ಮಿಕ ಹಾಗೂ ಪಾರಂಪರಿಕ ಹಬ್ಬದಲ್ಲಿ ಗ್ರಾಮದ ಸಮಸ್ತ ಹಿರಿಯರು, ಯುವಕರು, ಮಹಿಳೆಯರು, ಅಕ್ಕನ ಬಳಗ ಹಾಗೂ ಅಣ್ಣನ ಬಳಗದ ಸದಸ್ಯರು ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರಮವನ್ನು ಸಂಪೂರ್ಣ ಯಶಸ್ವಿಗೊಳಿಸಿದರು.

# ನಿಂಬೆ ನಾಡು ಸಮಸ್ಯೆಗಳ ಗೂಡು

- **ವರದಿ: ಪವನ ನಾ ಕೊಡಹೊನ್ನ**








ಇಂಡಿಯ ನಿಂಬೆ ರಾಜ್ಯದಲ್ಲಿಯೇ ಪ್ರಸಿದ್ಧ ಬೆಳೆ. ರಾಜ್ಯದ ಶೇ 60 ರಷ್ಟು ನಿಂಬೆ ಇಂಡಿಯಲ್ಲಿಯೇ ಬೆಳೆಯುತ್ತಾರೆ. ಇಲ್ಲಿಯ ನಿಂಬೆ ದೆಹಲಿ, ಕಲಕತ್ತಾ, ಬೆಂಗಳೂರ, ಮುಂಬಯಿ, ಹೈದ್ರಾಬಾದ, ಸೇರಿದಂತೆ ಇನ್ನಿತರ ಪ್ರದೇಶಗಳಿಂದ ದಲಾಳಿಗಳು ಬಂದು ಇಲ್ಲಿಯ ನಿಂಬೆ ಖರೀದಿಸುತ್ತಾರೆ. ಮತ್ತು ಅವರು ಅದನ್ನು ಬೇರೆ ದೇಶಕ್ಕೆ ರಪ್ತು ಮಾಡುತ್ತಾರೆ, ಆದರೆ ಬೆಂಗಳೂರಿನಲ್ಲಿ ನಿಂಬೆಯ ಕುರಿತು ಕೃಷಿ ಸಂಸ್ಕರಣಾ ರಪ್ತು ಅಭಿವೃದ್ದಿ ಸಂಸ್ಥೆ ಇದೆ.( ಅಪೇಡಾ). ಅವರು ಇಲ್ಲಿಯ ರೈತರಿಗೆ ನಿಂಬೆ ಬೇರೆ ದೇಶಕ್ಕೆ ರಪ್ತು ಹೇಗೆ ಮಾಡಬೇಕುಎಂಬ ಕುರಿತು ತರಬೇತಿಗಳಾಗಲಿ, ಕುರಿತು ಸೇಮಿನಾರಗಳಾಗಲಿ, ರೈತರಿಗೆ ಮಾಹಿತಿ ನೀಡುವದಾಗಲೀ ಮಾಡಿಲ್ಲ, ಮಾಡುತ್ತಿಲ್ಲ, ಈ ಕೆಲಸ ಇಲಾಖೆಯಿಂದ ತೀವ್ರ ಆಗಬೇಕು. ರೈತರು ರೈತ ಸಂಘಟನೆಗಳು ಬೇರೆ ದೇಶಕ್ಕೆ ನಿಂಬೆ ರಪ್ತು ಮಾಡುವ ಅನುಕೂಲ ಮಾಡಿ ಕೊಡಬೇಕು.

ಇನ್ನೂ ನಿಂಬೆ ಬಹಳ ದಿವಸಗಳ ವರೆಗೆ ಇಡಲು ಕೋಲ್ಡ ಸ್ಟೋರೆಜಗಳು ಬೇಕು. ಕೋಲ್ಡ ಸ್ಟೋರೆಜಗಳ ಘಟಕಗಳ ವ್ಯವಸ್ಥೆ ಸರಕಾರ ಮತ್ತು ಇಲಾಖೆ ಮಾಡಬೇಕು. ಬೇಸಿಗೆಯಲ್ಲಿ ಫ್ರೆಬುವರಿಯಿಂದ ಜೂನ ವರೆಗೆ ನಿಂಬೆ ದರ ಚೆನ್ನಾಗಿ ಇರುತ್ತದೆ. ಆದರೆ ಜೂನದಿಂದ ಮಳೆಗಾಲ ಚಳಿಗಾಲದಲ್ಲಿ ದರ ಇರುವದಿಲ್ಲ. ಆ ಸಮಯದಲ್ಲಿ ಕೋಲ್ಡ ಸ್ಟೋರೇಜದಲ್ಲಿ ಇಟ್ಟು ಬೇಸಿಗೆಯಲ್ಲಿ ಮಾರಬಹುದು.

ಇನ್ನೂ ಕೃಷ್ಣಾ ಕಾಲುವೆ ಕಾರ್ಯ 80 ದಶಕದಲ್ಲಿ ಪ್ರಾರಂಭವಾಗಿದೆ. ಆದರೂ ತಾಲೂಕಿನ ಪ್ರತಿ ಹಳ್ಳಿಗೆ ನೀರು ಹೋಗುತ್ತಿಲ್ಲ. ಕೃಷ್ಣಾ ಮುಖ್ಯ ಕಾಲುವೆಯಿಂದ ಹಿರೇಬೇವನೂರ, ಅಗರಖೇಡ, ಭ್ಯೂಯಾರ, ಚಿಕ್ಕಮಣೂರ ಶಿರಗೂರ ಸೇರಿದಂತೆ ಅನೇಕ ಹಳ್ಳಿಗಳಿಗೆ ನೀರು ಹೋಗುವದಿಲ್ಲ. ಶಿರಶ್ಯಾಡ ಗ್ರಾಮದಿಂದ ನಾದ ಕೆಡಿ ಮತ್ತು ಮುಂದಿನ ಗ್ರಾಮಗಳಿಗೆ ಕಾಲುವೆ ನೀರು ಹೋಗುವದಿಲ್ಲ, ಕಾರಣ ಕಾಲುವೆ ಕಾರ್ಯ ಅವೈಜ್ಞಾನಿಕವಾಗಿದೆ. ಹೀಗಾಗಿ ಅಲ್ಲಿ ನೀರು ಮತ್ತು ಕೊನೆಯ ಭಾಗಕ್ಕೂ ನೀರು ಹರಿಯುವದಿಲ್ಲ. ಇನ್ನು ಗುತ್ತಿ ಬಸವಣ್ಣ, ತಿಡಗುಂದಿ ಶಾಖಾ ಕಾಲುವೆ, ಶ್ರೀ ರೇವಣಸಿದ್ದೇಶ್ವರ ಏತ ನೀರಾವರಿಯ ಕಾಲುವೆಗಳಿಂದ ಕೊನೆಯ ಭಾಗದ ವರೆಗೂ ನೀರು ಹರಿಯುತ್ತಿಲ್ಲ.

ಇನ್ನು ಭೀಮಾ ನದಿಗೆ ಮಹಾರಾಷ್ಟ ಸರಕಾರ ಉಜನಿ ಜಲಾಶಯದಿಂದ ಬೇಸಿಗೆಯಲ್ಲಿ ಐದು ಟಿ.ಎಂ.ಸಿ ನೀರು ಬಿಡಬೇಕು. ಈ ಕಾರ್ಯ ಆಗುತ್ತಿಲ್ಲ.

**ಆರೋಗ್ಯ, ಶಿಕ್ಷಣ, ಶೌಚಾಲಯ ಮತ್ತು ನಿಂಬೆಗಳ ಸಮಸ್ಯೆ ಕುರಿತು ಇಲಾಖೆಯ ಮುಖ್ಯಸ್ಥರ ಜೊತೆಗೆ ಚರ್ಚಿಸಿ ಸಮಸ್ಯೆ ಬಗೆ ಹರಿಸಲು ಇಲ್ಲವೆ ಮೇಲಾಧಿಕಾರಿಗಳ ಗಮನಕ್ಕೆ ತರಲು ತಿಳಿಸಿದ್ದೇನೆ.**

**–ಚಿದಾನಂದ ಗುರುಸ್ವಾಮಿ**

**ಕಂದಾಯ ಉಪವಿಬಾಗಾಧಿಕಾರಿಗಳು ಇಂಡಿ**

ತಾಲೂಕಿನಲ್ಲಿ ಇಂಡಿಯಲ್ಲಿ ಸಾರ್ವಜನಿಕ ಆಸ್ಪತ್ರೆ ಇದೆ. ಎರಡು ಸಮುದಾಯ ಆರೋಗ್ಯ ಕೇಂದ್ರಗಳಿವೆ. 14 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ. ಎಲ್ಲ ಕಡೆಗೂ ವೈದ್ಯರ ಕೊರತೆ ಇದೆ. ಅದಲ್ಲದೆ ಔಷದ ಕೊರತೆ, ಸರಿಯಾದ ಉಪಕರಣಗಳಿಲ್ಲ, ಗರ್ಭಿಣಿಯರಿಗೆ ಹೆರಿಗೆಯ ಸರಿಯಾದ ವ್ಯವಸ್ಥೆ ಇಲ್ಲ, ಇಂಡಿಯ ಸಾರ್ವಜನಿಕ ಆಸ್ಪತ್ರೆಯಲ್ಲಿಯೇ ಸಿಜರಿನ್ ಮತ್ತು ಹೆರಿಗೆ ತಜ್ಞರಿಲ್ಲ, ಇಲ್ಲಿಂದ ಹೆರಿಗೆಗೆ ಖಾಸಗಿ ಅಥವಾ ಸೋಲಾಪುರ ಅಥವಾ ವಿಜಯಪುರಕ್ಕೆ ಹೋಗುವ ಅನಿವಾರ್ಯತೆ ಇದೆ. ಇನ್ನೂ ಹಳ್ಳಿ ಮಹಿಳೆಯರ ಗೋಳು ಹೇಳತಿರದು. ನೀರಿನ ವ್ಯವಸ್ಥೆ ಸ್ವಚ್ಛತೆ ವ್ಯವಸ್ಥೆ ಯಾವದೂ ಸರಿ ಇಲ್ಲ.

ತಾಲೂಕಿನಲ್ಲಿ ರಸ್ತೆಗಳ ಪರಿಸ್ಥಿತಿ ಹೇಳತೀರದು. ಇಂಡಿ ಆಲಮೇಲ, ಭ್ಯುಯಾರ ಚಿಕ್ಕಮಣೂರ, ಇಂಡಿ ಇಂಗಳಗಿ, ಇಂಡಿ ರೂಗಿ, ಹಂಜಗಿ ನಿಂಬಾಳ ಸೇರಿದಂತೆ ಅನೇಕ ಕಡೆ ರಸ್ತೆ ಪರಿಸ್ಥಿತಿ ಹೇಳ ತೀರದು.

ಸರಕಾರಿ ಶಾಲೆಗಳ ಪರಿಸ್ಥಿತಿ ತೀರ ಹದೆಗೆಟ್ಟಿದೆ. ಇಂಡಿ ಪಟ್ಟಣದಲ್ಲಿಯೇ 6 ಸರಕಾರಿ ಶಾಲೆಗಳಿದ್ದು ಐದರಲ್ಲಿ ಕೋಣೆಗಳು ಬಿದ್ದಿವೆ, ಛಾವಣಿ ಬಿಳುತ್ತದೆ. ಯಾವದೂ ವ್ಯವಸ್ಥೆ ಸರಿ ಇಲ್ಲ. ಇಂತಹ ತಾಲೂಕಿನಲ್ಲಿ ಐವತ್ತು ಹೆಚ್ಚು ಶಾಲೆಗಳಲ್ಲಿ ಕೋಣೆ ವ್ಯವಸ್ಥೆ ಇಲ್ಲ. 38 ಕಡೆ ಶೌಚಾಲಯ, 41 ಕಡೆ ಆಟದ ಮೈದಾನವಿಲ್ಲ, ಶಿಕ್ಷಕರ ಕೊರತೆ ಸೇರಿದಂತೆ ಯಾವದೂ ವ್ಯವಸ್ಥೆ ಸರಿಯಿಲ್ಲ.

ಇನ್ನು ಸ್ವಾತಂತ್ರ್ಯ ಬಂದು 75 ಕ್ಕೂ ಹೆಚ್ಚು ವರ್ಷ ಕಳೆದರೂ ಮಹಿಳೆಯರಿಗೆ ಮತ್ತು ಪುರುಷರಿಗೆ ಶೌಚಾಲಯ ವ್ಯವಸ್ಥೆ ಇಲ್ಲ. ತಾಲೂಕಿನ ಸ್ವಚ್ಛ ಭಾರತ ಅಭಿಯಾನ ಸೇರಿದಂತೆ ಅನೇಕ ಸರಕಾರದ ಯೋಜನೆಗಳು ಬಂದಿವೆ. ಆದರೂ ಸಾರ್ವಜನಿಕರಿಗೆ ಬಯಲು ಶೌಚಾಲಯವೇ ಗತಿ ಎಂಬಂತಾಗಿದೆ. ವಿದ್ಯುತ್ ಇಲಾಖೆಯಿಂದ ರೈತರಿಗೆ ರಾತ್ರಿ ಮೂರು ತಾಸು ಹಗಲು ನಾಲ್ಕು ತಾಸು ವಿದ್ಯುತ ನೀಡುತ್ತಾರೆ. ಬೆಳಿಗ್ಗೆ ಮೂರು ಗಂಟೆಗೆ ರೈತರು ತಮ್ಮ ಹೊಲಗಳಿಗೆ ನೀರು ಬಿಡಬೇಕು. ಕೃಷಿ, ಕಂದಾಯ, ತೋಟಗಾರಿಗೆ, ಆರೋಗ್ಯ, ಶಿಕ್ಷಣ ನಗರಸಭೆ, ಸಬ್ ರಜಿಸ್ಟಾರರು, ಭೂ ದಾಖಲೆ ಇಲಾಖೆ ಸೇರಿದಂತೆ ಅನೇಕ ಇಲಾಖೆಗಳಲ್ಲಿ ಖಾಯಂ ನೌಕರರಿಲ್ಲ. ಸಿಬ್ಬಂದಿ ಕೊರತೆ ಎದ್ದು ಕಾಣುತ್ತಿದೆ. ಇದೂ ಕೂಡ ಆಡಳಿತದ ಹಿನ್ನೆಡೆಗೆ ಪ್ರಮುಖ ಕಾರಣವಾಗುತ್ತಿದೆ.

ತಾಲೂಕಿನಲ್ಲಿ ಕಬ್ಬು ಕಟಾವು ಮಾಡಲು ಟೋಳಿಗಳು ಒಂದು ಎಕರೆಗೆ ಐದು ಸಾವಿರ ರೂ ಹಣ ಬೇಡುತ್ತಾರೆ. ಅದಕ್ಕೆ ಕಾರ್ಖಾನೆಯವರಿಂದಾಗಲೀ ಆಡಳಿತ ವ್ಯವಸ್ಥೆಯಿಂದಾಗಲೀ ಯಾವದೇ ನಿಯಂತ್ರಣವಿಲ್ಲ, ಮತ್ತು ಕಾರ್ಖಾನೆಯವರು ತೂಕದಲ್ಲಿ ಮೋಸ ಮಾಡುತ್ತಾರೆ. ಇದರಿಂದ ರೈತ ಮೋಸ ಹೋಗುತ್ತಿದ್ದಾನೆ. ಇದಕ್ಕೆ ನಿಯಂತ್ರಣವಿಲ್ಲ.

ಇಂಡಿಯಲ್ಲಿ ಸುಮಾರು 25 ಕ್ಕೂ ಹೆಚ್ಚು ಜಾತಿಗಳ ಸ್ಮಶಾನ ಇದೆ. ಆದರೆ ಯಾವದೇ ವ್ಯವಸ್ಥೆ ಇಲ್ಲ. ಮಳೆ ಮತ್ತು ಬಿಸಿಲಲ್ಲಿಯೇ ನಿಂತು ಜನರು ಅಂತಿಮ ಕ್ರಿಯೆ ಮಾಡುತ್ತಾರೆ. ನೆರಳಿನ ನೀರಿನ ವ್ಯವಸ್ಥೆ ಇಲ್ಲ. ನಗರಸಭೆಯವರು ವಿದ್ಯುತ್ ದಿಂದ ಸಂಸ್ಕಾರ ಮಾಡುವ ವ್ಯವಸ್ಥೆ ಮಾಡಬೇಕಾಗಿದೆ.

ಇಂಡಿಯ ನಗರದ ದಂಡೆಯಲ್ಲಿ ಸ್ಟೇಷನ್ ರಸ್ತೆಯಲ್ಲಿ ಹಳ್ಳ ಇದೆ. ಹಳ್ಳದ ಮೊದಲು ಹಿರೆ ಇಂಡಿ ಕೆರೆ ಇದೆ. ಈಗ ಹಳ್ಳವನ್ನು ಸಂಪೂರ್ಣ ಒತ್ತು ಮಾಡಿ ಅಲ್ಲಿ ಅನೇಕ ಅಂಗಡಿಗಳನ್ನು ನಿರ್ಮಿಸಿದ್ದಾರೆ. ಮತ್ತು ನಗರಸಭೆಯ ಒಳಚರಂಡಿ ನೀರು ಹಳ್ಳಕ್ಕೆ ಮತ್ತು ಚರಂಡಿ ನೀರು ಹಳ್ಳಕ್ಕೆ ಬಿಡುತ್ತಾರೆ. ಹೀಗಾಗಿ ಹಳ್ಳದಲ್ಲಿ ಗಲೀಜ ನೀರು ಹರಿಯುತ್ತದೆ. ಹೀಗೆ ಅನೇಕ ಸಮಸ್ಯೆಗಳಿಂದ ಆವೃತವಾಗಿವೆ.

# ಬೆಳೆ ವಿಮೆ ಮಾಡಿಸಲು ರೈತರಿಗೆ ಜಿಲ್ಲಾಧಿಕಾರಿ ಮನವಿ



**ವಿಜಯಪುರ:** 2026–27 ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ವಿಮೆ ಕುರಿತು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಗೆ ಸರಕಾರ ಅಧಿಸೂಚನೆ ಹೊರಡಿಸಿದ್ದು, ಜಿಲ್ಲೆಯಲ್ಲಿ ವಿವಿಧ ಬೆಳೆಗಳಿಗೆ ರೈತರು ಬೆಳೆ ವಿಮೆ ಮಾಡಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ.ಅವರು ತಿಳಿಸಿದ್ದಾರೆ.

ತಾಲ್ಲೂಕುವಾರು ಹಾಗೂ ಗ್ರಾಮ ಪಂಚಾಯಿತಿವಾರು ಅಧಿಸೂಚಿಸಲಾಗಿರುವ ವಿವಿಧ ಬೆಳೆಗಳ ವಿಮಾ ಮೊತ್ತ, ವಿಮಾ ಕಂತು ಮತ್ತು ನೋಂದಣಿಯ ಅಂತಿಮ ದಿನಾಂಕದ ಮಾಹಿತಿಯನ್ನು ರೈತ ಸಂಪರ್ಕ ಕೇಂದ್ರ ಹಾಗೂ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಕಚೇರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದವರು ತಿಳಿಸಿದ್ದಾರೆ. ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ,ಬೆಳೆ ಸಾಲ ಪಡೆದ ರೈತರು,ಸಾಲ ನೀಡಿದ ಬ್ಯಾಂಕ್ ಗಳಲ್ಲಿ ವಿಮೆ ನೋಂದಾಯಿಸಬೇಕು. ಜೊತೆಗೆ ಬೆಳೆ ಸಾಲ ಪಡೆಯದ ರೈತರು ನೋಂದಣಿಗಾಗಿ ಅರ್ಜಿ ಜೊತೆ ಕೃಷಿ ಸಾಲ ಪಡೆಯದಿರುವ ಕುರಿತು ಕಡ್ಡಾಯವಾಗಿ ಸ್ವಯಂ ಘೋಷಣೆ ಪತ್ರ ಲಗತ್ತಿಸಬೇಕು.


ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಆಧಾರ ಸಂಖ್ಯೆ ಜೋಡಿಸಿದ ಬ್ಯಾಂಕ್ ಪಾಸ್ ಬುಕ್ ಮತ್ತು ಆಧಾರ್ ಸಂಖ್ಯೆಯೊಂದಿಗೆ ಡಿಸಿಸಿ/ಇತರೆ ಬ್ಯಾಂಕ, ಗ್ರಾಮ್ ಓನ್ ಮತ್ತು ಸಿ.ಎಸ್.ಸಿ ಕೇಂದ್ರಳಿಗೆ ಸಂಪರ್ಕಿಸಬಬಹುದಾಗಿದೆ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿ ಮಟ್ಟದ ಬೆಳೆಗಳು (ತೊಗರಿ ಮಳೆಯಾಶ್ರಿತ), ತೊಗರಿ (ನೀರಾವರಿ), ಮುಸುಕಿನ ಜೋಳ (ನೀರಾವರಿ),ಸಜ್ಜೆ (ಮಳೆಯಾಶ್ರಿತ) ವಿಮಾ ಕಂತನ್ನು ಜು.31 ರೊಳಗಾಗಿ ಪಾವತಿಸಬೇಕು ಎಂದವರು ತಿಳಿಸಿದ್ದಾರೆ.

ಹೋಬಳಿ ಮಟ್ಟಕ್ಕೆ ಬೆಳೆಗಳು ಈರುಳ್ಳಿ (ನೀರು) ಹಾಗೂ ಹತ್ತಿ (ಮಳೆ ಆಶ್ರಿತ) ಬೆಳೆಗಳಿಗೆ ವಿಮೆ ಕಂತನ್ನು ಆಗಸ್ಟ್ 14 ರೊಳಗಾಗಿ ತುಂಬಬಹುದಾದರೆ, ಇನ್ನುಳಿದ ಬೆಳೆಗಳಿಗೆ ಜು.31 ರೊಳಗಾಗಿ ವಿಮಾ ಕಂತು ತುಂಬಬೇಕು ಎಂದು ತಿಳಿಸಿದ್ದಾರೆ.

# ಕೇಂದ್ರವೇ ಮಾಡೋದಾದ್ರೆ ರಾಜ್ಯದ ಪಾತ್ರವೇನು? ಸಂಸದ ಜಿಗಜಿಣಗಿ ಪ್ರಶ್ನೆ

**ವಿಜಯಪುರ:** ರಾಜ್ಯದಲ್ಲಿ ತೀವ್ರ ಬರಪರಿಸ್ಥಿತಿ ಎದುರಾಗಿದ್ದು ಬರಘೋಷಣೆಯಾಗದೆ, ಸಮೀಕ್ಷೆ ನಡೆಸದೇ, ಪ್ರಸ್ತಾವನೆ ಸಲ್ಲಿಸದೇ ಪರಿಹಾರಕ್ಕಾಗಿ ನಿರಂತರವಾಗಿ ಕೇಂದ್ರದತ್ತ ಬೊಟ್ಟು ಮಾಡುತ್ತಿರುವ



ರಾಜ್ಯ ಕಾಂಗ್ರೆಸ್ ಸರ್ಕಾರದ ನಾಯಕರ ವಿರುದ್ಧ ಸಂಸದ ರಮೇಶ ಜಿಗಜಿಣಗಿ ಹರಿಹಾಯ್ದಿದ್ದಾರೆ.

ಬರ ಪರಿಹಾರಕ್ಕಾಗಿ ಈಗ ಕೇಂದ್ರಕ್ಕೆ ಪತ್ರ ಬರೆಯುವ ಕುರಿತು ಹೇಳಿಕೆ ನೀಡುತ್ತಿರುವ ಕಾಂಗ್ರೆಸ್ ನಾಯಕರು, ಮೊದಲು ತಮ್ಮ ಜವಾಬ್ದಾರಿ ಏನು ಅಂತ ಯೋಚಿಸಬೇಕು. ಎಲ್ಲದಕ್ಕೂ ಕೇಂದ್ರವೇ ಮಾಡಬೇಕು ಅಂದ್ರೆ ರಾಜ್ಯ ಸರ್ಕಾರದ ಪಾತ್ರವೇನು?" ಎಂದು ಪ್ರಶ್ನಿಸಿದ್ದಾರೆ.

ಬರ ಪರಿಸ್ಥಿತಿ ನಿಭಾಯಿಸುವುದು, ಪರಿಹಾರ ಕಾರ್ಯಗಳನ್ನು ಚುರುಕುಗೊಳಿಸುವುದು ಮತ್ತು ರೈತರಿಗೆ ತಕ್ಷಣದ ನೆರವು ನೀಡುವುದು ರಾಜ್ಯ ಸರ್ಕಾರದ ಪ್ರಾಥಮಿಕ ಜವಾಬ್ದಾರಿ. ಆದರೆ ರಾಜ್ಯ ಸರ್ಕಾರ ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಪ್ರತಿ ಬಾರಿ ಕೇಂದ್ರದ ಮೇಲೆ ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

# ತಾಲೂಕು ಕನಸು ನನಸಾಗಿಸುವುದೇ ದೇಸಾಯಿಯವರಿಗೆ ಸಲ್ಲಿಸುವ ನಮನ



**ಕೆಂಭಾವಿ:** ತಾಲೂಕು ಹೋರಾಟ ಸಮಿತಿಯ ಅಧ್ಯಕ್ಷ, ಹದನೂರಿನ ನಿಂಗನಗೌಡ ದೇಸಾಯಿಯವರ ಜೀವಿತಾವಧಿಯ ಕನಸನ್ನು ನನಸು ಮಾಡಿದಾಗ ಮಾತ್ರ ಅವರ ಆತ್ಮಕ್ಕೆ ಶಾಂತಿ ಸಿಗುತ್ತದೆ ಎಂದು ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಶಂಕರಣ್ಣ ವಣಿಕ್ಯಾಳ ಹೇಳಿದರು.

ಪಟ್ಟಣದ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ ದಿವಂಗತ ನಿಂಗನಗೌಡ ದೇಸಾಯಿ ಅವರ ಸ್ಮರಣಾರ್ಥ ಶುಕ್ರವಾರ ಆಯೋಜಿಸಿದ್ದ 'ನುಡಿ ನಮನ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಕಳೆದ ಮೂರ್ನಾಲ್ಕು ದಶಕಗಳಿಂದ ಕೆಂಭಾವಿಯನ್ನು ತಾಲೂಕು ಕೇಂದ್ರವಾಗಿಸಲು ಹಗಲಿರುಳು ಶ್ರಮಿಸಿದ ಧೀಮಂತ ನಾಯಕ ನಿಂಗನಗೌಡ ದೇಸಾಯಿ ಅವರು, ತಾಲೂಕು ಹೋರಾಟ ಸಮಿತಿಯ ರಥವನ್ನು ಇಲ್ಲಿಯವರೆಗೆ ತಂದು ನಿಲ್ಲಿಸಿದ್ದಾರೆ. ಮುಂದಿನ ದಿನಗಳಲ್ಲಿ ಕೆಂಭಾವಿ ತಾಲೂಕು ಹೋರಾಟ ಸಮಿತಿಗೆ ಮರುಜೀವ ತುಂಬುವ ಮೂಲಕ ಕೆಂಭಾವಿ ತಾಲೂಕು ಮಾಡುವ ಕನಸನ್ನು ನನಸಾಗಿಸಲು ನಾವೆಲ್ಲರೂ ಒಟ್ಟಾಗಿ ಮುಂದಾಗಬೇಕಿದೆ ಎಂದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಷ.ಬ್ರ. ಚನ್ನಬಸವ ಶಿವಾಚಾರ್ಯರು ಆಶೀರ್ವಚನ ನೀಡಿದರು. ಲಿಂಗನಗೌಡ ಮಾಲಿ ಪಾಟೀಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜಿ.ಪಂ. ಮಾಜಿ ಅಧ್ಯಕ್ಷ ಸಿದ್ದನಗೌಡ ಪೊಲೀಸ್ ಪಾಟೀಲ್, ಡಿಸಿಸಿ ಬ್ಯಾಂಕ್ ನಿಕಟಪೂರ್ವ ನಿರ್ದೇಶಕ ಬಾಪುಗೌಡ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸನಗೌಡ ಹೊಸಮನಿ ಯಾಳಗಿ, ನಿಂಗನಗೌಡ ಹಾದಿಮನಿ,ಹಳ್ಳೆಪ್ಪಹವಾಲ್ದಾರ್,ಮಹಿಪಾಲರೆಡ್ಡಿಡಿಗ್ಗಾವಿ,ಸಂಜೀವರಾವ್ ಕುಲಕರ್ಣಿ, ಡಿ.ಸಿ. ಪಾಟೀಲ್, ಪ್ರಭುದೇವ ಹದನೂರು ಸೇರಿದಂತೆ ಅನೇಕ ದೇಸಾಯಿಯವರ ಹೋರಾಟವನ್ನು ಸ್ಮರಿಸಿ ಗಣ್ಯರು ನುಡಿ ನಮನ ಸಲ್ಲಿಸಿ ಮಾತನಾಡಿದರು. ಇದೇ ವೇಳೆ ಸುತ್ತಮುತ್ತಲಿನ ಗ್ರಾಮಸ್ಥರು, ನೂರಾರು ಅಭಿಮಾನಿಗಳು,ಕುಟುಂಬದ ಸದಸ್ಯರು,ತಾಲೂಕು ಹೋರಾಟ ಸಮಿತಿಯ ಸದಸ್ಯರು ಹಾಗೂ ವಿವಿಧ ಸಂಘಟನೆಗಳ ಪ್ರಮುಖರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೂ ಮುನ್ನ ದಿವಂಗತ ನಿಂಗನಗೌಡ ದೇಸಾಯಿ ಹದನೂರು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ನಮನ ಅರ್ಪಿಸಲಾಯಿತು. ಬಳಿಕ ಮೃತರ ಆತ್ಮಕ್ಕೆ ಶಾಂತಿ ಸಿಗಲೆಂದು ಎರಡು ನಿಮಿಷಗಳ ಕಾಲ ಮೌನಾಚರಣೆ ಮಾಡಲಾಯಿತು.

# ಮಾಹಿತಿ ನೀಡದ ಪಿ.ಆರ್.ಐ.ಡಿ ಅಭಿಯಂತರರಿಗೆ ದಂಡ ವಿಧಿಸಿದ ಮಾಹಿತಿ ಆಯೋಗ..!

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮಾಹಿತಿ ನೀಡಲು ನಿರ್ಲಕ್ಷ್ಯ ತೋರಿ ಆಯೋಗದ ವಿಚಾರಣೆಗಳಿಗೆ ಗೈರಾದ ಪಂಚಾಯತ ರಾಜ್ ಇಂಜನೀಯಗ್ ಕಾಳಗಿ ಉಪ ವಿಭಾಗದ ಸಹಾಯಕ ಕಾರ್ಯ ಪಾಲನಾ ಅಭಿಯಂತರ ರಾಜಕುಮಾರಗೆ ಎರಡು ಪ್ರತ್ಯೇಕ ಪ್ರಕರಣದಲ್ಲಿ 20 ಸಾವಿರ ದಂಡ ವಿಧಿಸಲಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠದ ಪ್ರಕಟಣೆ ತಿಳಿಸಿದೆ.

2021–22 ರ ಕಾಳಗಿ ತಾಲೂಕಿನ ಕೋಡ್ಲಿ ಗ್ರಾಮದ ಶ್ರೀನಾಥ ಎನ್ನುವರು ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆಯಡಿ ಆಯ್ಕೆ ಯಾದ ಕೋಡ್ಲಿ ಗ್ರಾಮ ಪಂಚಾಯತ ವ್ಯಾಪ್ತಿಯ ಗ್ರಾಮಗಳ ಪ್ರಾಥಮಿಕ ಶಾಲೆ ಛಾವಣಿ ದುರಸ್ಥಿ ಗಕಾಮಗಾರಿಯ ಅನುದಾನದ ವಿವರ, ಬಿಲ್ ಪಾವತಿಸೇರಿ ಇದಕ್ಕೆ ಸಂಬಂಧಿಸಿದ ಮಾಹಿತಿ ನೀಡುವಂತೆ ಶ್ರೀನಾಥ ಕೋಡ್ಲಿ ಎನ್ನುವರು ದಿನಾಂಕದ:26.02.2024 ರಂದು ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲನಾ ಅಭಿಯಂತರ ಕಛೇರಿ ಪಂಚಾಯತ್ ರಾಜ್ ಇಂಜನೀಯರಿಂಗ್ ಕಾಳಗಿ ಉಪ ವಿಭಾಗಕ್ಕೆ ಮಾಹಿತಿ ಹಕ್ಕು ಅಧಿನಿಯ 2005ರ ಕಲಂ 6(1) ರಲ್ಲಿ ಎರಡು ಪ್ರತ್ಯೇಕ ಅರ್ಜಿ ಸಲ್ಲಿಸಿದ್ದರು.

ಆದರೆ, ಮೇಲ್ಮನವಿದಾರರು ಕೋರಿದ ಮಾಹಿತಿ ನಿಗಧಿತ ಅವಧಿಯಲ್ಲಿ ನೀಡದ ಕಾರಣ ಮೇಲ್ಮನವಿದಾರ ಶ್ರೀ ನಾಥ ಕೋಡ್ಲಿ ಮಾಹಿತಿ ಹಕ್ಕು ಅಧಿನಿಯಮ



2005 ಕಲಂ 19(1) ರಡಿ ಪ್ರಥಮ ಮೇಲ್ಮನವಿ ಪ್ರಾಧಿಕಾರವಾದ ಪಂಚಾಯತ ರಾಜ್ ಕಲ್ಬುರ್ಗಿ ವಿಭಾಗದ ಕಾರ್ಯಪಾಲನಾ ಅಭಿಯಂತರಿಗೆ 15.04.2024 ರಂದು ಮೇಲ್ಮನವಿ ಅರ್ಜಿ ಸಲ್ಲಿಸಿದ್ದರು. ಆದರೂ ಮೇಲ್ಮನವಿದಾರರಿಗೆ ಕೋರಿದ ಮಾಹಿತಿ ದೊರೆಯೇದ ಕಾರಣ ಮೇಲ್ಮನವಿದಾರ ಶ್ರೀನಾಥ ಕೋಡ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 19(3) ರಡಿ ಕರ್ನಾಟಕ ಮಾಹಿತಿ ಆಯೋಗ ಕಲ್ಬುರ್ಗಿ ಪೀಠದಲ್ಲಿ ಮುಂದೆ ದ್ವೀತಿಯ ಮೇಲ್ಮನವಿ ದಿನಾಂಕ:06.07.2024 ರಂದು ಸಲ್ಲಿಸಿದ್ದರು. ಸದರಿ ಪ್ರಕರಣ ಕರ್ನಾಟಕ ಮಾಹಿತಿ ಆಯೋಗದ ವಿಚಾರಣೆಗೆ ಕೈಗೆತ್ತಿಕೊಂಡ ಕಲ್ಬುರ್ಗಿ ಪೀಠದ ಆಯುಕ್ತರಾದ ಶ್ರೀ ಬಿ. ವೆಂಕಟ ಸಿಂಗ್ ಅವರು ಪ್ರತಿವಾದಿಗಳು ವಿಚಾರಣೆಗೆ ಹಾಜರಾಗುವಂತೆ ಸಾರ್ವಜನಿಕ ಮಾಹಿತಿ ಅಧಿಕಾರಿಯಾದ ರಾಜ ಕುಮಾರ ಸಹಾಯಕ ಕಾರ್ಯಪಾಲನಾ ಅಭಿಯಂತರರಿಗೆ ನೀಡಿದ ನೋಟಿಸಗೆ ಸ್ವಪಂದಿಸಿದೇ ದಿನಾಂಕ:24.01.2026, ದಿನಾಂಕ24.02.2026 ಮತ್ತು ದಿನಾಂಕ:15.07.2026 ರಂದು ನಡೆದ ವಿಚಾರಣೆಗೆ ಗೈರು ಹಾಜರಾಗಿದಲ್ಲದೆ ಮೇಲ್ಮನವಿದಾರರು ಕೋರಿದ ಮಾಹಿತಿ ನೀಡದೆ ನಿರ್ಲಕ್ಷ್ಯ ಮಾಡಿದ ಸಾರ್ವಜನಿಕ ಮಾಹಿತಿ ಅಧಿಕಾರಿಯಾದ ರಾಜಕುಮಾರ ಮಾಹಿತಿ ನೀಡಲು ನಿರ್ಲಕ್ಷ್ಯ ಹಾಗೂ ವಿಚಾರಣೆಗೆ ಗೈರು ಹಾಜರಾಗುವ ಮೂಲಕ ಆಯೋಗದ ಆದೇಶ ಪಾಲನೆ ಮಾಡದ ಕಾರಣ ಇವರಿಗೆ ಎರಡು ಪ್ರತ್ಯೇಕ ಪ್ರಕರಣದಲ್ಲಿ ತಲಾ 10 ಸಾವಿರ ದಂತೆ ಒಟ್ಟು 20 ಸಾವಿರ ದಂಡ ವಿಧಿಸಿ ಕಲ್ಬುರ್ಗಿ ಪೀಠ ರಾಜ್ಯ ಮಾಹಿತಿ ಆಯುಕ್ತರಾದ ಶ್ರೀ ಬಿ. ವೆಂಕಟ ಸಿಂಗ್ ಆದೇಶ ಮಾಡಿದ್ದಾರೆ.

ಮುಂದುವರೆದು, ಮೇಲ್ಮನವಿದಾರರಿಗೆ ಆಯೋಗದ ವಿಧಿಸಿದ ದಂಡ ಪಾವತಿಸಿ ಮುಂದಿನ ವಿಚಾರಣೆಗೆ ಹಾಜರಾಗಿ ರಶೀದಿ ಸಲ್ಲಿಸಬೇಕು ಹಾಗೂ ಮೇಲ್ಮನವಿದಾರರು ಕೋರಿದ ಮಾಹಿತಿ ನೀಡಿ ಅವರಿಗೆ ನೀಡಿದ ಮಾಹಿತಿ ಮತ್ತು ಸ್ವೀಕೃತಿ ಪತ್ರ ಆಯೋಗಕ್ಕೆ ಸಲ್ಲಿಸಿ, ಮುಂದಿನ ವಿಚಾರಣೆ ವೇಳೆ ಖುದ್ದಾಗಿ ಹಾಜರಾಗಲು ರಾಜಕುಮಾರ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲನಾ ಅಭಿಯಂತರರಿಗೆ ಮಾಹಿತಿ ಹಕ್ಕು ಅಧಿನಿಯಮ ಕಲಂ 18(3) ನಲ್ಲಿ ಅದೇಶಿಸಿ ತಪ್ಪಿದಲ್ಲಿ ಮಾಹಿತಿ ಹಕ್ಕು ಅಧಿನಿಯಮ ಕಲಂ 20(2) ರಲ್ಲಿ ಅವರಿಗೆ ಕೆ.ಸಿ.ಎಸ್.ಆರ್.ರಡಿ ಅನ್ವಯಿಸುವ ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದೆಂದು ಎಚ್ಚರಿಕೆ ನೀಡಲಾಗಿದೆ.

ಮೇಲ್ಮನವಿದಾರರ ಕೋರಿದ ಮಾಹಿತಿ ಕೊಡಿಸಲು ಮತ್ತು ಪ್ರತಿವಾದಿ ಗೆ ವಿಧಿಸಿದ ದಂಡ ಪಾವತಿಗೆ ಕ್ರಮವಹಿಸಲು ಪ್ರಥಮ ಮೇಲ್ಮನವಿ ಪ್ರಾಧಿಕಾರವಾದ ಪಂಚಾಯತ್ ರಾಜ್ ಇಂಜನೀಯರಿಂಗ್ ವಿಭಾಗ ಕಾರ್ಯಪಾಲನಾ ಅಭಿಯಂತರಾದ ರಜನಿ ಕಾಂತ ಅವರಿಗೆ ಮಾಹಿತಿ ಹಕ್ಕು ಅಧಿಯಮ 18(3) ರಡಿ ನಿದೇಶನ ನೀಡಿ ತಪ್ಪಿದಲ್ಲಿ ಮಾಹಿತಿ ಹಕ್ಕು ಅಧಿಇಯಮ ಕಲಂ 20(2) ರಡಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡುವುದಾಗಿ ಎಚ್ಚರಿಕೆ ನೀಡಿದೆ.

ಸಹಾಯಕ ಕಾರ್ಯಪಾಲನಾ ಅಭಿಯಂತರರು ಮೇಲ್ಮನವಿದಾರರು ಕೋರಿದ ಮಾಹಿತಿ ನೀಡಲು ನಿರ್ಲಕ್ಷ್ಯ ಮಾಡಿದಲ್ಲದೇ ಆಯೋಗದ ವಿಚಾರಣೆಗೆ ಗೈರು ಹಾಜರಾಗಿರುವ ರಾಜ ಕುಮಾರ, ಸಾರ್ವಜನಿಕ ಮಾಹಿತಿ ಅಧಿಕಾರಿ ಅಭಿಯಂತರಿಗೆ ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರ ಮತ್ತು ಕಾರ್ಯಪಾಲನಾ ಅಭಿಯಂತ ರಜನಿ ಕಾಂತ್ ಅವರು ಮುಂದಿನ ವಿಚಾರಣೆಗೋಳ ಗಾಗಿ ದಂಡ ಪಾವತಿಸಿ ಹಾಗೂ ಮೇಲ್ಮನವಿದಾರರಿ ಗೆ ಮಾಹಿತಿ ನೀಡಿ ಮುಂದಿನ ವಿಚಾರಣೆಗೆ ಮೇಲಿನ ಇಬ್ಬರು ಅಧಿಕಾರಿಗಳು ಖುದ್ದಾಗಿ ರಾಜರಾಗಲು –ಸೂಚನೆ ನೀಡುವಂತೆ ಕಲ್ಬುರ್ಗಿ ಜಿ ಪಂ ಮುಖ್ಯ ಕಾರ್ಯನಿರ್ವಕಾಧಿಕಾರಿ ರಾಹುಲ್ ಶರಣಪ್ಪ ಸಂಕನೂರು ಅವರಿಗೆ ಮಾಹಿತಿ ಹಕ್ಕು ಅಧಿನಿಯಮ ಕಲಂ 19(8) ರಲ್ಲಿ ನಿರ್ದೇಶನ ನೀಡಿದೆ.

# ಕೋತಿಗಳ ಹಾವಳಿ: ಅರಣ್ಯ ಇಲಾಖೆ ಕ್ರಮಕ್ಕೆ ಸಾರ್ವಜನಿಕರ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಐತಿಹಾಸಿಕ ಪ್ರವಾಸಿ ತಾಣಗಳಾದ ಆನೆಗುಂದಿ, ಅಂಜನಾದ್ರಿ ಬೆಟ್ಟ, ಪಂಪ ಸರೋವರ ಹಾಗೂ ನವವೃಂದಾವನಕ್ಕೆ ರಾಜ್ಯ ಹಾಗೂ ಹೊರರಾಜ್ಯಗಳಿಂದ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಆಗಮಿಸುತ್ತಿದ್ದಾರೆ. ಆದರೆ ಈ ಮಾರ್ಗಗಳಲ್ಲಿ ಕೋತಿಗಳ ಹಾವಳಿ ಹೆಚ್ಚಾಗಿರುವುದರಿಂದ ವಾಹನ ಸವಾರರು ಹಾಗೂ ಪ್ರವಾಸಿಗರು ಆತಂಕದಲ್ಲೇ ಸಂಚರಿಸುವಂತಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಕೆಡಿಎಸ್ಎಸ್) ರಾಜ್ಯ ಸಂಘಟನಾ ಸಂಚಾಲಕ ಹಂಪೇಶ್



ಜಿ. ಅರುಗೋಲ್ ಹೇಳಿದರು.

ಮುಖ್ಯ ರಸ್ತೆಗೆ ಹಠಾತ್ತನೆ ಕೋತಿಗಳು ಅಡ್ಡಬರುವುದರಿಂದ ವಾಹನ ಸವಾರರು ಅವುಗಳನ್ನು ರಕ್ಷಿಸಲು ಯತ್ನಿಸುವ ವೇಳೆ ನಿಯಂತ್ರಣ ತಪ್ಪಿ ಅಪಘಾತಗಳು ಸಂಭವಿಸುತ್ತಿವೆ. ಇಂತಹ ಘಟನೆಗಳಲ್ಲಿ ಹಲವರು ಗಾಯಗೊಂಡಿದ್ದು, ಈ ಕುರಿತು ವಿವಿಧ ಪತ್ರಿಕೆಗಳು ಹಾಗೂ ದೃಶ್ಯಮಾಧ್ಯಮಗಳಲ್ಲಿಯೂ ವರದಿಗಳು ಪ್ರಕಟವಾಗಿವೆ ಎಂದು ಅವರು ತಿಳಿಸಿದರು.

ಅರಣ್ಯ ಇಲಾಖೆ ಅಧಿಕಾರಿಗಳು ಕೋತಿಗಳ ಸುರಕ್ಷತೆಗೆ ಸೂಕ್ತ ಕ್ರಮ ಕೈಗೊಳ್ಳುವುದರ ಜೊತೆಗೆ ಅವು ಮುಖ್ಯ ರಸ್ತೆಗೆ ಬಾರದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಜಾರಿಗೊಳಿಸಬೇಕು. ಇದ–ರಿಂದ ಪ್ರಾಣಿಗಳೂ ಸುರಕ್ಷಿತವಾಗಿರುತ್ತವೆ ಹಾಗೂ ವಾಹನ ಸವಾರರ ಜೀವಕ್ಕೂ ಅಪಾಯವಾಗುವುದಿಲ್ಲ ಎಂದು ಅವರು ಆಗ್ರಹಿಸಿದರು.

ಅದೇ ರೀತಿ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸುರಕ್ಷಿತವಾಗಿ ವಾಹನ ಚಲಾಯಿಸುವ ಕುರಿತು ಪೊಲೀಸ್ ಇಲಾಖೆ ನಿರಂತರ ಜಾಗೃತಿ ಮೂಡಿಸಬೇಕು. ಪ್ರವಾಸಿ ಪ್ರದೇಶಗಳಲ್ಲಿ ಎಚ್ಚರಿಕೆ ಫಲಕಗಳನ್ನು ಅಳವಡಿಸುವುದು, ವಾಹನಗಳ ವೇಗ ನಿಯಂತ್ರಣ ಹಾಗೂ ರಸ್ತೆ ಸುರಕ್ಷತಾ ಕ್ರಮಗಳನ್ನು ಇನ್ನಷ್ಟು ಬಲಪಡಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕೆಡಿಎಸ್ಎಸ್ ಕಲ್ಯಾಣ ಕರ್ನಾಟಕ ವಿಭಾಗ ಸಂಚಾಲಕ ಯಮನೂರಪ್ಪನಾಯಕ್ (ಹುಲಿಹೈದರ), ಸೋಮನಾಥ್ ಹೊಸಗೇರಿ,ರಾಘವೇಂದ್ರ ಕೋಟೆಯ್ಯ ಕ್ಯಾಂಪ್ ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

# ದೇಶದಲ್ಲಿ 9,911 ಹೆಚ್ಚುವರಿ ಎಂಬಿಬಿಎಸ್ ಸೀಟು ಸೇರ್ಪಡೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕಳೆದ ಕೆಲವು ದಿನಗಳಿಂದ ಕುತೂಹಲ ಮೂಡಿಸಿದ್ದ 2026–27ನೇ ಸಾಲಿನ 'ನೀಟ್' ಮರು ಪರೀಕ್ಷೆಯ ಫಲಿತಾಂಶ ಹೊರಬಿದ್ದ ಬೆನ್ನಲ್ಲೇ, ವೈದ್ಯಕೀಯ ಶಿಕ್ಷಣ ಆಕಾಂಕ್ಷಿಗಳಿಗೆ ರಾಷ್ಟ್ರೀಯ ವೈದ್ಯಕೀಯ ಆಯೋಗ (ಎನ್ ಎಂಸಿ) ಸಿಹಿ ಸುದ್ದಿಯೊಂದನ್ನು ನೀಡಿದೆ.

ಈ ಮುಂಬರುವ ಶೈಕ್ಷಣಿಕ ವರ್ಷಕ್ಕೆ ದೇಶಾದ್ಯಂತ ಒಟ್ಟು 9,911 ಹೆಚ್ಚುವರಿ ಎಂಬಿಬಿಎಸ್ ಸೀಟುಗಳನ್ನು ಮಂಜೂರು ಮಾಡಲಾಗಿದ್ದು, ಇದರಲ್ಲಿ ನಮ್ಮ ಹೆಮ್ಮೆಯ ಕರ್ನಾಟಕಕ್ಕೆ ಸಿಂಹಪಾಲು ಸಿಕ್ಕಿದೆ.

ರಾಷ್ಟ್ರೀಯ ವೈದ್ಯಕೀಯ ಆಯೋಗವು ಪ್ರಕಟಿಸಿರುವ ಇತ್ತೀಚಿನ ರಾಜ್ಯವಾರು ಸೀಟ್ ಮ್ಯಾಟ್ರಿಕ್ಸ್ ಪ್ರಕಾರ, ಈ ಬಾರಿ ದಾಖಲೆಯ ಪ್ರಮಾಣದಲ್ಲಿ ವೈದ್ಯಕೀಯ ಸೀಟುಗಳ ಸಂಖ್ಯೆ ಹೆಚ್ಚಾಗಿದೆ. ಈ ಹಿಂದೆ ದೇಶದಲ್ಲಿ ಒಟ್ಟು 1,27,028 ಎಂಬಿಬಿಎಸ್ ಸೀಟುಗಳಿದ್ದವು. ಆದರೆ ಈಗ ಹೊಸದಾಗಿ 9,911 ಸೀಟುಗಳನ್ನು ಸೇರ್ಪಡೆಗೊಳಿಸಿರುವುದರಿಂದ, ರಾಷ್ಟ್ರೀಯ ಮಹತ್ವದ ಸಂಸ್ಥೆಗಳನ್ನು ಹೊರತುಪಡಿಸಿ, ದೇಶದ ಒಟ್ಟು 823 ವೈದ್ಯಕೀಯ ಕಾಲೇಜುಗಳಲ್ಲಿನ ಸೀಟುಗಳ



ಸಂಖ್ಯೆ 1,36,939ಕ್ಕೆ ತಲುಪಿದೆ.

ವಿಶೇಷವೆಂದರೆ, ಈ ವರ್ಷ ಒಟ್ಟು 23 ಹೊಸ ವೈದ್ಯಕೀಯ ಕಾಲೇಜುಗಳಿಗೆ ಅನುಮತಿ ಸಿಕ್ಕಿದ್ದು, ಇದರಲ್ಲಿ 21 ಖಾಸಗಿ ಸಂಸ್ಥೆಗಳಾಗಿದ್ದರೆ, ಕೇವಲ 2 ಸರ್ಕಾರಿ ವೈದ್ಯಕೀಯ ಕಾಲೇಜುಗಳಾಗಿವೆ. ಇನ್ನು ಈ ಬಾರಿಯ ನೀಟ್ ಪರೀಕ್ಷೆಯಲ್ಲಿ ದೇಶಾದ್ಯಂತ ಒಟ್ಟು 11.21 ಲಕ್ಷ ವಿದ್ಯಾರ್ಥಿಗಳು ಎಂಬಿಬಿಎಸ್, ಬಿಡಿಎಸ್ ಹಾಗೂ ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹತೆ ಪಡೆದುಕೊಂಡಿದ್ದಾರೆ.

ಹೆಚ್ಚುವರಿ ವೈದ್ಯಕೀಯ ಸೀಟುಗಳ ಸೇರ್ಪಡೆಯು ಹೊಸ ವೈದ್ಯಕೀಯ ಕಾಲೇಜುಗಳನ್ನು ಒಳಗೊಂಡಿದೆ. ಮ್ಯಾಟ್ರಿಕ್ಸ್‌ನಲ್ಲಿ ಈ ವರ್ಷ ಸೇರಿಸಿರುವ 23 ಹೊಸ ಕಾಲೇಜುಗಳ ಪೈಕಿ, 21 ಖಾಸಗಿ ಸಂಸ್ಥೆಗಳಾಗಿದರೆ, ಎರಡು ಮಾತ್ರ ಸರ್ಕಾರಿ ಸಂಸ್ಥೆಗಳಾಗಿವೆ.

**ವೈದ್ಯಕೀಯ ಸೀಟುಗಳ ಹೆಚ್ಚಳದ ಪಟ್ಟಿಯಲ್ಲಿ ಕರ್ನಾಟಕ ಇಡೀ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ. ರಾಜ್ಯಕ್ಕೆ ಈ ಬಾರಿ 1,300 ಹೊಸ ಎಂಬಿಬಿಎಸ್ ಸೀಟುಗಳು ಲಭ್ಯವಾಗಿದ್ದು, ಇದರೊಂದಿಗೆ ಕರ್ನಾಟಕದ ಒಟ್ಟು ವೈದ್ಯಕೀಯ ಸೀಟುಗಳ ಸಂಖ್ಯೆ 15,395ಕ್ಕೆ ಏರಿಕೆಯಾಗಿದೆ.**

ಕರ್ನಾಟಕದ ನಂತರದ ಸ್ಥಾನಗಳಲ್ಲಿ ತಮಿಳುನಾಡು ಮತ್ತು ರಾಜಸ್ಥಾನ ರಾಜ್ಯಗಳಿವೆ. ತಮಿಳುನಾಡು 950 ಹೆಚ್ಚುವರಿ ಸೀಟುಗಳನ್ನು (ಒಟ್ಟು 13,999 ಸೀಟುಗಳು) ಹಾಗೂ ರಾಜಸ್ಥಾನ 900 ಹೆಚ್ಚುವರಿ ಸೀಟುಗಳನ್ನು (ಒಟ್ಟು 8,080 ಸೀಟುಗಳು) ಈ ಬಾರಿ ಪಡೆದುಕೊಂಡಿವೆ.

**ಇತರ ಪ್ರಮುಖ ರಾಜ್ಯಗಳ ಹೊಸ ಸೇರ್ಪಡೆ ಹೀಗಿದೆ:**

- ಪಶ್ಚಿಮ ಬಂಗಾಳ: 825 ಹೊಸ ಸೀಟುಗಳು (ಒಟ್ಟು: 7,200)
- ತೆಲಂಗಾಣ: 810 ಹೊಸ ಸೀಟುಗಳು (ಒಟ್ಟು: 10,250)
- ಉತ್ತರ ಪ್ರದೇಶ: 800 ಹೊಸ ಸೀಟುಗಳು (ಒಟ್ಟು: 14,000)
- ಬಿಹಾರ: 740 ಹೊಸ ಸೀಟುಗಳು (ಒಟ್ಟು: 4,160)
- ಮಹಾರಾಷ್ಟ್ರ: 400 ಹೊಸ ಸೀಟುಗಳು (ಒಟ್ಟು: 13,099)

**ಅತಿ ಹೆಚ್ಚು ಎಂ.ಬಿ.ಬಿ.ಎಸ್ ಸೀಟುಗಳನ್ನು ಹೊಂದಿರುವ ಟಾಪ್ 10 ರಾಜ್ಯಗಳು**

- **ಕರ್ನಾಟಕ – 15,395**
- **ಉತ್ತರ ಪ್ರದೇಶ – 14,000**
- **ತಮಿಳುನಾಡು – 13,999**
- **ಮಹಾರಾಷ್ಟ್ರ – 13,099**
- **ರಾಜಸ್ಥಾನ – 8,080**
- **ಗುಜರಾತ್ – 7,750**
- **ಆಂಧ್ರಪ್ರದೇಶ – 7,465**
- **ಪಶ್ಚಿಮ ಬಂಗಾಳ – 7,200**
- **ಮಧ್ಯಪ್ರದೇಶ – 6,020**

# ಆಸ್ಪತ್ರೆ ಇದ್ದರೂ, ವೈದ್ಯರಿಲ್ಲ: ರೋಗಿಗಳ ಪರದಾಟ


• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಬಡವರಿಗೆ ಉಚಿತ ಚಿಕಿತ್ಸೆ ನೀಡುವ ಉದ್ದೇಶದಿಂದ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಆಸ್ಪತ್ರೆಗಳು ನಿರ್ಮಾಣ ಮಾಡಿವೆ. ಅದರಲ್ಲಿ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ವರ್ಗದವರು ಇಲ್ಲದೆ ರೋಗಿಗಳು ಪರದಾಡುವಂತಾಗಿದೆ ಎನ್ನಲಾಗುತ್ತಿದೆ.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಹಾಗೂ ಸಿಬ್ಬಂದಿ ವರ್ಗದವರು ಆಸ್ಪತ್ರೆಗೆ ನಿಗದಿತ ಸಮಯಕ್ಕೆ ಬಾರದೆ ಸರ್ಕಾರದ ಆದೇಶವನ್ನು ಗಾಳಿಗೆ ತೂರಿ ಕರ್ತವ್ಯ ಲೋಪ ವೆಸಗಿದ್ದಾರೆ ಎಂದು ಕಛೇರಿಗೆ ಬಂದ ಜನರು ಆಗ್ರಹಿಸಿದ್ದಾರೆ.

ವೈದ್ಯರು ಮತ್ತು ಸಿಬ್ಬಂದಿ ವರ್ಗದವರು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1ಗಂಟೆ ವರೆಗೆ ಆಸ್ಪತ್ರೆಯಲ್ಲಿದ್ದು, ರೋಗಿಗಳಿಗೆ ಚಿಕಿತ್ಸೆ ನೀಡಬೇಕು. ಮಧ್ಯಾಹ್ನ 1 ಗಂಟೆಗೆ ಊಟ ಮಾಡಿಕೊಂಡು 1:45ಗಂಟೆಗೆ ಆಸ್ಪತ್ರೆಗೆ ಬಂದು ಸಾಯಂಕಾಲ 4ಗಂ–ಟೆಯ ವರೆಗೆ ರೋಗಿಗಳಿಗೆ ಚಿಕಿತ್ಸೆ ನೀಡಬೇಕು ಎಂದು ಸಮಯದ ಫಲಕವು ಸಹ ಅಳವಡಿಸಲಾಗಿದೆ. ಆದರೆ ಇಲ್ಲಿ ಹೆಸರಿಗೆ ಮಾತ್ರ ಸಮಯದ ಫಲಕ ಅಳವಡಿಸಲಾಗಿದ್ದೆ. ಚಿಟಗುಪ್ಪ ಸಮುದಾಯ ಆರೋಗ್ಯ ಕೇಂದ್ರಕ್ಕೆ ಸುತ್ತಮುತ್ತಲಿನ ಗ್ರಾಮೀಣ ಭಾಗದ ಜನರು, ಹಾಗೂ ನೆರೆಯ ಕಲ್ಬುರ್ಗಿ ಜಿಲ್ಲೆಯ ಚಿಂಚೋಳಿ ತಾಲೂಕಿನ ಗ್ರಾಮಗಳ ಜನರು ಸಹ ಈ ಒಂದು







ಆಸ್ಪತ್ರೆಗೆ ಪ್ರತಿ ದಿನ ಸಾವಿರಾರು ಜನ ರೋಗಿಗಳು ಬರುತ್ತಾರೆ. ಸಮಯಕ್ಕೆ ಸರಿಯಾಗಿ ವೈದ್ಯರು, ಸಿಬ್ಬಂದಿ ವರ್ಗದವರು ಇರದೇ ಇದ್ದುದಕ್ಕಾಗಿ ಆಸ್ಪತ್ರೆಗೆ ಬಂದ ಸಾರ್ವಜನಿಕರು ಎಲ್ಲಿ ಹೋಗಬೇಕೆಂಬುವುದು ತಿಳಿಯುತ್ತಿಲ್ಲ. ಸರ್ಕಾರ ಲಕ್ಷಾಂತರ ರೂಪಾಯಿ ನೀಡಿ ಬೆಡ್ ನೀಡಿದ್ದೆ, ಆದರೆ ಇಲ್ಲಿ ಬೆಡ್ ಗಳು ಸಾರ್ವಜನಿಕರ ಉಪಯೋಗಕ್ಕೆ ಬಳಸದೆ ಧೂಳಿಗೆ ಬಳಸುತ್ತಿದ್ದಾರೋ? ಎಂದು ಕಾಣುತ್ತಿದೆ ಅನ್ನುತ್ತಾರೆ. ಸಂಬಂಧ ಪಟ್ಟ ಮೇಲಾಧಿಕಾರಿಗಳು ಈ ಕಡೆ ಗಮನ ಹರಿಸಿ ಮುಲ್ಲಾಜೀಲ್ಲಾದೇ ಕ್ರಮ ಕೈಗೊಂಡು ಬಡ ಜನರ ನೆರವಿಗೆ ಬರಬೇಕು. ಹಾಗೂ ಸರ್ಕಾರದ ನಿಯಮಗಳು ಪಾಲಿಸದವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ಆಸ್ಪತ್ರೆಗೆ ಬಂದ ಸಾರ್ವಜನಿಕರ ಆಗ್ರಹವಾಗಿದೆ.

**ಈಗಾಗಲೇ ಫಾಕ್ಸ್ ಮತ್ತು ಸಿಸಿ ಕ್ಯಾಮೆರಾ ಮುಖಾಂತರ ಗಮನಿಸುತ್ತಿದ್ದೇನೆ. ಇನ್ನುಂದೆ ಇತರಹ ಆಗದಂತೆ ನೋಡಿಕೊಳ್ಳಲು ಇವತ್ತೇ ಸೂಚಿಸುತ್ತೇನೆ.**

**–ಜಿಲ್ಲಾ ಆರೋಗ್ಯಾಧಿಕಾರಿಗಳು, ಬೀದರ್**

**ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ವರ್ಗದವರು ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಾಗುತ್ತಿಲ್ಲ. ಆಸ್ಪತ್ರೆಯ ಸಮಯಕ್ಕೆ ಬಂದರೂ ಕೂಡ ಇಲ್ಲಿ ವೈದ್ಯರು ಇರಲ್ಲ, ಇಂಜೆಕ್ಷನ್, ಗುಲ್ಕೋಸ್ ಹಚ್ಚಿಕೊಳಲು ಹೋದಾಗ ಅಲ್ಲಿ ನರ್ಸಗಳು ಇಲ್ಲದೆ ತರಬೇತಿ ಪಡೆಯಲು ಬಂದ ವಿದ್ಯಾರ್ಥಿಗಳಿಂದಲೇ ಚಿಕಿತ್ಸೆ ಕೊಡಿಸುತ್ತಿದ್ದಾರೆ.**

**–ಆಸ್ಪತ್ರೆಗೆ ಬಂದ ರೋಗಿ**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)